ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 180 RNI Number : KNKAN/25/A2770 09-07-2026 Thursday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :180 ರಾಯಚೂರು 09-07-2026 ಗುರುವಾರ ಪುಟ 04 ಬೆಲೆ ರೂ.2/- ಮೊ:8660146563

ಎಸ್‌ಐಆರ್ ಪ್ರಕ್ರಿಯೆಯಲ್ಲಿ ರಾಜ್ಯ ಸರಕಾರದ ಪಾತ್ರವಿಲ್ಲ : ಜಿ.ಪರಮೇಶ್ವರ್

ತುಮಕೂರು ,ಜು.8-

ಚುನಾವಣಾ ಆಯೋಗದ ಸೂಚನೆಯಂತೆ ಎಸ್‌ಐಆರ್ ಪ್ರಕ್ರಿಯೆ ನಡೆಯುತ್ತಿದೆ. ಅದರಲ್ಲಿ ಯಾವುದೇ ಗೊಂದಲಗಳಿಲ್ಲ. ಚುನಾವಣಾ ಅಧಿಕಾರಿಗಳೇ ಎಲ್ಲವನ್ನೂ ನೋಡಿಕೊಳ್ಳುತ್ತಾರೆ. ಒಂದು ವೇಳೆ ಅಧಿಕಾರಿಗಳೇನಾದರೂ ತಪ್ಪು ಮಾಡಿದರೆ, ಅವರ ಮೇಲೆ ಕ್ರಮ ತೆಗೆದುಕೊಳ್ಳುತ್ತಾರೆ. ರಾಜ್ಯ ಸರಕಾರ ಇದರಲ್ಲಿ ನೇರ ಭಾಗಿ ಅಲ್ಲ ಎಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಅವರು ತಿಳಿಸಿದರು.

ಇಂದು ತುಮಕೂರು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಿದ್ದ 2026-27ನೇ ಸಾಲಿನ ಗ್ರಾಮ ಪಂಚಾಯಿತಿಯ ಆಡಳಿತಾಧಿಕಾರಿಗಳು ಮತ್ತು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಕಾರ್ಯಾಗಾರ ಕಾರ್ಯಕ್ರಮದ ಬಳಿಕ ಮಾಧ್ಯಮದೊಂದಿಗೆ ಮಾತನಾಡಿದರು.

ಎಸ್‌ಐಆರ್‌ಗೆ ಸಂಬಂಧಿಸಿ ಸರಕಾರವು ಯಾವುದೇ ಸೂಚನೆಗಳನ್ನು ಕೊಟ್ಟಿಲ್ಲ. ಚುನಾವಣಾ ಆಯೋಗ ಕೇಳಿದ ಸಿಬ್ಬಂದಿಯನ್ನು ಮಾತ್ರ ನಾವು ಕೊಟ್ಟಿದ್ದೇವೆ. ಮನೆ ಮನೆಗೆ ತೆರಳಿ ಎನ್ಯೂಮರೇಷನ್ ಫಾರಂ ವಿತರಿಸಿ, ಅದನ್ನು ಮರಳಿ ಸಂಗ್ರಹಿಸುವ ಜವಾಬ್ದಾರಿ ಬಿಎಲ್‌ಒಗಳದ್ದೇ ಆಗಿದೆ. ಒಂದು ವೇಳೆ ಬಿಎಲ್‌ಒಗಳು ಒಂದೇ ಸ್ಥಳದಲ್ಲಿ ಕುಳಿತು ಫಾರಂ ವಿತರಿಸುತ್ತಿದ್ದರೆ, ಅದು ಅವರ ತಪ್ಪು. ಅಂತಹ ಘಟನೆಗಳು ಕಂಡುಬಂದರೆ ಚುನಾವಣಾ ಆಯೋಗ ಸೂಕ್ತ ಕ್ರಮ ಕೈಗೊಳ್ಳಬೇಕು. ಬೇರೆ ಬೇರೆ ರಾಜ್ಯಗಳಲ್ಲಿ ಈ ಪ್ರಕ್ರಿಯೆ ಹೇಗೆ ನಡೆದಿದೆ ಎಂಬುದನ್ನು ಬಿಜೆಪಿಯವರು ಸೂಕ್ಷ್ಮವಾಗಿ ಪರಿಶೀಲಿಸಲಿ ಎಂದು ಹೇಳಿದರು.



ಕೆಲವು ಎಂಎಲ್‌ಎಗಳು ಎನ್ಯೂಮರೇಷನ್ ಫಾರಂನಲ್ಲಿ ತಮ್ಮ ಭಾವಚಿತ್ರಗಳನ್ನು ಅಂಟಿಸಿಕೊಡುತ್ತಿರುವುದು ಕಂಡುಬರುತ್ತಿರುವ ಬಗ್ಗೆ ಮಾಧ್ಯಮದ ಪ್ರಶ್ನೆಗೆ ಉತ್ತರಿಸಿದ ಡಿಸಿಎಂ, ಇದನೆಲ್ಲಾ ಬಿಎಲ್‌ಒಗಳು ನೋಡಿಕೊಳ್ಳಬೇಕು. ಎನ್ಯೂಮರೇಷನ್ ಫಾರಂ ಅನ್ನು ಸ್ವತಃ ಬಿಎಲ್‌ಒಗಳೇ ಮನೆ ಮನೆಗೆ ಹೋಗಿ ಕೊಡಬೇಕು. ಆ ಕೆಲಸವನ್ನು ಅವರು ಸರಿಯಾಗಿ ಮಾಡಿಲ್ಲ ಎಂದಾದರೇ ಎಲೆಕ್ಷನ್ ಕಮಿಷನ್‌ನವರು ನೋಡಿಕೊಳ್ಳುತ್ತಾರೆ. ಇದರಲ್ಲಿ ನಮ್ಮ ಸರಕಾರದ ಪಾತ್ರ ಎಳ್ಳಷ್ಟು ಇಲ್ಲ ಎಂದು ಸ್ಪಷ್ಟಪಡಿಸಿದರು.

ಮುಂದುವರೆದು ಮಾತನಾಡಿದ ಅವರು, ರಾಜ್ಯ ಸರಕಾರವನ್ನು ಕೇಳಿ ಅವರು ನಿಯಮಗಳನ್ನು ಮಾಡಿಲ್ಲ. ಒಂದು ತಿಂಗಳೊಳಗೆ ಎಸ್‌ಐಆರ್ ಪ್ರಕ್ರಿಯೆಯನ್ನು ಮುಗಿಸಬೇಕು ಎಂದು ಚುನಾವಣಾ ಆಯೋಗ ತೀರ್ಮಾನ ಮಾಡಿದೆ. ಅದರಂತೆ ಅಧಿಕಾರಿಗಳಿಗೆ ಸೂಚನೆಯನ್ನು ಕೊಟ್ಟಿದ್ದಾರೆ. ಇದಕ್ಕೆ ಬೇಕಾದ ಅಗತ್ಯ ಸಹಕಾರವನ್ನು ಮಾತ್ರ ರಾಜ್ಯ ಸರಕಾರ ನೀಡುತ್ತಿದೆ ಎಂದು ತಿಳಿಸಿದರು.

ಶೀಘ್ರವಾಗಿ ಪಂಚಾಯಿತಿ ಚುನಾವಣೆ ನಡೆಸುವ ಬಗ್ಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಕಲಬುರಗಿಯಲ್ಲಿ ಪ್ರಸ್ತಾಪಿಸಿದ್ದಾರೆ. ಮುಂದಿನ ದಿನದಲ್ಲಿ ದಿನಾಂಕವನ್ನು ನಿಗದಿಪಡಿಸಲಾಗುವುದು ಎಂದು ತಿಳಿಸಿದರು.

ಹೇಮಾವತಿ ಎಕ್ಸ್ ಪ್ರೆಸ್ ಕೆನಾಲ್ ಯೋಜನೆಯ ರದ್ದತಿಯ ಬಗ್ಗೆ ಮಾಧ್ಯಮದ ಪ್ರಶ್ನೆಗೆ ಉತ್ತರಿಸಿದ ಡಿಸಿಎಂ, ಈ ಯೋಜನೆಗಾಗಿ 900 ಕೋಟಿಗೂ ಹೆಚ್ಚು ಹಣವನ್ನು ಮೀಸಲಿಡಲಾಗಿದೆ. ಈಗಾಗಲೇ ಕಾಮಗಾರಿಗಾಗಿ ಒಂದಿಷ್ಟು ಹಣವನ್ನು ವ್ಯಯಿಸಲಾಗಿದೆ.. ಅದನ್ನು ಈಗ ನಿಲ್ಲಿಸಬೇಕು ಎಂದು ಹೇಳಿದರೆ ಅದು ಅಸಾಧ್ಯ. ಅದನ್ನು ಮುಂದುವರೆಸಲಾಗುವುದು ಎಂದರು.

ಕೆಬಿಜೆಎನ್‌ಎಲ್ ಇಂಜಿನಿಯರ್ ಮನೆ, ಕಚೇರಿ ಮೇಲೆ ಲೋಕಾಯುಕ್ತ ದಾಳಿ

ರಾಯಚೂರು,ಜು.8-


ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ (ಕೆಬಿಜೆಎನ್‌ಎಲ್)ದ ಕಾರ್ಯನಿರ್ವಾಹಕ ಇಂಜಿನಿಯರ್ ಬಸನಗೌಡ ಅವರ ಮನೆ ಹಾಗೂ ಕಚೇರಿ ಸೇರಿದಂತೆ ಏಳು ಕಡೆ ಲೋಕಾಯುಕ್ತ ಅಧಿಕಾರಿಗಳು ಬುಧವಾರ ಬೆಳಗ್ಗೆ ದಾಳಿ ನಡೆಸಿದ್ದಾರೆ.

ಆದಾಯಕ್ಕೂ ಮೀರಿ ಆಸ್ತಿ ಸಂಪಾದನೆ ಆರೋಪದ ಮೇಲೆ ಈ ಕಾರ್ಯಾಚರಣೆ ನಡೆಸಿರುವ ಲೋಕಾಯುಕ್ತರು ಕೆಬಿಜೆಎನ್‌ಎಲ್ ಇ.ಇ ಬಸನಗೌಡರಿಗೆ ಸೇರಿದ ಮೂರು ಮನೆ, ಕಚೇರಿ, ಫಾರ್ಮ್ ಹೌಸ್ , ಗೋದಾಮು, ಪೆಟ್ರೋಲ್ ಬಂಕ್ ಸೇರಿದಂತೆ ಏಳು ಕಡೆಗಳಲ್ಲಿ ದಾಳಿ ನಡೆಸಿದ್ದಾರೆ.

ನಗರ ಎಚ್‌ಆರ್‌ಬಿ ಲೇಔಟ್ ಹಾಗೂ ಯಕ್ಲಾಸಪೂರನಲ್ಲಿಯೂ ರಾಯಚೂರು ಲೋಕಾಯುಕ್ತ ಎಸ್ ಪಿ ಸಿದ್ದರಾಜು ನೇತೃತ್ವದಲ್ಲಿ ದಾಳಿ ನಡೆಸಲಾಗುತ್ತಿದೆ.

ದೇವದುರ್ಗದ ಜಾಲಹಳ್ಳಿ ಬಳಿ ಕೃಷ್ಣಾ ನದಿ ದಂಡೆಯಲ್ಲಿ 30 ಎಕರೆ ಜಮೀನು ಖರೀದಿ ಪತ್ತೆಯಾಗಿದೆ. ದಾಖಲೆಗಳ ಪರಿಶೀಲನೆ ನಡೆಸಿರುವ ಲೋಕಾ ತಂಡಗಳು ನಡೆಸಿವೆ ಎಂದು ತಿಳಿದುಬಂದಿವೆ.

ಬಳ್ಳಾರಿಯಲ್ಲೂ ದಾಳಿ: ಬಳ್ಳಾರಿ, ಹೊಸಪೇಟೆ, ಕೊಪ್ಪಳ, ರಾಯಚೂರು ಜಿಲ್ಲೆಯ ಲೋಕಾಯುಕ್ತ ಅಧಿಕಾರಿಗಳ ಏಳು ತಂಡಗಳಿಂದ ಪರಿಶೀಲನೆ ನಡೆಸಿದ್ದು, ಲೋಕಾಯುಕ್ತ ದಾಳಿಗೊಳಗಾದ ಕೆಬಿಜೆಎನ್‌ಎಲ್ ಇಇ ಬಸನಗೌಡ ರಾಯಚೂರು ಬೈಪಾಸ್ ರಸ್ತೆಯಲ್ಲಿನ ಪತ್ನಿ ಹೆಸರಿನಲ್ಲಿನ ಪೆಟ್ರೋಲ್ ಬಂಕ್ ಪಕ್ಕದಲ್ಲೇ ಇರುವ ಬಾರ್ ಆಂಡ್ ರೆಸ್ಟೋರೆಂಟ್ ಹಾಗೂ



ಗೋದಾಮು ಮೇಲೂ ಏಳು ತಂಡಗಳ 30ಕ್ಕೂ ಹೆಚ್ಚು ಲೋಕಾಯುಕ್ತ ಸಿಬ್ಬಂದಿ, ದಾಳಿಯಲ್ಲಿ ಭಾಗಿಯಾಗಿದ್ದಾರೆ ಎಂದು ತಿಳಿದುಬಂದಿದೆ.

ಪ್ರಿನ್ಸ್ ಬಾರ್ ಅಂಡ್ ರೆಸ್ಟೋರೆಂಟ್, ಕೆಬಿಜೆಎನ್‌ಎಲ್ ದೇವದುರ್ಗ ತಾಲ್ಲೂಕಿನ ಚಿಕ್ಕಹೊನ್ನಕುಣಿ ಕಚೇರಿ, ಎಚ್ ಆರ್ ಬಿ ಲೇಔಟ್ ನಿವಾಸ, ಸೆಲೆಬ್ರಿಟಿ ಗಾರ್ಡನ್, ಯಾಕ್ಲಾಸಪುರ್ ಅಣ್ಣನ ಮನೆ (ಶಿವನಗೌಡ), ಯಕ್ಲಾಸಪುರ್ ಗ್ರಾಮದ ಎರಡು ಮನೆ, ದೊಡ್ಡನ ಗೌಡ, ಯಾಕ್ಲಾಸಪುರ್ ಗ್ರಾಮದ ಮ ನ 201 ಶರಣಗೌಡ ಅಣ್ಣನ ಮನೆ, ಬೈಪಾಸ್ ರಸ್ತೆಯ ಪತ್ನಿ ಅನಿತಾ ಶೆಟ್ಟಿ ಹೆಸರಿನಲ್ಲಿರುವ ಶ್ರೀ ಫಿಲ್ಲಿಂಗ್ ನಾಯರಾಣ ಪೆಟ್ರೋಲ್ ಬಂಕ್ ಹಾಗೂ ಪಕ್ಕದಲ್ಲಿನ ಬಾರ್ ಹಾಗೂ ರೆಸ್ಟೋರೆಂಟ್, ಪಕ್ಕದಲ್ಲಿನ ಗೋದಾಮು,ಯಕ್ಲಾಪುರ ಪಕ್ಕದ ತೋಟದ ಮನೆಯಲ್ಲಿ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿದ್ದಾರೆ ಎಂದು ಮಾಹಿತಿ ಲಭ್ಯವಾಗಿದೆ.

18 ರಂದು ಭೋವಿ ಜನೋತ್ಸವ ಕಾರ್ಯಕ್ರಮ ನಡೆಯಲಿದೆ: ಸಿದ್ದು ಬಂಡಿ

ಸಿಂಧನೂರು: ಭೋವಿ ಸಮಾಜದ ಜಗದ್ಗುರುಗಳಾದ ಶ್ರೀ ಹಿಮ್ಮಡಿ ಸಿದ್ದರಾಮೇಶ್ವರ 40 ನೇ ವರ್ಷದ ಅಂಗವಾಗಿ ಭೋವಿ ಜನೋತ್ಸವತ ಕಾರ್ಯಕ್ರಮವನ್ನು ಚಿತ್ರದುರ್ಗದ ಭೋವಿ ಸಮಾಜದ ಮಠದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಭೋವಿ ಸಮಾಜದ ರಾಜ್ಯ ಅಧ್ಯಕ್ಷರಾದ ಸಿದ್ದು ಬಂಡಿ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿ ಇದೇ ತಿಂಗಳ 18 ರಂದು ಭೋವಿ ಜನೋತ್ಸವ ಕಾರ್ಯಕ್ರಮ ಚಿತ್ರದುರ್ಗ ಭೋವಿ ಸಮಾಜದ ಮಠದಲ್ಲಿ ಕಾರ್ಯಕ್ರಮವನ್ನು ಆಯೋಜಿಸಿದೆ ಈ ಕಾರ್ಯಕ್ರಮಕ್ಕೆ ರಾಜ್ಯದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಉಪಮುಖ್ಯಮಂತ್ರಿ ಜಿ. ಪರಮೇಶ್ವರ್ ಕೇರಳದ ಸಂಸದರು ಮಲ್ಲೇಶ್ ಬಾಬು ಮತ್ತು ರಾಜ್ಯದ ಭೋವಿ ಸಮಾಜದ ಪಕ್ಷಾತೀತವಾಗಿ ಎಲ್ಲಾ ಮುಖಂಡರುಗಳು ಹಾಗೂ ಜಿಲ್ಲಾ ತಾಲೂಕುಗಳಿಂದ ಎಲ್ಲಾ ಪದಾಧಿಕಾರಿಗಳು ಸಮುದಾಯದ ಹಿರಿಯ ಯುವಕರು ಸೇರಿದಂತೆ ಕಲ್ಯಾಣ ಕರ್ನಾಟಕದಿಂದ 56-60 ಸಾವಿರ ಜನರು ಈ ಕಾರ್ಯಕ್ರಮಕ್ಕೆ ಭಾಗವಹಿಸಲಿದ್ದಾರೆ ಎಂದು ಹೇಳಿದರು .

ನಂತರ ಮಾತನಾಡಿದ ಭೋವಿ ಸಮಾಜದ ತಾಲೂಕು ಅಧ್ಯಕ್ಷರಾದ ಅಶೋಕ್ ಉಮಲೂಟಿ ಅವರು ಇದೇ ತಿಂಗಳ 18 ರಂದು ನಮ್ಮ ಸಮುದಾಯದ ಜಗದ್ಗುರುಗಳಾದ ಶ್ರೀ ಹಿಮ್ಮಡಿ ಸಿದ್ದರಾಮೇಶ್ವರ 17 ನೇ ಪಟ್ಟಾಭಿಷೇಕ 28 ಕ್ಕೆ ಲಾಂಚನ ದೀಕ್ಷೆ ಮತ್ತು 40 ನೇ ದಿನೋತ್ಸವ ಜೊತೆಗೆ ಎಸ್. ಎಸ್.ಎಲ್.ಸಿ. ಪಿಯುಸಿ ಡಿಗ್ರಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ



ಸಮಾರಂಭ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಹಾಗಾಗಿ ನಮ್ಮ ಸಮುದಾಯದ ತಾಲೂಕಿನಿಂದ 600 ಜನರು ಭಾಗವಹಿಸಲಿದ್ದು ಎಲ್ಲಾ ರೀತಿಯ ವಾಹನಗಳನ್ನು ವ್ಯವಸ್ಥೆ ಮಾಡಲಾಗುತ್ತದೆ ಒಟ್ಟಾರೆ ಕಲ್ಯಾಣ ಕರ್ನಾಟಕ ಭಾಗದಲ್ಲಿ 60 ಸಾವಿರ ಜನರು ಭಾಗವಹಿಸಲಿದ್ದಾರೆ ಎಂದರು.

ಭೋವಿ ಸಮಾಜದ ಐದು ಜನರು ಶಾಸಕರಾಗಿದ್ದಾರೆ. ಹಾಗಾಗಿ ನಮ್ಮ ಸಮುದಾಯದ ಶಾಸಕರಿಗೆ ಸಚಿವ ಸ್ಥಾನ ನೀಡಬೇಕೆಂದು ನಮ್ಮ ಸಮುದಾಯದಿಂದ ಒತ್ತಾಯ ಮಾಡಲಾಗುವುದು ಎಂದು ಹೇಳಿದರು.

ಆದ್ದರಿಂದ ಭೋವಿ ಸಮಾಜದ ಹಿರಿಯ ಹಾಗೂ ಯುವಕರು ನೌಕರರು ಸೇರಿದಂತೆ ಹೆಚ್ಚಿನ ಸಂಖ್ಯೆಯಲ್ಲಿ ಭೋವಿ ಜನೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ. ತಿಪ್ಪಣ್ಣ ಒಡೆಯರ್ ರಾಮಾಂಜನೇಯ ಬಳ್ಳಾರಿ . ಹನುಮಂತಪ್ಪ ರಾಯಚೂರು. ಹಂಸರಾಜ್ ಗೋವಿಂದರಾಜ ಸೇರಿದಂತೆ ಇತರರು ಸುದ್ದಿಗೋಷ್ಠಿಯಲ್ಲಿ ಇದ್ದರು.

ಮಾಗಿದ ‘ಮುತ್ಸದ್ದಿ’ ಗ್ರಂಥ ಲೋಕಾರ್ಪಣೆ

ರಾಯಚೂರು,ಜು.8-

ಪ್ರಸ್ತುತ ರಾಜಕೀಯ ಎಂದರೆ ಹಣಗಳಿಸುವುದು, ವಿರೋಧ ಪಕ್ಷದವರನ್ನು ಹೀಯಾಳಿಸುವುದು, ವೈಯಕ್ತಿಕ ತೇಜೋವಧೆ ನಡೆಯುತ್ತಿದ್ದು, ನೈತಿಕ ಮೌಲ್ಯ ಕುಸಿತಗೊಳ್ಳುತ್ತಿದೆ. ಇದು ಪ್ರಜಾಪ್ರಭುತ್ವಕ್ಕೆ ವಿರುದ್ಧವಾಗಿದೆ ಎಂದು ಮಾಜಿ ಸ್ಪೀಕರ್ ರಮೇಶ್ ಕುಮಾರ್ ಹೇಳಿದರು.

ನಗರದ ಗಂಜ್ ಕಲ್ಯಾಣ ಮಂಟಪದಲ್ಲಿ ಮಾಜಿ ಸಚಿವ ಎಂ.ಎಸ್. ಪಾಟೀಲ ಅವರ ಕುರಿತ 'ಮಾಗಿದ ಮುತ್ಸದ್ದಿ' ಗ್ರಂಥ ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ಮಾಜಿ ಶಾಸಕ ಪಾಪಾರೆಡ್ಡಿ ಹಾಗೂ ಎಂ.ಎಸ್. ಪಾಟೀಲರು ರಾಜಕೀಯದಲ್ಲಿ ಪರಸ್ಪರ ವಿರೋಧಿಯಾಗಿದ್ದರು. ಚುನಾ ವಣೆಯಲ್ಲಿ ಸ್ಪರ್ಧಿಸಿ ರಾಜಕೀಯ ಎದುರಾಳಿಯಾಗಿದ್ದರು. ಈಗ ಗ್ರಂಥ ಲೋಕಾರ್ಪಣೆ ಮಾಡುತ್ತಿರುವುದು ಶ್ಲಾಘನೀಯ. ಮುಂದಿನ ಜನಾಂಗಕ್ಕೆ ಏನು ಬಿತ್ತಬೇಕು ಎಂಬ ಪ್ರಶ್ನೆಗೆ ಅವರು ಉತ್ತರವಾಗಿದ್ದಾರೆ ಎಂದು ಹೇಳಿದರು.

ಪಾಪಾರೆಡ್ಡಿ ಅವರು ಹೃದಯ ವೈಶಾಲ್ಯತೆ ಉಳ್ಳವರು. ಶಾಸಕರು, ಮಿನಿಸ್ಟರ್ ಆಗುವುದು ಸುಲಭ. ಆದರೆ ಮನುಷ್ಯತ್ವರಾಗುವುದು ಕಷ್ಟ. ರಾಜಕೀಯ ಕಾಲದಲ್ಲಿ ವಿರೋಧಿಗಳ ಸ್ಥಾನದಲ್ಲಿದ್ದರು. ಅವರ ಸಾಧನೆ, ವ್ಯಕ್ತಿತ್ವಕ್ಕೆ ಗೌರವಿಸುವ ನಿಟ್ಟಿನಲ್ಲಿ ಗ್ರಂಥ ಲೋಕಾರ್ಪಣೆ ಮಾಡುವ ಜವಾಬ್ದಾರಿ ಹೊತ್ತು ಹೃದಯ ವೈಶಾಲ್ಯತೆ ಮೆರೆದಿದ್ದಾರೆ ಎಂದರು.

ಪ್ರಜಾಪ್ರಭುತ್ವ ಅಂದರೆ ಪರಸ್ಪರ ವಿರುದ್ಧವಾಗಿದ್ದರು



ಚುನಾವಣೆಯಲ್ಲಿ ವಿರೋಧಿಗಳಷ್ಟೇ. ಪಾಪಾರೆಡ್ಡಿ ಅವರು ಮುಂದಿನ ಜನಾಂಗಕ್ಕೆ ಏನು, ಯಾವ ವಿಚಾರ ಬಿತ್ತಬೇಕು ಎಂಬ ಪ್ರಶ್ನೆಗೆ ಅವರು ಉತ್ತರವಾಗಿದ್ದಾರೆ ಎಂದು ಹೇಳಿದರು. ಮುಂದಿನ ಎಂ.ಎಸ್. ಪಾಟೀಲರು ಹಿರಿಯ ಮುತ್ಸದ್ದಿಗಳು, ಸಾರ್ವಜನಿಕ ಜೀವನದಲ್ಲಿ ಅನೇಕ ಏಳುಬೀಳು ಕಂಡು ಈಗಿನ ಕಾಲದ ಜನರಿಗೆ ಮಾದರಿಯಾಗಿದ್ದಾರೆ. ವ್ಯವಹಾರದಲ್ಲಿ ನಿಸ್ವಾರ್ಥ ಇರುವವರು. ಅವರ ವ್ಯಕ್ತಿತ್ವದ ಬಗ್ಗೆ ಎಷ್ಟು ಹೇಳಿದರು ಸಾಲುವುದಿಲ್ಲ ಎಂದರು.

ಎನ್.ಎಸ್. ಬೋಸರಾಜು ಮಾತನಾಡಿ, ಎಂ.ಎಸ್. ಪಾಟೀಲ ರಾಜಕೀಯ ಜೀವನದಲ್ಲಿ ಸ್ವಾಭಿಮಾನಕ್ಕೆ ಧಕ್ಕೆಯಾಗದಂತೆ ನಡೆದುಕೊಂಡವರು, ಅನೇಕ ಅಭಿವೃದ್ಧಿ ಕಾರ್ಯಗಳು ಮಾಡಿದ್ದಾರೆ. ಅವರ ಹುಟ್ಟುಹಬ್ಬದ ಅಂಗವಾಗಿ ಗ್ರಂಥ ಲೋಕಾರ್ಪಣೆ ಕಾರ್ಯ ಅಭಿನಂದನಾರ್ಹ ಎಂದರು.

ಡಾ. ಶಿವರಾಜ ಪಾಟೀಲ ಮಾತನಾಡಿ, ರಾಜಕೀಯ ವಿರೋಧಿಯಾಗಿದ್ದು ಅವರ ಜೀವನ ಸಾಧನೆ ಬಗ್ಗೆ ಗ್ರಂಥ ಬಿಡುಗಡೆ ಕಾರ್ಯಕ್ರಮ ಮಾಡುತ್ತಿರುವುದು ಐತಿಹಾಸಿಕ ಹಾಗೂ ಮಾದರಿಯಾಗಿದೆ. ಎಂ.ಎಸ್. ಪಾಟೀಲ ಅವರು ರಮೇಶ ಕುಮಾರ ಅವರ ಅವಧಿಯಲ್ಲಿ ರಾಜಕೀಯ ಮಾಡಿದವರು. ಅಕ್ಷರ ರೂಪದಲ್ಲಿ ಇರುವ ಗ್ರಂಥವನ್ನು ಅವರ ಜೀವನ, ರಾಜಕೀಯ ಅನುಭವವನ್ನು ಇಂದಿನ ರಾಜಕಾರಣಿಗಳು ಅಳವಡಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದ ರೂವಾರಿ ಮಾಜಿ ಶಾಸಕ ಎ. ಪಾಪಾರೆಡ್ಡಿ, ಕೇಂದ್ರದ ಮಾಜಿ ಸಚಿವ ಬಸವರಾಜ ಪಾಟೀಲ್ ಅನ್ವರಿ, ಮಾಜಿ ಸಚಿವ ಎನ್.ಎಸ್. ಬೋಸರಾಜು, ಕೆ. ಶಿವನಗೌಡ ನಾಯಕ, ಸಂಸದ ಜಿ. ಕುಮಾರ ನಾಯಕ, ಶಾಸಕರಾದ ಡಾ. ಶಿವರಾಜ

3ನೇಯ ಪುಟಕ್ಕೆ

ರಸ್ತೆ ಬದಿ ತ್ಯಾಜ್ಯ ವಿಲೇವಾರಿ: ತ್ಯಾಜ್ಯಕ್ಕೆ ಬೆಂಕಿ ರಸ್ತೆಗೆ ಕವಿದ ಹೋಗೆ ಜನಸಾಮಾನ್ಯರು ಆಕ್ರೋಶ

ಸಿರವಾರ,ಜು.8-

ಪಟ್ಟಣದಲ್ಲಿ ಉತ್ಪತ್ತಿಯಾಗಿ ತ್ಯಾಜ್ಯವನ್ನು ರಸ್ತೆ ಪಕ್ಕದಲ್ಲಿ ಹಾಕುತ್ತಿದ್ದಾರೆ, ಆ ತ್ಯಾಜ್ಯಕ್ಕೆ ಬೆಂಕಿ ಹಚ್ಚುತ್ತಿರುವುದರಿಂದ ಗಾಳಿಗೆ ಅಪಾರ ಪ್ರಮಾಣದ ದಟ್ಟವಾದ ಹೋಗೆಯು ರಸ್ತೆಗೆ ಆವರಿಸುತ್ತಿದ್ದೂ ವಾಹನ ಸವಾರರಿಗೆ ಪ್ರಯಾಣಿಕರು ತೊಂದರೆಯಾಗುತ್ತಿದೆ ಎಂದು ಆಕ್ರೋಶ ವ್ಯಕ್ತ ಪಡಿಸುತ್ತಿದ್ದಾರೆ ಪಟ್ಟಣದ) ಲಿಂಗಸಗೂರು-ರಾಯಚೂರು ಮುಖ್ಯ ರಸ್ತೆಗೆ ಹೊಂದಿಕೊಂಡಿರುವ ವಿಆರ್ ಎಸ್ ಶಾಲೆ (ಕ್ರೀಡಾಂಗಣ) ಅಕ್ಕಪಕ್ಕದಲ್ಲಿ ಈ ಹಿಂದಿನಿಂದಲೂ ತ್ಯಾಜ್ಯವನ್ನು ತಂದು ಹಾಕುತ್ತಿದ್ದಾರೆ. ಕಸ ಹೆಚ್ಚಾದರೆ ಆ ಕಸಕ್ಕೆ ಬೆಂಕಿ ಹಚ್ಚಿ ಸುಡುತ್ತಿರುತ್ತಾರೆ. ಅದರಂತೆ



ಮಂಗಳವಾರವೂ ಸಹ ಬೆಂಕಿ ಹಚ್ಚಿದ್ದಾರೆ. ಗಾಳಿ ಹೆಚ್ಚಾಗಿ ಬಿಸುತ್ತಿದ್ದಿರಂದ ಗಾಡವಾಗಿ ಬೆಂಕಿ ಹೊತ್ತುಕೊಂಡಿತು. ಇದರಿಂದ ಹೆಚ್ಚು ಆ ರಸ್ತೆಯಲ್ಲಿ ಸಂಚಾರ ಮಾಡುವರಿಗೆ ತೊಂದರೆಯಾಗುತ್ತಿದ್ದೆ. ಎದುರು ಬದರು ವಾಹನ ಬಂದಾಗ ಕಾಣುತ್ತಿಲ ಅಪಘಾತಕ್ಕೆ ಕಾರಣವಾಗಿವೆ. ಈಗಾಗಲೇ ಈ ಸ್ಥಳದಲ್ಲಿ ಕ್ರೀಡಾಂ

3ನೇಯ ಪುಟಕ್ಕೆ

ಎಸ್‌ಐಆರ್ 2026 ಜಾಗೃತಿ ಓಟಕ್ಕೆ ಸಜ್ಜಾದ ರಾಯಚೂರು

ಜು.9ರಂದು ಮ್ಯಾರಥಾನ್ ಸೈಕ್ಲೋಥಾನ್; ಮತದಾರರ ಪಟ್ಟಿ ಪರಿಷ್ಕರಣೆ, ನಗರ ಸ್ವಚ್ಛತೆ ಕುರಿತು ಜನಜಾಗೃತಿ



ರಾಯಚೂರು,ಜು.8-

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (SIR2026) ಯಶಸ್ವಿಗೊಳಿಸುವುದು ಹಾಗೂ ನಗರ ಸ್ವಚ್ಛತೆ ಘನತ್ಯಾಜ್ಯ ನಿರ್ವಹಣೆ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಜುಲೈ 9ರಂದು ಬೆಳಿಗ್ಗೆ 7 ಗಂಟೆಗೆ ರಾಯಚೂರಿನಲ್ಲಿ ಬೃಹತ್ ಮ್ಯಾರಥಾನ್ ಹಾಗೂ ಸೈಕ್ಲೋಥಾನ್ ಆಯೋಜಿಸಲಾಗಿದೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ರಾಯಚೂರು ಮಹಾನಗರ ಪಾಲಿಕೆ

3ನೇಯ ಪುಟಕ್ಕೆ

ಧೂಳಿನ ದಾಳಿಗೆ ತತ್ತರಿಸಿದ ಜನಜೀವನ; ಆರ್‌ಟಿಪಿಎಸ್ ಹಾರುಬೂದಿ ಮಾಲಿನ್ಯಕ್ಕೆ ಕಡಿವಾಣಕ್ಕೆ ಕರವೇ ಹೋರಾಟದ ಎಚ್ಚರಿಕೆ

ದೇವಸೂಗೂರು ಕೆಐಎಡಿಬಿಯ ಬ್ರಿಕ್ಸ್ ಕಂಪನಿಗಳ ವಿರುದ್ಧ ಕಠಿಣ ಕ್ರಮಕ್ಕೆ ಜಿಲ್ಲಾಧಿಕಾರಿಗೆ ಮನವಿ

ರಾಯಚೂರು,ಜು.8-

ರಾಯಚೂರು ತಾಪ ವಿದ್ಯುತ್ ಸ್ಥಾವರ (ಆರ್‌ಟಿಪಿಎಸ್)ದಿಂದ ಹೊರಬರುವ ಹಾರುಬೂದಿಯನ್ನು ದೇವಸೂಗೂರು ಕೆಐಎಡಿಬಿ ಕೈಗಾರಿಕಾ ಪ್ರದೇಶದ ಬ್ರಿಕ್ಸ್ (ಇಟ್ಟಿಗೆ) ಕಂಪನಿಗಳಿಗೆ ಸಾಗಿಸುವ ಹಾಗೂ ಬಳಸುವ ವೇಳೆ ಉಂಟಾಗುತ್ತಿರುವ ಧೂಳು ಮಾಲಿನ್ಯದಿಂದ ಯಂಕಣ್ಣ ಯಾದವ ನಗರ ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳ ಜನರು ತೀವ್ರ ಸಂಕಷ್ಟ ಎದುರಿಸುತ್ತಿದ್ದಾರೆ. ಸಾರ್ವಜನಿಕರ ಆರೋಗ್ಯ ಮತ್ತು ಪರಿಸರಕ್ಕೆ ಮಾರಕವಾಗಿರುವ ಈ ಮಾಲಿನ್ಯಕ್ಕೆ ಕೂಡಲೇ ಕಡಿವಾಣ ಹಾಕಿ, ನಿಯಮ ಉಲ್ಲಂಘಿಸುತ್ತಿರುವ ಬ್ರಿಕ್ಸ್ ಕಂಪನಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆ (ಕರವೇ) ಜಿಲ್ಲಾ ಪಂಚಾಯತ್ ಕ್ಷೇತ್ರ, ಚಿಕ್ಕಸೂಗೂರು ಘಟಕ ಜಿಲ್ಲಾಡಳಿತವನ್ನು ಆಗ್ರಹಿಸಿದೆ.

ಕರವೇ ಜಿಲ್ಲಾ ಪಂಚಾಯತ್ ಕ್ಷೇತ್ರ, ಚಿಕ್ಕಸೂಗೂರು ಘಟಕದ ಅಧ್ಯಕ್ಷ ಸುರೇಶ ಬಾಬು ಅವರ ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ, ಹಾರುಬೂದಿ ಸಾಗಣೆ ಹಾಗೂ ಬಳಕೆಯಲ್ಲಿ ಮಾಲಿನ್ಯ ನಿಯಂತ್ರಣ ನಿಯಮಗಳನ್ನು



ಕಟ್ಟುನಿಟ್ಟಾಗಿ ಜಾರಿಗೊಳಿಸುವಂತೆ ಒತ್ತಾಯಿಸಲಾಯಿತು.

ಮನವಿಯಲ್ಲಿ ದೇವಸೂಗೂರು ಕೆಐಎಡಿಬಿ ಕೈಗಾರಿಕಾ ಪ್ರದೇಶದಲ್ಲಿರುವ ಹಲವು ಬ್ರಿಕ್ಸ್ ಕಂಪನಿಗಳು ಆರ್‌ಟಿಪಿಎಸ್‌ನಿಂದ ಹಾರುಬೂದಿಯನ್ನು ಸಾಗಿಸುವ ವೇಳೆ ಮುನ್ನೆಚ್ಚರಿಕೆ ಕ್ರಮಗಳನ್ನು ಪಾಲಿಸದೆ ಅಪಾರ ಪ್ರಮಾಣದ ಧೂಳು ಗಾಳಿಯಲ್ಲಿ ಹರಡುವಂತೆ ಮಾಡುತ್ತಿವೆ ಎಂದು ಆರೋಪಿಸಲಾಗಿದೆ. ಪರಿಣಾಮ ಯಂಕಣ್ಣ ಯಾದವ ನಗರದ ನಿವಾಸಿಗಳು ಉಸಿರಾಟದ ತೊಂದರೆ, ಕಣ್ಣಿನ ಉರಿ, ಚರ್ಮದ ಅಲರ್ಜಿ ಸೇರಿದಂತೆ ಹಲವು ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿದ್ದಾರೆ. ಮನೆಗಳು, ರಸ್ತೆಗಳು, ಕೃಷಿ ಭೂಮಿಗಳು ಹಾಗೂ ಕುಡಿಯುವ ನೀರಿನ ಮೂಲಗಳ ಮೇಲೂ ಬೂದಿಯ ಪದರ ಆವರಿಸಿ ಜನಜೀವನ ಅಸ್ತವ್ಯಸ್ತಗೊಂಡಿದೆ ಎಂದು ದೂರಲಾಗಿದೆ.

ಈ ಕುರಿತು ಹಲವು ಬಾರಿ ಆರ್‌ಟಿಪಿಎಸ್ ಅಧಿಕಾರಿಗಳಿಗೆ ದೂರು ಸಲ್ಲಿಸಿದ್ದರೂ ಯಾವುದೇ ಪರಿಣಾಮಕಾರಿ ಕ್ರಮ ಕೈಗೊಳ್ಳದಿರುವುದು ಸ್ಥಳೀಯರ ಆಕ್ರೋಶಕ್ಕೆ ಕಾರಣವಾಗಿದೆ. ಅಧಿಕಾರಿಗಳ ನಿರ್ಲಕ್ಷ್ಯದಿಂದ ಸಾರ್ವಜನಿಕರು ಪ್ರತಿನಿತ್ಯ ಆರೋಗ್ಯ

3ನೇಯ ಪುಟಕ್ಕೆ

ಬಳ್ಳಾರಿ ಜಿಲ್ಲಾ ಆಸ್ಪತ್ರೆಗೆ ಆರೋಗ್ಯ ಅಧಿಕಾರಿಗಳ ಭೇಟಿ: ಗರ್ಭಿಣಿಯರು ಹಾಗೂ ನವಜಾತ ಶಿಶುಗಳ ಆರೋಗ್ಯ ರಕ್ಷಣೆಗೆ ಜಾಗೃತಿ ಕರೆ

ಬಳ್ಳಾರಿ,ಜು.08

ಜಿಲ್ಲಾ ಆಸ್ಪತ್ರೆಯ ತಾಯಿ ಮತ್ತು ಮಕ್ಕಳ ಆರೋಗ್ಯ ವಿಭಾಗಕ್ಕೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಯಲ್ಲಾ ರಮೇಶ್ ಬಾಬು, ಜಿಲ್ಲಾ ಶಸ್ತಚಿಕಿತ್ಸ ಕ ಡಾ. ಎನ್. ಬಸರೆಡ್ಡಿ, ಬಳ್ಳಾರಿ ತಾಲ್ಲೂಕು ಆರೋಗ್ಯ ಅಧಿಕಾರಿ ಡಾ. ಆರ್. ಅಬ್ದುಲ್ಲಾ ಮತ್ತು ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ವಿ. ಪೂಜಾರ್ ಅವರು ಜಂಟಿಯಾಗಿ ಮಂಗಳವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಆಸ್ಪತ್ರೆಯಲ್ಲಿದ್ದ ತಾಯಂದಿರನ್ನುದ್ದೇಶಿಸಿ ಮಾತನಾಡಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಯಲ್ಲಾ ರಮೇಶ್ ಬಾಬು ಅವರು, ಗರ್ಭಿಣಿಯರು, ಬಾಣಂತಿಯರು ಮತ್ತು ನವಜಾತ ಶಿಶುಗಳ ಆರೈಕೆ ಹಾಗೂ ಆರೋಗ್ಯದ ಕುರಿತು ಸವಿಸ್ತಾರವಾದ ಮಾಹಿತಿ ನೀಡಿ ಜಾಗೃತಿ ಮೂಡಿಸಿದರು.

★ಗರ್ಭಿಣಿ ಮತ್ತು ಬಾಣಂತಿಯರ ಆರೋಗ್ಯ ಹಾಗೂ ಪೌಷ್ಟಿಕಾಂಶ:★

ಗರ್ಭಾವಸ್ಥೆಯಲ್ಲಿ ಮತ್ತು ಹೆರಿಗೆಯ ನಂತರ ತಾಯಿಯ ದೈಹಿಕ ಹಾಗೂ ಮಾನಸಿಕ ಆರೋಗ್ಯವು ಮಗುವಿನ ಮೇಲೆ ನೇರ ಪರಿಣಾಮ ಬೀರುತ್ತದೆ. ಹೀಗಾಗಿ ತಾಯಂದಿರು ಪ್ರೋಟೀನ್, ಕ್ಯಾಲ್ಸಿಯಂ, ಕಬ್ಬಿಣಾಂಶ (ಐರನ್) ಮತ್ತು ಫೋಲಿಕ್ ಆಸಿಡ್ ಸಮೃದ್ಧವಾಗಿರುವ ಹಸಿರು ಎಲೆ ತರಕಾರಿಗಳು, ಹಾಲು, ಮೊಟ್ಟೆ, ಧಾನ್ಯಗಳು ಹಾಗೂ ಹಣ್ಣುಗಳನ್ನು ಹೆಚ್ಚಾಗಿ ಸೇವಿಸಬೇಕು. ಪ್ರತಿದಿನ 2 ರಿಂದ 3 ಲೀಟರ್ ನೀರು ಕುಡಿಯಬೇಕು. ತಾಯಿಗೆ ಕನಿಷ್ಠ 7 ರಿಂದ 9 ಗಂಟೆಗಳ ಉತ್ತಮ ನಿದ್ರೆ, ಹಾಗೂ ಮಾನಸಿಕ



ಒತ್ತಡವಿಲ್ಲದ ಸಂತೋಷದ ವಾತಾವರಣ ಅತ್ಯಗತ್ಯ. ಮಲಗುವಾಗ ಎಡಬದಿಗೆ ಮಲಗುವುದು ರಕ್ತಸಂಚಾರಕ್ಕೆ ಸಹಕಾರಿಯಾಗಿದೆ. ವೈದ್ಯರ ಸಲಹೆಯಿಲ್ಲದೆ ಯಾವುದೇ ಔಷಧಿಗಳನ್ನು ಸೇವಿಸಬಾರದು ಹಾಗೂ ಧೂಮಪಾನ, ಮದ್ಯಪಾನಗಳಿಂದ ದೂರವಿರಬೇಕು ಎಂದು ಅಧಿಕಾರಿಗಳು ತಿಳಿಸಿದರು.

★ಕಡ್ಡಾಯವಾಗಿ ಮಾಡಿಸಬೇಕಾದ 4 ಆರೋಗ್ಯ ತಪಾಸಣೆಗಳು:★

ಗರ್ಭಿಣಿಯರು ಹೆರಿಗೆಗೆ ಮುನ್ನ ಕಡ್ಡಾಯವಾಗಿ 4 ಬಾರಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು. ಮೊದಲನೇ ತಪಾಸಣೆ (ಮೊದಲ 3 ತಿಂಗಳು) ಗರ್ಭಧಾರಣೆ ಖಚಿತವಾದ ತಕ್ಷಣ (12 ವಾರಗಳ ಒಳಗೆ) ಮೂಲ ವಿವರಗಳ ದಾಖಲಾತಿಗಾಗಿ, ಎರಡನೇ ತಪಾಸಣೆ (4 ರಿಂದ 6 ನೇ ತಿಂಗಳು) 14 ರಿಂದ 26 ನೇ ವಾರದ ಅವಧಿಯಲ್ಲಿ ಮಗುವಿನ ಬೆಳವಣಿಗೆ ಗಮನಿಸಲು, ಮೂರನೇ ತಪಾಸಣೆ (7 ಮತ್ತು 8 ನೇ ತಿಂಗಳು) 28 ರಿಂದ 34 ನೇ ವಾರದಲ್ಲಿ ತಾಯಿಯ ರಕ್ತದೊತ್ತಡ ಅಥವಾ ಮಧುಮೇಹದ ಲಕ್ಷಣಗಳನ್ನು ಪರೀಕ್ಷಿಸಲು, ನಾಲ್ಕನೇ ತಪಾಸಣೆ (9 ನೇ ತಿಂಗಳು) 36 ನೇ ವಾರದಿಂದ ಹೆರಿಗೆಯಾಗುವವರೆಗಿನ ಅವಧಿಯಲ್ಲಿ ಹೆರಿಗೆಯ ಸಿದ್ಧತೆಗಾಗಿ ತಪಾಸಣೆ ಮಾಡಿಸಬೇಕು ಎಂದರು.

★ಸಾಮಾನ್ಯ ಪರೀಕ್ಷೆಗಳು:★

ಪ್ರತಿ ತಪಾಸಣೆಯಲ್ಲೂ ತಾಯಿಯ ತೂಕ (ಗರ್ಭಾವಸ್ಥೆಯಲ್ಲಿ ಸರಾಸರಿ 10-12 ಕೆಜಿ ಹೆಚ್ಚಾಗಬೇಕು), ರಕ್ತದೊತ್ತಡ (ಬಿಪಿ), ಹೊಟ್ಟೆಯ ಗಾತ್ರ ಮತ್ತು ಭ್ರೂಣದ ಹೃದಯ ಬಡಿತವನ್ನು ಕಡ್ಡಾಯವಾಗಿ ಪರಿಶೀಲಿಸಲಾಗುತ್ತದೆ.

★ಪ್ರಯೋಗಾಲಯ ಪರೀಕ್ಷೆಗಳು ಮತ್ತು ಸ್ಕ್ಯಾನಿಂಗ್ ಮಹತ್ವ:★

ರಕ್ತಹೀನತೆ ಪತ್ತೆಗೆ ಹಿಮೋಗ್ಲೋಬಿನ್ ಪರೀಕ್ಷೆ, ಬ್ಲಡ್ ಗ್ರೂಪ್ ತಪಾಸಣೆ, ಎಚ್.ಐ.ವಿ, ಹೆಪಟೈಟಿಸ್ ಬಿ, ಸಿಫಿಲಿಸ್ ಹಾಗೂ ಮಧುಮೇಹ ಮತ್ತು ಮೂತ್ರದ ಸೋಂಕು ಪತ್ತೆಹಚ್ಚಲು ಅಗತ್ಯ ಲ್ಯಾಬ್ ಪರೀಕ್ಷೆಗಳನ್ನು ಮಾಡಿಸಲಾಗುತ್ತದೆ. ಇದರೊಂದಿಗೆ ಪ್ರಮುಖವಾಗಿ 3 ಅಲ್ಟ್ರಾಸೌಂಡ್ ಸ್ಕ್ಯಾನಿಂಗ್‌ಗಳನ್ನು ಶಿಫಾರಸು ಮಾಡಲಾಗುತ್ತದೆ.

★ಔಷಧಗಳು, ಲಸಿಕೆಗಳು:★

ಧನುರ್ವಾಯು ತಡೆಯಲು 2 ಡೋಸ್ ಟಿ.ಡಿ ಲಸಿಕೆ ನೀಡಲಾಗುತ್ತದೆ. ಗರ್ಭಧಾರಣೆಯ 4 ನೇ ತಿಂಗಳಿನಿದ ಹೆರಿಗೆಯ ನಂತರದ 6 ತಿಂಗಳವರೆಗೆ ದಿನಕ್ಕೆ ಒಂದು ಐರನ್ ಮಾತ್ರೆ ಹಾಗೂ ಮಗುವಿನ ಮೂಳೆಗಳ ಬೆಳವಣಿಗೆಗೆ ಕ್ಯಾಲ್ಸಿಯಂ ಮಾತ್ರೆಗಳನ್ನು ನೀಡಲಾಗುತ್ತದೆ. ಕಬ್ಬಿಣಾಂಶ ಮತ್ತು ಕ್ಯಾಲ್ಶಿಯಂ ಮಾತ್ರೆಗಳ ಸೇವನೆಯ ನಡುವೆ ಕನಿಷ್ಠ 2 ಗಂಟೆಗಳ ಅಂತರವಿರಬೇಕು.

ತಾಯಿಗೆ ತೀವ್ರ ಹೊಟ್ಟೆನೋವು, ಯೋನಿಯಿಂದ ರಕ್ತಸ್ರಾವ, ತಲೆಸುತ್ತು, ಮುಖ-ಕೈಕಾಲುಗಳಲ್ಲಿ ಹಠಾತ್ ಊತ, ದೃಷ್ಟಿ ಮಸುಕಾಗುವುದು, ನೀರು ಒಡೆಯುವುದು, ಜ್ವರ ಅಥವಾ ಮಗುವಿನ ಚಲನೆ ಕಡಿಮೆಯಾದಲ್ಲಿ ತಕ್ಷಣವೇ ಆಸ್ಪತ್ರೆಗೆ ಧಾವಿಸಬೇಕು ಎಂದು ಎಚ್ಚರಿಸಿದರು.

★ನವಜಾತ ಶಿಶು ಮತ್ತು ಮಕ್ಕಳ ಆರೋಗ್ಯ ಆರೈಕೆ:★

ಮಗು ಹುಟ್ಟಿದ ಮೊದಲ ಒಂದು ಗಂಟೆಯೊಳಗೆ ಕೊಲೆಸ್ಟಮ್' (ಗಿಣ್ಣು ಹಾಲು) ನೀಡಬೇಕು. ಮೊದಲ 6 ತಿಂಗಳವರೆಗೆ ಮಗುವಿಗೆ ಕೇವಲ ಎದೆಹಾಲು ಮಾತ್ರ ನೀಡಬೇಕು, ನೀರನ್ನೂ ಕೊಡುವ ಅಗತ್ಯವಿರುವುದಿಲ್ಲ. 6 ತಿಂಗಳ ನಂತರ ಎದೆಹಾಲಿನೊಂದಿಗೆ ರಾಗಿ ಸರಿ, ಕಿಚಡಿ, ಹಣ್ಣುಗಳ ಪ್ಯೂರಿಯಂತಹ ಮೃದು ಆಹಾರ ನೀಡಬೇಕು. ಸರ್ಕಾರದ ವೇಳಾಪಟ್ಟಿಯಂತೆ ಕಾಮಾಲೆ, ಪೋಲಿಯೋ, ಬಿಸಿಜಿ, ದಡಾರ ಮುಂತಾದ ಮಾರಕ ಕಾಯಿಲೆಗಳ ವಿರುದ್ಧ ಸಕಾಲದಲ್ಲಿ ಲಸಿಕೆ ಹಾಕಿಸಬೇಕು. ಮಗುವನ್ನು ಮುಟ್ಟುವ ಮುನ್ನ ಕೈಗಳನ್ನು ತೊಳೆದುಕೊಂಡು ಸ್ವಚ್ಛತೆ ಕಾಪಾಡಬೇಕು ಎಂದು ಅಧಿಕಾರಿಗಳು ತಾಯಂದಿರಿಗೆ ಮನವರಿಕೆ ಮಾಡಿಕೊಟ್ಟರು.

ಹಮಾಲರ ಕಾಲೋನಿ ಅಂಗನವಾಡಿ ಕೇಂದ್ರ-3ರಲ್ಲಿ ಅದ್ದೂರಿಯ ಮಕ್ಕಳ ಘಟಿಕೋತ್ಸವ



ಕೊಪ್ಪಳ ಜು.08

ಕೊಪ್ಪಳ ನಗರದ ಹಮಾಲರ ಕಾಲೋನಿ ಅಂಗನವಾಡಿ ಕೇಂದ್ರ-3ರಲ್ಲಿ ಶಾಲಾ ಪೂರ್ವ ಶಿಕ್ಷಣವನ್ನು ಮುಗಿಸಿ ಪ್ರಾಥಮಿಕ ಶಾಲೆಗೆ ಪ್ರವೇಶಿಸಿದ ಮಕ್ಕಳಿಗೆ ಮಂಗಳವಾರ (ಜು. 7ರಂದು) ಅದ್ದೂರಿಯ ಬೀಳ್ಕೊಡುಗೆ ಮತ್ತು ಘಟಿಕೋತ್ಸ ವ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಈ ಕಾರ್ಯಕ್ರಮದಲ್ಲಿ ಮಕ್ಕಳು ಅಂಗನವಾಡಿಯಲ್ಲಿ ಮೂರು ವರ್ಷಗಳ ಕಾಲ ಶಾಲಾ ಪೂರ್ವ ಶಿಕ್ಷಣವನ್ನು ಕಲಿತ ವಿಷಯಗಳ ಕುರಿತು ವಸ್ತು ಪ್ರದರ್ಶನ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು.

ಮಕ್ಕಳಿಂದ ಗಣಿತ ಪೂರ್ವ ಚಟುವಟಿಕೆ ಕೇಳಿದಷ್ಟು ಕೊಡು, ಅಂಕಿಗಳು, ಬಣ್ಣಗಳು, ಆಕಾರಗಳು, ಪ್ರಾಣಿಗಳು 10 ಹಲವು ಚಟುವಟಿಕೆ ಹಾಗೂ ಪರಿಸರ ಕಾಳಜಿಯ ಕುರಿತು ಇನ್ನು ಅನೇಕ ವಿಷಯಗಳ ಬಗ್ಗೆ ಏರ್ಪಡಿಸಲಾಗಿದ್ದ, ವಸ್ತು ಪ್ರದರ್ಶನದಲ್ಲಿ ಒಂದೊಂದು ವಿಷಯದ ಕುರಿತು ಸ್ವತಃ ಮಕ್ಕಳೇ ಚಿತ್ರ ತೋರಿಸುತ್ತಾ ತನ್ನ ತೊದಲು ನುಡಿಯಲ್ಲಿ ವಿವರಣೆ ಕೊಡುತ್ತಿರುವದು ಅದ್ಭುತವಾಗಿತ್ತು. ಮಕ್ಕಳ ವಿವರಣೆ, ಪ್ರತಿಭೆಯನ್ನು ಕಂಡು ಹಾಜರಿದ್ದ ಅಧಿಕಾರಿಗಳು, ಪೋಷಕರು ತುಂಬಾ ಸಂತೋಷ ಪಟ್ಟರು. ಪ್ರಸ್ತುತ ವರ್ಷದಲ್ಲಿ ಅಂಗನವಾಡಿಗೆ ಬಂದಿರುವ ಮಕ್ಕಳಿಗೆ ಅಕ್ಷರಭ್ಯಾಸ ಅಧಿಕಾರಿಗಳಿಂದ ಮಾಡಿಸಲಾಯಿತು.

ನಂತರ ನಡೆದ ಘಟಿಕೋತ್ಸ ವ ಕಾರ್ಯಕ್ರಮವನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಾದ ರೋಹಿಣಿ ಕೊಟಗಾರ್ ಅವರು ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು, ಎಲ್ಲಾ ಅಂಗನವಾಡಿ ಕೇಂದ್ರಗಳಿಗೆ ಈ ರೀತಿಯಾಗಿ ಶಾಲಾ ಪೂರ್ವ ಶಿಕ್ಷಣ ಚಟುವಟಿಕೆಗಳು ನಿರಂತರವಾಗಿ, ಪರಿಣಾಮಕಾರಿಯಾಗಿ ನಡೆದಲ್ಲಿ ಅಂಗನವಾಡಿಯ ಕಡೆ ಪೋಷಕರು ಮಕ್ಕಳನ್ನು ದಾಖಲಿಸಲು ಮುಂದಾಗುತ್ತಾರೆ ಎಂದು ತಿಳಿಸಿದರು.

ಮಕ್ಕಳಿಗೆ ವಿಶ್ವವಿದ್ಯಾಲಯದಲ್ಲಿ ನಡೆಯುವ ಘಟಿಕೋತ್ಸ ವ ಮಾದರಿಯಲ್ಲಿ ಪದವಿ ಪ್ರಧಾನ ಮಾಡಿರುವದು ವಿನೂತನವಾಗಿತ್ತು. ಘಟಿಕೋತ್ಸ ವದ ಪ್ರಮಾಣ ಪತ್ರವನ್ನು ಸ್ವೀಕರಿಸಿದ ಮಕ್ಕಳನ್ನು ಕಂಡು ಪೋಷಕರು ತುಂಬಾ ಸಂತೋಷ ಪಟ್ಟರು.

ಪಾಲಕರು ನಮ್ಮ ಮಕ್ಕಳು ಚೆನ್ನಾಗಿ ಕೇಳಿದ ಪ್ರಶ್ನೆಗಳಿಗೆ ಉತ್ತರಿಸುತ್ತಾರೆ ಒಂದನೇ ತರಗತಿಯಲ್ಲಿ ಪ್ರಥಮ ಸ್ಥಾನದಲ್ಲಿದ್ದಾರೆ ಎಂದು ಹೇಳಿಕೊಂಡರು ಇಂತಹ ಒಂದು ವಿನೂತನ ಕಾರ್ಯಕ್ರಮ ನಡೆಯಲು ಕಾರಣರಾದ ಅಂಗನವಾಡಿ ಕೇಂದ್ರದ ಕಾರ್ಯ ಕರ್ತರಾದ ಜಯಮ್ಮ, ಮಲ್ಲಮ್ಮ ಮತ್ತು ಶೈಲಜಾ ಅವರನ್ನು ಶಿಶು ಅಭಿವೃದ್ಧಿ ಯೋಜನಾಧಿ ಕಾರಿಗಳು ಅವರು ಅಭಿನಂದಿಸಿದರು. ಈ ಸಂದರ್ಭದಲ್ಲಿ ಅಂಗನವಾಡಿ ಮೇಲ್ವಿಚಾರಕರಾದ ಗಾಯತ್ರಿ ಹಾಗೂ ಉಷಾ, ಜಿಲ್ಲಾ ಸಂಪನ್ಮೂಲ ವ್ಯಕ್ತಿ ಸಿದ್ದಪ್ಪ ಕುರಿ ಸೇರಿದಂತೆ ಶಾಲಾ ಮುಖ್ಯ ಶಿಕ್ಷಕರು, ವಲಯ ಮೇಲ್ವಿಚಾರಕಿಯರು, ಅಂಗನವಾಡಿ ಶಿಕ್ಷಕರು, ಸಹಾಯಕಿಯರು ಹಾಗೂ ಪೋಷಕರು ಉಪಸ್ಥಿತರಿದ್ದರು.

ಕಾರ್ಮಿಕ ಕಲ್ಯಾಣ ಮಂಡಳಿ ನಿಧಿ ದುರ್ಬಳಕೆ ಖಂಡಿಸಿ ಕಟ್ಟಡ ಕಾರ್ಮಿಕರ ಪ್ರತಿಭಟನೆ

ಕೊಪ್ಪಳ,ಜ.08-

ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ನಿಧಿಯ ದುರ್ಬಳಕೆಯನ್ನು ಖಂಡಿಸಿ ಹಾಗೂ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ಸಂಯುಕ್ತ ಕಟ್ಟಡ ಕಾರ್ಮಿಕರ ಸಂಘ (ಎಐಯುಟಿಯುಸಿ) ನೇತೃತ್ವದಲ್ಲಿ ಮಂಗಳವಾರ ನಗರದಲ್ಲಿ ಪ್ರತಿಭಟನೆ ನಡೆಯಿತು.

ಜಿಲ್ಲಾ ಆಸ್ಪತ್ರೆ ಆವರಣದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಮೆರವಣಿಗೆ ನಡೆಸಿದ ಕಾರ್ಮಿಕರು, ಬಳಿಕ ಜಿಲ್ಲಾಧಿಕಾರಿ ಕಚೇರಿ ಎದುರು ಧರಣಿ ನಡೆಸಿ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಸಂಘದ ರಾಜ್ಯಾಧ್ಯಕ್ಷ ಎ. ದೇವದಾಸ್, ಕಟ್ಟಡ ಕಾರ್ಮಿಕರ ಕಲ್ಯಾಣಕ್ಕಾಗಿ ಮೀಸಲಾದ ನಿಧಿಯನ್ನು ಕಾರ್ಮಿಕರ ಹಿತಾಸಕ್ತಿಗೆ ವಿರುದ್ಧವಾಗಿ ಬಳಸುತ್ತಿರುವುದು ಖಂಡನೀಯ. ಕಲ್ಯಾಣ ಮಂಡಳಿಯ ನಿಧಿಯನ್ನು ಸಾಮಾಜಿಕ ಭದ್ರತೆ, ಆರೋಗ್ಯ, ಶಿಕ್ಷಣ ಹಾಗೂ ನಿವೃತ್ತಿ ಜೀವನದ ರಕ್ಷಣೆಗಾಗಿ ಮಾತ್ರ ಬಳಸಬೇಕು ಎಂದು ಒತ್ತಾಯಿಸಿದರು.

ಮೇಸನ್ ಕಿಟ್, ಸೇಫ್ಟಿ ಕಿಟ್ ಹಾಗೂ ಶೈಕ್ಷಣಿಕ ಕಿಟ್‌ಗಳ ಹೆಸರಿನಲ್ಲಿ ವಸ್ತು ವಿತರಿಸುವ ಬದಲು ಆ ಮೊತ್ತವನ್ನು ನೇರವಾಗಿ ಕಾರ್ಮಿಕರ ಬ್ಯಾಂಕ್ ಖಾತೆಗೆ ಜಮಾ ಮಾಡಬೇಕು. 2021ರ ಆದೇಶದಂತೆ ಕಾರ್ಮಿಕರ ಮಕ್ಕಳ ಶೈಕ್ಷಣಿಕ ಧನಸಹಾಯ ಯೋಜನೆಯನ್ನು



ಮರುಜಾರಿಗೊಳಿಸಬೇಕು. ನೋಂದಾಯಿತ ಕಾರ್ಮಿಕರು ಮತ್ತು ಅವರ ಕುಟುಂಬಗಳಿಗೆ ನಗದುರಹಿತ ವೈದ್ಯಕೀಯ ಚಿಕಿತ್ಸೆ ಹಾಗೂ 60 ವರ್ಷ ಮೇಲ್ಪಟ್ಟ ಎಲ್ಲ ಅರ್ಹ ಕಾರ್ಮಿಕರಿಗೆ ಪಿಂಚಣಿ ನೀಡಬೇಕು ಎಂದು ಆಗ್ರಹಿಸಿದರು.

ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಶರಣು ಗಡ್ಡಿ ಮಾತನಾಡಿ, ಮಂಜೂರಾಗಿರುವ ವಿವಿಧ ಯೋಜನೆಗಳ ಹಣವನ್ನು ತಕ್ಷಣ ಬಿಡುಗಡೆ ಮಾಡಬೇಕು. ಬಾಕಿ ಉಳಿದಿರುವ ಅರ್ಜಿಗಳನ್ನು ಶೀಘ್ರ ವಿಲೇವಾರಿ ಮಾಡಿ, ಸರ್ಕಾರದ ಎಲ್ಲ ಕಲ್ಯಾಣ ಯೋಜನೆಗಳು ಅರ್ಹ ಕಾರ್ಮಿಕರಿಗೆ ತಲುಪುವಂತೆ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ರಾಜ್ಯಾದ್ಯಂತ ಉಗ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಬಳಿಕ ತಾಲೂಕು ಕಾರ್ಮಿಕ ಅಧಿಕಾರಿ ಮಂಜುಳಾ ಅವರ ಮೂಲಕ ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಪ್ರತಿಭಟನೆಯಲ್ಲಿ ಜಿಲ್ಲಾ ಮುಖಂಡರಾದ ಸುರೇಶ ದಳಪತಿ, ಕುಮಾರ್ ಡಿ., ನಾಗರಾಜ್ ಹುಲಗಿ, ಶಬ್ಬೀರ್ ಕುಲುಮಿ, ಚಂದ್ರಶೇಖರ, ಮೊದಿನ್, ಯಲ್ಲನಗೌಡ, ಯಮನೂರ, ಮುರ್ತೆಪ್ಪ, ಬಾಬು, ಶರಣಪ್ಪ, ಯಲ್ಲಪ್ಪ, ಶರೀಫ್, ಕಟ್ಟೆಪ್ಪ, ಅಂಬಣ್ಣ, ಮುಬೀನ್, ಶಂಕರ, ಗಂಗಮ್ಮ, ಹನುಮವ್ವ ಸೇರಿದಂತೆ ಜಿಲ್ಲೆಯ ವಿವಿಧ ಭಾಗಗಳ ನೂರಾರು ಕಟ್ಟಡ ಕಾರ್ಮಿಕರು ಪಾಲ್ಗೊಂಡಿದ್ದರು.

ಹಂಪಿಯ ಅಭಿವೃದ್ಧಿಗೆ 3 ಸಾವಿರ ಕೋಟಿ ರೂ. ಮಹಾಯೋಜನೆ ರೂಪಿಸಲಾಗಿದೆ : ಸಚಿವ ಕೆ.ಜೆ.ಜಾರ್ಜ್

ವಿಜಯನಗರ (ಹೊಸಪೇಟೆ),ಜ.08-

ವಿಶ್ವವಿಖ್ಯಾತ ಹಂಪಿಯನ್ನು ಜಾಗತಿಕ ಮಟ್ಟದ ಪ್ರವಾಸಿ ತಾಣವಾಗಿ ಅಭಿವೃದ್ಧಿಪಡಿಸಲು ಸುಮಾರು 3 ಸಾವಿರ ಕೋಟಿ ರೂ. ಹೂಡಿಕೆಯ ಮಹತ್ವಾಕಾಂಕ್ಷಿ ಯೋಜನೆ ರೂಪಿಸಲಾಗಿದ್ದು, ನಗರಾಭಿವೃದ್ಧಿ ಇಲಾಖೆ, ಹಂಪಿ ಅಭಿವೃದ್ಧಿ ಪ್ರಾಧಿಕಾರ, ಭಾರತೀಯ ಪುರಾತತ್ವ ಸರ್ವೇಕ್ಷಣ ಇಲಾಖೆ (ಎಎಸ್‌ಐ) ಹಾಗೂ ರಾಜ್ಯ ಪುರಾತತ್ವ ಇಲಾಖೆ ಜಂಟಿಯಾಗಿ ಕಾರ್ಯನಿರ್ವಹಿಸಲಿವೆ ಎಂದು ಇಂಧನ ಹಾಗೂ ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ತಿಳಿಸಿದ್ದಾರೆ.

ಹೊಸ ಮಲಪನಗುಡಿಯ ಹಂಪಿ ಹೆರಿಟೇಜ್ ರೆಸಾರ್ಟ್‌ನಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗ್ಲೋಬಲ್ ಡೆಸ್ಟಿನೇಷನ್ ಡೆವಲಪ್‌ಮೆಂಟ್ ಯೋಜನೆಯ ಮೊದಲ ಹಂತದಲ್ಲಿ ಹಂಪಿಗೆ ಆದ್ಯತೆ ನೀಡಲಾಗಿದ್ದು, ಕಳೆದ ಎರಡು-ಮೂರು ವರ್ಷಗಳಿಂದ ಸಿದ್ಧಪಡಿಸಿರುವ ಮಾಸ್ಟರ್ ಪ್ಲಾನ್ ಹಾಗೂ ಜಿಐಎಸ್ ಆಧಾರಿತ ಮ್ಯಾಪಿಂಗ್ ಈಗಾಗಲೇ ಪೂರ್ಣಗೊಂಡಿದೆ ಎಂದು ಹೇಳಿದರು.

ಕೇಂದ್ರ ಸರ್ಕಾರದಿಂದ 1,4001,500 ಕೋಟಿ ರೂ. ಅನುದಾನ ದೊರೆಯಲಿದ್ದು, ರಾಜ್ಯ ಸರ್ಕಾರ ಹಾಗೂ ಖಾಸಗಿ ಹೂಡಿಕೆದಾರರ ಸಹಭಾಗಿತ್ವದೊಂದಿಗೆ ಒಟ್ಟು ಹೂಡಿಕೆಯನ್ನು 2,500ರಿಂದ 3,000 ಕೋಟಿ ರೂ. ವರೆಗೆ



ಹೆಚ್ಚಿಸುವ ಗುರಿ ಹೊಂದಲಾಗಿದೆ. ಇದರಿಂದ ಜಾಗತಿಕ ಮಟ್ಟದ ಪ್ರವಾಸಿ ಸೌಲಭ್ಯಗಳು ನಿರ್ಮಾಣವಾಗುವುದರ ಜೊತೆಗೆ ಸ್ಥಳೀಯ ಮಟ್ಟದಲ್ಲಿ ಸಾವಿರಾರು ಉದ್ಯೋಗಾವಕಾಶಗಳು ಸೃಷ್ಟಿಯಾಗಲಿವೆ ಎಂದು ತಿಳಿಸಿದರು.

ಪ್ರವಾಸಿಗರ ಅನುಕೂಲಕ್ಕಾಗಿ ಹಂಪಿಯಲ್ಲಿ 20 ಪ್ರಮುಖ ಪ್ರವಾಸಿ ಮಾರ್ಗಗಳನ್ನು ಗುರುತಿಸಲಾಗಿದ್ದು, ಮೊದಲ ಹಂತದಲ್ಲಿ ಐದು ಮಾರ್ಗಗಳನ್ನು

ಅಭಿವೃದ್ಧಿಪಡಿಸಲಾಗಿದೆ. ಪರಿಸರ ಸ್ನೇಹಿ ಇ-ವಾಹನ ಸೇವೆಯನ್ನು ಶೀಘ್ರದಲ್ಲೇ ಆರಂಭಿಸಲಾಗುವುದು. ಅಲ್ಲದೆ ಮುಂಜಾನೆ 4 ಗಂಟೆಯಿಂದ ವಿಶೇಷ ಬಸ್ ಸೇವೆ ಆರಂಭಿಸುವ ಕುರಿತು ಸಾರಿಗೆ ಇಲಾಖೆಯೊಂದಿಗೆ ಚರ್ಚಿಸಲಾಗುತ್ತಿದೆ ಎಂದು ಹೇಳಿದರು.

ಹಂಪಿಯ ಪಾರಂಪರಿಕ ಸ್ವರೂಪಕ್ಕೆ ಧಕ್ಕೆಯಾಗದಂತೆ ಎಎಸ್‌ಐ ನಿಯಮಗಳನ್ನು ಪಾಲಿಸಿ ಅಗತ್ಯ ಮೂಲಸೌಕರ್ಯ ಕಲ್ಪಿಸಲಾಗುವುದು. ನದಿಯ ಸ್ನಾನಘಟ್ಟ, ಕಲ್ಯಾಣಿ ಹಾಗೂ ಐತಿಹಾಸಿಕ ಸ್ಮಾರಕಗಳ ಪುನಶ್ಚೇತನ ಕಾಮಗಾರಿಗಳಿಗೆ ವೇಗ ನೀಡಲಾಗುವುದು ಎಂದು ತಿಳಿಸಿದರು.

ಮೈಸೂರು ದಸರೆಯ ಮಾದರಿಯಲ್ಲಿ ಹಂಪಿ ಉತ್ಸವವನ್ನು ವ್ಯವಸ್ಥಿತವಾಗಿ ಆಯೋಜಿಸುವ ಕುರಿತು ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಶೀಘ್ರದಲ್ಲೇ ದಿನಾಂಕ ನಿಗದಿಪಡಿಸಲಾಗುವುದು. ಕೋವಿಡ್ ಬಳಿಕ ಚೇತರಿಸಿಕೊಳ್ಳುತ್ತಿರುವ ಪ್ರವಾಸೋದ್ಯಮಕ್ಕೆ ಮತ್ತಷ್ಟು ಉತ್ತೇಜನ ನೀಡಲು ಸರ್ಕಾರ ಬದ್ಧವಾಗಿದೆ ಎಂದು ಸಚಿವ ಕೆ.ಜೆ. ಜಾರ್ಜ್ ಹೇಳಿದರು.

ಆಶಾ ಜ್ಯೋತಿ ಫೌಂಡೇಶನ್‌ನಿಂದ ವಿದ್ಯಾರ್ಥಿಗಳಿಗೆ ಶಾಲಾ ಬ್ಯಾಗ್, ನೋಟ್‌ಬುಕ್ ವಿತರಣೆ



ಬಳ್ಳಾರಿ/ಕಂಪ್ಲಿ:ಜು.08-

ಆಶಾ ಜ್ಯೋತಿ ಫೌಂಡೇಶನ್ ವತಿಯಿಂದ ಶಾಲೆಯ 100 ವಿದ್ಯಾರ್ಥಿಗಳಿಗೆ ಶಾಲಾ ಬ್ಯಾಗ್ ಹಾಗೂ ನೋಟ್‌ಪುಸ್ತಕಗಳನ್ನು ವಿತರಿಸುವ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಶಾಲಾ ಮುಖ್ಯಗುರು ಮಾಲಿಕ್, ಮಕ್ಕಳ ಶಿಕ್ಷಣಕ್ಕೆ ಪೋಷಕರು ಅಪಾರ ಕಷ್ಟಪಟ್ಟು ಅಗತ್ಯ ಸೌಲಭ್ಯಗಳನ್ನು ಒದಗಿಸುತ್ತಾರೆ. ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆದು ಉಜ್ವಲ ಭವಿಷ್ಯ ರೂಪಿಸಿಕೊಳ್ಳುವುದರ ಜೊತೆಗೆ, ಮುಂದೆ ಪೋಷಕರ ಆರೈಕೆ ಮಾಡಿ ಸಮಾಜಸೇವೆಯಲ್ಲೂ ತೊಡಗಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಫೌಂಡೇಶನ್ ಪದಾಧಿಕಾರಿಗಳಾದ ಜವುಕು ಅರ್ಜುನ್ ಬಾಬು ಹಾಗೂ ಸಹದೇವ ಮಾತನಾಡಿ, ಕಳೆದ ಮೂರು ವರ್ಷಗಳಿಂದ ಶಾಲೆಯ ವಿದ್ಯಾರ್ಥಿಗಳಿಗೆ ಕಲಿಕಾ ಸಾಮಗ್ರಿಗಳನ್ನು ವಿತರಿಸಲಾಗುತ್ತಿದೆ. ವಿದ್ಯಾರ್ಥಿಗಳು ಪುಸ್ತಕ ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು, ಹೊಸ ವಿಷಯಗಳನ್ನು ಕಲಿಯಬೇಕು ಹಾಗೂ ಉದ್ಯೋಗಕ್ಕೆ ಪೂರಕವಾದ ಕೌಶಲ್ಯಗಳನ್ನು ಅಭಿವೃದ್ಧಿಪಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ 100 ವಿದ್ಯಾರ್ಥಿಗಳಿಗೆ ಶಾಲಾ ಬ್ಯಾಗ್ ಹಾಗೂ ಪ್ರತಿಯೊಬ್ಬರಿಗೂ ಆರು ನೋಟ್‌ಪುಸ್ತಕಗಳನ್ನು ವಿತರಿಸಲಾಯಿತು. ಸಮಾಜಸೇವೆಯಲ್ಲಿನ ಕೊಡುಗೆಗಾಗಿ ಆಶಾ ಜ್ಯೋತಿ ಫೌಂಡೇಶನ್ ಪದಾಧಿಕಾರಿಗಳನ್ನು ಶಾಲೆಯ ವತಿಯಿಂದ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಎಸ್‌ಡಿಎಂಸಿ ಅಧ್ಯಕ್ಷ ಗೋಪಾಲ, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಪಂಪಾಪತಿ, ಸಹಶಿಕ್ಷಕಿ ಸುನೀತಾ, ಗ್ರಾಮದ ಗಣ್ಯರು, ಪಾಲಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಮಹಿಳೆಯರಿಗೆ ಶಕ್ತಿ ತುಂಬಲು ನಮ್ಮ ಸರ್ಕಾರ ಬದ್ಧ- ಡಿ.ಕೆ. ಶಿವಕುಮಾರ್

ಭಾರತ ಜೋಡೋ ಯುವ ಸಂಘ ನಿಮ್ಮ ಸಂಘಟನೆ, ಸಂಸ್ಕೃತಿ, ಕಲೆ ಅನಾವರಣಕ್ಕೆ ವೇದಿಕೆ

ಬೀದರ, ಜು.08-

ನಮ್ಮ ಸರ್ಕಾರ ಮಹಿಳೆಯರ ಸಬಲೀಕರಣಕ್ಕೆ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ರಾಜ್ಯದ ಮಹಿಳೆಯರು ನಮಗೆ ಬೆಂಬಲ ನೀಡಿದ್ದು, ಅವರಿಗೆ ಶಕ್ತಿ ತುಂಬಲು ನಮ್ಮ ಸರ್ಕಾರ ಬದ್ಧವಾಗಿದೆ ಎಂದು ಮುಖ್ಯಮಂತ್ರಿ ಶ್ರೀ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ಬಸವಕಲ್ಯಾಣದ ಬಸವ ಮಹಾಮನೆಯಲ್ಲಿ ಸೋಮವಾರ ನಡೆದ ಅಕ್ಕಪಡೆ-ಮಹಿಳೆಯರ ಶಕ್ತಿ ಪ್ರದರ್ಶನ ಮತ್ತು ಆತ್ಮರಕ್ಷಣಾ ಕಾರ್ಯಕ್ರಮದಲ್ಲಿ ಶಿವಕುಮಾರ್ ಅವರು ಭಾಗವಹಿಸಿ ಮಾತನಾಡಿದರು.

ಹೆಣ್ಣು ಕುಟುಂಬದ ಕಣ್ಣು. ಹೆಣ್ಣು ಎಂದರೆ ಭೂಮಿ, ಧೈರ್ಯ, ಭರವಸೆ, ಒಗ್ಗಟ್ಟು, ಶಕ್ತಿ, ಬೆಳಕು. ನಿಮ್ಮ ಮಾರ್ಗದರ್ಶನದಂತೆ ಪ್ರತಿಯೊಂದು ಕುಟುಂಬ ಬೆಳಗುತ್ತಿದೆ. ನಾರಿ ಶಕ್ತಿ ದೇಶದ ಶಕ್ತಿ. ನಾನು ಇಂದು ಬಸವಕಲ್ಯಾಣದಲ್ಲಿರುವ ಬಸವಣ್ಣನವರ ಅನುಭವ ಮಂಟಪದಿಂದ ಬರ ಪರಿಸ್ಥಿತಿ ಅಧ್ಯಯನ ಪ್ರವಾಸ ಆರಂಭಿಸಲು ಬಂದಿದ್ದೇನೆ. ಇಲ್ಲಿಂದ ಕಲಬುರ್ಗಿಗೆ ಹೋಗಿ, ಕಲ್ಯಾಣ ಕರ್ನಾಟಕದ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳ ಜೊತೆ ಚರ್ಚೆ ಮಾಡುತ್ತೇನೆ. ನಾವು ಯಾವುದೇ ಗ್ರಾಮಕ್ಕೆ ಹೋದರೂ ಅಲ್ಲಿ ಗ್ರಾಮದೇವತೆ ಬಗ್ಗೆ ಕೇಳುತ್ತೇವೆ. ನಮ್ಮ ಭೂಮಿಯನ್ನು ಮಾತೃಭೂಮಿ, ಭೂಮಿತಾಯಿ ಎಂದು ಪರಿಗಣಿಸುತ್ತೇವೆ ಎಂದು ಬಣ್ಣಿಸಿದರು.

ಭಾರತ ಜೋಡೋ ಯುವ ಸಂಘ ನಿಮ್ಮ ಸಂಘಟನೆ, ಸಂಸ್ಕೃತಿ, ಕಲೆ ಅನಾವರಣಕ್ಕೆ ವೇದಿಕೆ: ಮಹಿಳೆಯರ ಸುರಕ್ಷತೆಗಾಗಿ ಅಕ್ಕಪಡೆ ಆರಂಭಿಸಲಾಗಿದೆ. ನಮ್ಮ ಸರ್ಕಾರ ಲಕ್ಷ್ಮಿ ಹೆಬ್ಬಾಳ್ಕರ್ ಅವರ ಮುಖಂಡತ್ವದಲ್ಲಿ ಈ ಪಡೆಯನ್ನು ರಚಿಸಿದೆ. ಈ ಪಡೆಗೆ ಸೇರಿರುವವರಿಗೆ ತುಂಬು ಹೃದಯದ



ಅಭಿನಂದನೆ ಸಲ್ಲಿಸುತ್ತೇನೆ. ನಿಮ್ಮ ಶಕ್ತಿ, ಧೈರ್ಯ, ಸಾಧನೆಗೆ ಫಲ ಸಿಗುತ್ತದೆ. ಮುಂದಿನ ದಿನಗಳಲ್ಲಿ ನಮ್ಮ ಸರ್ಕಾರ ಐತಿಹಾಸಿಕ ತೀರ್ಮಾನ ಮಾಡಲಿದೆ. ಮಹಿಳೆಯರಿಗಾಗಿ ಶಕ್ತಿ, ಗೃಹಜ್ಯೋತಿ, ಗೃಹಲಕ್ಷ್ಮಿ ಕಾರ್ಯಕ್ರಮವನ್ನು ಈಗಾಗಲೇ ನೀಡಿದ್ದೇವೆ.

ಮಹಿಳೆಯರು ಹಾಗೂ ಯುವಕರಿಗೆ ಪ್ರತಿ ಪಂಚಾಯ್ತಿಯಲ್ಲಿ ನಿಮ್ಮ ಸಂಘಟನೆ, ಸಂಸ್ಕೃತಿ, ಕಲೆ ಅನಾವರಣಕ್ಕೆ ಹಾಗೂ ಜಾತ್ಯಾತೀತ ತತ್ವ ಉಳಿಸಿಕೊಂಡು ಒಗ್ಗಟ್ಟಿನಿಂದ ಇರಲು ರಾಜ್ಯದಲ್ಲಿ 10 ಸಾವಿರ ಭಾರತ ಜೋಡೋ ಯವ ಸಂಘ ರಚಿಸಲು ಸರ್ಕಾರ ಆದೇಶ ಮಾಡಿದೆ ಎಂದು ತಿಳಿಸಿದರು.

ನಾವು ಮಾತೃ ದೇವೋಭವ ಎಂದು ಪರಿಗಣಿಸಿದ್ದೇವೆ. ನೀವೆಲ್ಲರೂ ನಮ್ಮ ಜೊತೆ ಕೈಜೋಡಿಸಿ, ನಮಗೆ ಶಕ್ತಿ ತುಂಬಿದ್ದೀರಿ. ನಿಮಗೆ ಶಕ್ತಿ ನೀಡುವ ಜವಾಬ್ದಾರಿ ನಮ್ಮದು. ನಿಮ್ಮಲ್ಲಿ ನಾಯಕತ್ವ ಬೆಳೆಯಬೇಕು. ಪಂಚಾಯ್ತಿಯಿಂದ ಸಂಸತ್ತಿನವರೆಗೂ ನಾಯಕತ್ವ ಬೆಳೆಯಬೇಕು. ರಾಜಕೀಯವಾಗಿ ಮಾತ್ರವಲ್ಲ, ನಿಮ್ಮ ನಿಮ್ಮ ಕ್ಷೇತ್ರದಲ್ಲಿ ನಾಯಕರಾಗಿ ಬೆಳೆಯಬೇಕು. ನಿಮ್ಮ ಜೊತೆಯಲ್ಲಿ ಡಿ.ಕೆ. ಶಿವಕುಮಾರ್ ಹಾಗೂ ಈ ಸರ್ಕಾರ ಇರಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಜಿ. ಪರಮೇಶ್ವರ, ಸಚಿವರಾದ ಈಶ್ವರ ಖಂಡ್ರೆ, ಡಾ ಶರಣ್ ಪ್ರಕಾಶ್ ಪಾಟೀಲ್, ಸಂಸದ ಸಾಗರ್ ಖಂಡ್ರೆ, ಮಾಜಿ ಸಚಿವ ರಹೀಮ್ ಖಾನ್, ಎಂಎಲ್ಸಿ ಗಳಾದ ಬಸನಗೌಡ ಬಾದರ್ಲಿ, ಮಾಜಿ ಎಂಎಲ್ಸಿ ವಿಜಯ್ ಸಿಂಗ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಪ್ರತಿಮೆಗೆ ಮುಖ್ಯಮಂತ್ರಿ ಶ್ರೀ ಡಿ.ಕೆ.ಶಿವಕುಮಾರ್ ಮಾಲಾರ್ಪಣೆ ಮಾಡಿ, ಗೌರವ ನಮನ ಸಲ್ಲಿಕೆ

ಬೀದರ, ಜುಲೈ 06, (ಕರ್ನಾಟಕ ವಾರ್ತೆ):-ಬಸವಕಲ್ಯಾಣದಲ್ಲಿ ಇಂದು ಛತ್ರಪತಿ ಶಿವಾಜಿ ಮಹಾರಾಜ, ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್, ಜಗದ್ಗುರು ಬಸವೇಶ್ವರ ಹಾಗೂ ಮಹಾತ್ಮ ಬೊಮ್ಮಗೊಂಡೇಶ್ವರರ ಪ್ರತಿಮೆಗೆ ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಡಿ.ಕೆ.ಶಿವಕುಮಾರ್ ಅವರು ಮಾಲಾರ್ಪಣೆ ಮಾಡಿ, ಗೌರವ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿಗಳಾದ ಡಾ.ಜಿ.ಪರಮೇಶ್ವರ್, ಸಚಿವರಾದ ಈಶ್ವರ್ ಖಂಡ್ರೆ, ಸಂಸದರಾದ ಸಾಗರ ಖಂಡ್ರೆ ಅವರು ಸೇರಿದಂತೆ ಹಲವಾರು ನಾಯಕರು ಹಾಗೂ ಮುಖಂಡರು ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ಕೆಬಿಜೆಎನ್‌ಎಲ್ ಇಂಜಿನಿಯರ್ ಮನೆ, ಕಚೇರಿ ಮೇಲೆ ಲೋಕಾಯುಕ್ತ ದಾಳಿ

ಪಾಟೀಲ್, ಹಂಪನಗೌಡ ಬಾದರ್ಲಿ, ಮಾಜಿ ಸಚಿವ ವೆಂಕಟರಾವ್ ನಾಡಗೌಡ, ಮಾಜಿ ಶಾಸಕ ಪ್ರತಾಪ್ ಗೌಡ ಪಾಟೀಲ, ಶರಣಪ್ಪ ಬಲ್ಲಟಗಿ, ಮಹಮ್ಮದ್ ಶಾಲಂ, ಎನ್. ಶಂಕರಪ್ಪ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ನಂದವಾಡಗಿ ಮಹಾಂತಲಿಂಗ ಶಿವಾಚಾರ್ಯ ಮಹಾಸ್ವಾಮಿ, ಚನ್ನಬಸವ ಶಿವಾಚಾರ್ಯ ಮಹಾಸ್ವಾಮಿ, ಬೂದಿ ಬಸವ ಶಿವಾಚಾರ್ಯರು, ರಾಚೋಟಿ ವೀರ ಶಿವಾಚಾರ್ಯ ಮಹಾಸ್ವಾಮಿ, ರೈತ ಹೋರಾಟಗಾರ ಚಾಮರಸ ಮಾಲಿ ಪಾಟೀಲ್, ಸೋಮವಾರಪೇಟೆಯ ಅಭಿನವ ರಾಚೋಟಿ ವೀರಶಿವಾಚಾರ್ಯ

ರಸ್ತೆ ಬದಿ ತ್ಯಾಜ್ಯ ವಿಲೇವಾರಿ: ತ್ಯಾಜ್ಯಕ್ಕೆ ಬೆಂಕಿ ರಸ್ತೆಗೆ ಕವಿದ ಹೋಗೆ ಜನಸಾಮಾನ್ಯರು ಆಕ್ರೋಶ

ಗಣ, ಮಿನಿ ವಿಧಾನ ಸೌದ ನಿರ್ಮಿ ಸಲು ಹುತ್ತ ಇದ್ದು. ಯೊಆಡಳಿತ ವರ್ಗವೇ ಘನತ್ಯಾಜ್ಯವನ್ನು ಸುಡುತ್ತಿರುವುದು ಸ್ಥಳೀಯರು ಹಾಗೂ ಪ್ರಯಾಣಿಕರ ಪಾಲಿಗೆ ಸಾವಿನ ಆಹ್ವಾನವಾಗಿ ಪರಿಣ ಮಿಸಿದೆ.

ಕಸಕ್ಕೆ ಬೆಂಕಿ ಹಚ್ಚಿದ ಪರಿಣಾಮ ಇಡೀ ರಸ್ತೆಯು ದಟ್ಟ ಹೊಗೆಯಿಂದ ಆವೃತವಾಗುತ್ತಿದ್ದು, ಸಂಚಾರಕ್ಕೆ ಭಾರೀ ಅಡಚಣೆಯಾಗುತ್ತಿದೆ. ದಟ್ಟ ಹೊಗೆಯಿಂದಾಗಿ ಬಸ್, ಲಾರಿ, ಕಾರು, ಬೈಕ್ ಸೇರಿದಂತೆ ವಿವಿಧ ವಾಹನ ಸವಾರರು ಎದುರಿನ ವಾಹನಗಳು ಕಾಣದಂತಾಗಿ ಲೈಟ್ ಹಾಕಿಕೊಂಡು, ಹಾರ್ನ್ ಮೊಳಗಿ ಸುತ್ತಾ ಜೀವ ಕೈಯಲ್ಲಿ ಹಿಡಿದು ಸಂಚ ರಿ ಸುವ ದುಸ್ಥಿತಿ ನಿರ್ಮಾಣವಾಗಿದೆ.

ಸಾರ್ವಜನಿಕರ ಪರದಾಟ: ಈ ದಟ್ಟ ಹೊಗೆಯು ಅರ್ಧ ಕಿಲೋಮೀ ಟರ್ ವರೆಗೂ ಹರಡುತ್ತಿದ್ದು, ಸುತ್ತಮುತ್ತಲಿನ ಅಂಗಡಿ ಸಮಸ್ಯೆ ಯಿಂದಾಗಿ ಮನೆ ಹಾಗೂ ಅಂಗಡಿ ಗಳನ್ನು ತೊರೆದು ಓಡುವಂತಾಗಿದೆ. ಶಾಲಾ ಮಕ್ಕಳು, ಹಳ್ಳಿಯಿಂದ ಬರುವ ಜನಸಾಮಾನ್ಯರು, ದಾರಿಹೋಕರು ಮೂಗು ಮುಚ್ಚಿಕೊಂಡು ಉಸಿರು ಬಿಗಿಹಿಡಿದು ಸಂಚರಿಸುತ್ತಿದ್ದಾರೆ. ಇಡೀ ರಸ್ತೆ ಸಾವಿನ ಹಾಸಿಗೆಯಂತಾಗಿದ್ದು, ಯಾವುದೇ ಕ್ಷಣದಲ್ಲಿ ಭೀಕರ ಅಪಘಾತ ಸಂಭವಿಸುವ ಆತಂಕ ಉಂಟಾಗಿದೆ.

ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಆಕ್ರೋಶ: ಈ ಭೀಕರ ಪರಿಸ್ಥಿತಿ ಜನರ ಕಣ್ಣಿಗೆ ಕಾಣುತ್ತಿದ್ದರೂ, ಸಿರವಾರದ ಅಧಿಕಾರಿಗಳು ಮಾತ್ರ ಕ್ಯಾರೆ ಎನ್ನದೆ ಕಚೇರಿಗಳಲ್ಲಿ ಆರಾ ಮಾಗಿ ಕುಳಿತಿದ್ದಾರೆ. ಜನರ ಜೀವದ ಜೊತೆ ಚೆಲ್ಲಾಟವಾಡುತ್ತಿರುವ ಅಧಿಕಾರಿಗಳ ವರ್ತನೆಗೆ ಸಾರ್ವಜ ನಿಕರು ತೀವ್ರ ಆಕ್ರೋಶ ವ್ಯಕ್ತಪಡಿ ಸಿದ್ದಾರೆ.

ಎಸ್‌ಐಆರ್ 2026 ಜಾಗೃತಿ ಓಟಕ್ಕೆ ಸಜ್ಜಾದ ರಾಯಚೂರು ಜು.9ರಂದು ಮ್ಯಾರಥಾನ್ ಸೈಕ್ಲೋಥಾನ್; ಮತದಾರರ ಪಟ್ಟಿ ಪರಿಷ್ಕರಣೆ, ನಗರ ಸ್ವಚ್ಛತೆ ಕುರಿತು ಜನಜಾಗೃತಿ

ಸಂಯುಕ್ತ ಆಶ್ರಯದಲ್ಲಿ 'ಸದೃಢ ದೇಹ ಸ್ವಚ್ಛ ಸಮಾಜ ಬಲಿಷ್ಠ ಪ್ರಜಾಪ್ರಭುತ್ವಕ್ಕಾಗಿ ನಮ್ಮ ಓಟ' ಎಂಬ ಘೋಷವಾಕ್ಯದಡಿ, ಸ್ವೀಪ್ (SVEEP) ಕಾರ್ಯಕ್ರಮದ ಅಂಗವಾಗಿ ಈ ಜಾಗೃತಿ ಅಭಿಯಾನ ನಡೆಯಲಿದೆ.

ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಿಂದ ಆರಂಭವಾಗುವ ಮ್ಯಾರಥಾನ್ ಸೈಕ್ಲೋಥಾನ್ ಅಂಬೇಡ್ಕರ್ ವೃತ್ತ, ತೀನ್ ಕಂದಿಲ್ ರಸ್ತೆ, ಮಹಾವೀರ ವೃತ್ತ, ಚಂದ್ರಮೌಳೇಶ್ವರ ವೃತ್ತ ಹಾಗೂ ಬಸವೇಶ್ವರ ವೃತ್ತ ಮಾರ್ಗವಾಗಿ ಸಂಚರಿಸಿ ಮತ್ತೆ ಕ್ರೀಡಾಂಗಣದಲ್ಲಿ ಸಮಾರೋಪಗೊಳ್ಳಲಿದೆ.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು, ಮಹಾನಗರ ಪಾಲಿಕೆ ಅಧಿಕಾರಿಗಳು, ಸಿಬ್ಬಂದಿ ಸೇರಿದಂತೆ ವಿವಿಧ ಸಂಘ ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಪಾಲ್ಗೊಳ್ಳಲಿದ್ದಾರೆ.

ಮತದಾರರ ಪಟ್ಟಿಯ ಪರಿಷ್ಕರಣೆಯಲ್ಲಿ ನಾಗರಿಕರ ಸಕ್ರಿಯ ಪಾಲ್ಗೊಳ್ಳುವಿಕೆ, ನಗರ ಸ್ವಚ್ಛತೆ, ಮೂಲದಲ್ಲಿಯೇ ಕಸ ವಿಂಗಡಣೆ ಹಾಗೂ ವೈಜ್ಞಾನಿಕ ಘನತ್ಯಾಜ್ಯ ನಿರ್ವಹಣೆ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ಆಯೋಜಿಸಿರುವ ಈ ಕಾರ್ಯಕ್ರಮದಲ್ಲಿ ಯುವಕರು, ವಿದ್ಯಾರ್ಥಿಗಳು, ಮಹಿಳೆಯರು, ಕ್ರೀಡಾಪಟುಗಳು, ಸೈಕ್ಲಿಂಗ್ ಆಸಕ್ತರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸುವಂತೆ ಮಹಾನಗರ ಪಾಲಿಕೆ ಆಯುಕ್ತರು ಮನವಿ ಮಾಡಿದ್ದಾರೆ.

ದೇವಸೂಗೂರು ಕೆಐಎಡಿಬಿಯ ಬ್ರಿಕ್ಸ್ ಕಂಪನಿಗಳ ವಿರುದ್ಧ ಕಠಿಣ ಕ್ರಮಕ್ಕೆ ಜಿಲ್ಲಾಧಿಕಾರಿಗೆ ಮನವಿ

ಸಮಸ್ಯೆ ಎದುರಿಸುತ್ತಿದ್ದಾರೆ ಎಂದು ಕರವೇ ಆರೋಪಿಸಿದೆ.

ಮನವಿಯಲ್ಲಿ ಹಾರುಬೂದಿಯನ್ನು ಮುಚ್ಚಿದ ವಾಹನಗಳಲ್ಲೇ ಸಾಗಣೆ ಕಡ್ಡಾಯಗೊಳಿಸುವುದು, ರಸ್ತೆಗಳಿಗೆ ನಿಯಮಿತವಾಗಿ ನೀರು ಸಿಂಪಡಿಸುವುದು, ದೇವಸೂಗೂರು ಕೆಐಎಡಿಬಿಯ ಬ್ರಿಕ್ಸ್ ಕಂಪನಿಗಳ ಸಮಗ್ರ ಪರಿಶೀಲನೆ ನಡೆಸಿ ನಿಯಮ ಉಲ್ಲಂಘಿಸಿದವರ ವಿರುದ್ಧ ಕಾನೂನು ಕ್ರಮ ಜರುಗಿಸುವುದು, ಸ್ಥಳೀಯರಿಗೆ ವಿಶೇಷ ಆರೋಗ್ಯ ತಪಾಸಣಾ ಶಿಬಿರಗಳನ್ನು ಆಯೋಜಿಸುವುದು ಹಾಗೂ ಪರಿಸರ ಸಂರಕ್ಷಣೆಗೆ ಶಾಶ್ವತ ಕ್ರಮಗಳನ್ನು ಕೈಗೊಳ್ಳುವಂತೆ ಆಗ್ರಹಿಸಲಾಗಿದೆ.

ಸಾರ್ವಜನಿಕರ ಆರೋಗ್ಯದೊಂದಿಗೆ ಚೆಲ್ಲಾಟವಾಡುವವರ ವಿರುದ್ಧ ಜಿಲ್ಲಾಡಳಿತ ತಕ್ಷಣ ಕಠಿಣ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ಸ್ಥಳೀಯರನ್ನು ಸಂಘಟಿಸಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಕರವೇ ಜಿಲ್ಲಾ ಪಂಚಾಯತ್ ಕ್ಷೇತ್ರ ಚಿಕ್ಕಸೂಗೂರು ಘಟಕದ ಅಧ್ಯಕ್ಷ ಸುರೇಶ ಬಾಬು ಎಚ್ಚರಿಸಿದರು.

ಈ ಸಂದರ್ಭದಲ್ಲಿ ವೀರೇಶ, ಬಸನಗೌಡ, ನರಸರೆಡ್ಡಿ ನಾಯಕ್, ಅಂಜಪ್ಪ, ಮರಿಲಿಂಗ ನಾಯಕ್, ಲಾಜರ್ ಮ್ಯಾತ್ರ, ದುರುಗಪ್ಪ, ಸೂಗಪ್ಪ, ನಲ್ಲಾರೆಡ್ಡಿ, ಸಾಬರೆಡ್ಡಿ, ದಂಡಪ್ಪ, ಬಾಲಪ್ಪ, ಪೋಳಪ್ಪ ಹಾಗೂ ಹನುಮೇಶ ನಾಯಕ್

ಬಂಗಾಳದಲ್ಲಿ ಫ್ಯಾಸಿಸ್ಟ್ ದಾಳಿಗಳನ್ನು ತಕ್ಷಣ ನಿಲ್ಲಿಸಿ: ಸಿಪಿಐ(ಎಂಎಲ್) ರೆಡ್ ಸ್ಟಾರ್

ಆರಾಧನಾ ಸ್ಥಳಗಳ ಮೇಲಿನ ದಾಳಿಗೆ ಖಂಡನೆ : ಪ್ರಜಾಸತ್ತಾತ್ಮಕ ಶಕ್ತಿಗಳ ಐಕ್ಯ ಹೋರಾಟಕ್ಕೆ ಕರೆ



ರಾಯಚೂರು,ಜು.8-

ಪಶ್ಚಿಮ ಬಂಗಾಳದಲ್ಲಿ ಅಲ್ಪಸಂಖ್ಯಾತರ ಆರಾಧನಾ ಸ್ಥಳಗಳ ಮೇಲೆ ನಡೆಯುತ್ತಿರುವ ದಾಳಿಗಳು, ದ್ವೇಷದ ರಾಜಕೀಯ ಹಾಗೂ ಭೀತಿಯ ವಾತಾವರಣ ನಿರ್ಮಿಸುವ ಪ್ರಯತ್ನಗಳು ದೇಶದ ಸಂವಿಧಾನಬದ್ಧ, ಜಾತ್ಯಾತೀತ ಮತ್ತು ಪ್ರಜಾಸತ್ತಾತ್ಮಕ ಮೌಲ್ಯಗಳ ಮೇಲಿನ ಸಂಘಟಿತ ದಾಳಿಗಳಾಗಿವೆ ಎಂದು ಸಿಪಿಐ(ಎಂಎಲ್) ರೆಡ್ ಸ್ಟಾರ್ ಕರ್ನಾಟಕ ರಾಜ್ಯ ಸಮಿತಿಯು ಆರೋಪಿಸಿದೆ.

ಈ ಕುರಿತು ರಾಜ್ಯ ಕಾರ್ಯದರ್ಶಿ ಎಂ. ಗಂಗಾಧರ್ ಅವರು ಬಿಡುಗಡೆ ಮಾಡಿದ ಪತ್ರಿಕಾ ಪ್ರಕಟಣೆಯಲ್ಲಿ, ಧರ್ಮ, ಜಾತಿ ಮತ್ತು ಸಮುದಾಯಗಳ ನಡುವೆ ದ್ವೇಷ ಬಿತ್ತಿ ರಾಜಕೀಯ ಲಾಭ ಪಡೆಯುವ ಆರ್‌ಎಸ್‌ಎಸ್- ಬಿಜೆಪಿಯ ಹಿಂದೂತ್ವ ರಾಜಕೀಯವು ದೇಶದ ಏಕತೆ ಹಾಗೂ ಪ್ರಜಾಪ್ರಭುತ್ವಕ್ಕೆ ಗಂಭೀರ ಅಪಾಯ ತಂದೊಡ್ಡುತ್ತಿದೆ ಎಂದು ತಿಳಿಸಿದ್ದಾರೆ.

ಬಂಗಾಳದಲ್ಲಿ ಈ ಹಿಂದೆ ಕ್ರಾಂತಿಕಾರಿ ನಾಯಕ ಲೆನಿನ್ ಅವರ ಪ್ರತಿಮೆಯನ್ನು ಧ್ವಂಸಗೊಳಿಸಿದ ಘಟನೆ ಹಾಗೂ ಇದೀಗ ಅಲ್ಪಸಂಖ್ಯಾತರ ಧಾರ್ಮಿಕ ಕೇಂದ್ರಗಳ ಮೇಲಿನ ದಾಳಿಗಳು ಭಿನ್ನಾಭಿಪ್ರಾಯಗಳನ್ನು ಮತ್ತು ಪ್ರಜಾಸತ್ತಾತ್ಮಕ ಧ್ವನಿಗಳನ್ನು ಹತ್ತಿಕ್ಕುವ ಫ್ಯಾಸಿಸ್ಟ್ ರಾಜಕೀಯದ ಭಾಗವಾಗಿವೆ ಎಂದು ಅವರು ಆರೋಪಿಸಿದ್ದಾರೆ.

ಸಂವಿಧಾನದ ಆಶಯಗಳಿಗೆ ಬದ್ಧವಾಗಿರುವ ಎಲ್ಲಾ ಪ್ರಜಾಸತ್ತಾತ್ಮಕ, ಜಾತ್ಯಾತೀತ, ಕಾರ್ಮಿಕ, ರೈತ, ವಿದ್ಯಾರ್ಥಿ, ಯುವಜನ, ಮಹಿಳಾ ಹಾಗೂ ಜನಪರ ಸಂಘಟನೆಗಳು ಈ ಬೆಳವಣಿಗೆಗಳ ವಿರುದ್ಧ ಐಕ್ಯ ಹೋರಾಟ ನಡೆಸಬೇಕಿದೆ. ಮೌನವು ಫ್ಯಾಸಿಸಂಗೆ ಬಲ ನೀಡುತ್ತದೆ; ಪ್ರತಿರೋಧ ಮಾತ್ರ ಪ್ರಜಾಪ್ರ ಭುತ್ವವನ್ನು ರಕ್ಷಿಸುತ್ತದೆ ಎಂದು ಅವರು ಕರೆ ನೀಡಿದ್ದಾರೆ.

ಬಂಗಾಳದಲ್ಲಿ ನಡೆದಿರುವ ಹಿಂಸಾಚಾರ ಹಾಗೂ ಆರಾಧನಾ ಸ್ಥಳಗಳ ಮೇಲಿನ ದಾಳಿಗಳ ಕುರಿತು ಕೇಂದ್ರ ಹಾಗೂ ಸಂಬಂಧಿತ ರಾಜ್ಯ ಸರ್ಕಾರಗಳು ನಿಷ್ಪಕ್ಷಪಾತ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ದ್ವೇಷ ಪ್ರಚೋದನೆ ಮತ್ತು ಸಾಮುದಾಯಿಕ ಹಿಂಸೆಯನ್ನು ಪ್ರೋತ್ಸಾ ಹಿಸುವ ಶಕ್ತಿಗಳ ವಿರುದ್ಧ ಕಠಿಣ ಕ್ರಮ ಜರುಗಿಸಬೇಕೆಂದು ಪ್ರಕಟಣೆಯಲ್ಲಿ ಒತ್ತಾಯಿಸಲಾಗಿದೆ.

ದೇಶದ ಸಂವಿಧಾನ, ಜಾತ್ಯಾತೀತತೆ, ಪ್ರಜಾಪ್ರಭುತ್ವ ಹಾಗೂ ಜನರ ಹಕ್ಕುಗಳನ್ನು ರಕ್ಷಿಸುವ ನಿಟ್ಟಿನಲ್ಲಿ ಎಲ್ಲಾ ಪ್ರಗತಿಪರ ಹಾಗೂ ಪ್ರಜಾಸತ್ತಾತ್ಮಕ ಶಕ್ತಿಗಳು ಸಂಘಟಿತರಾಗಿ ಹೋರಾಟವನ್ನು ತೀವ್ರಗೊಳಿಸಬೇಕೆಂದು ಸಿಪಿಐ(ಎಂಎಲ್) ರೆಡ್ ಸ್ಟಾರ್ ಕರ್ನಾಟಕ ರಾಜ್ಯ ಸಮಿತಿಯು ಕರೆ ನೀಡಿದೆ.

ಹಂಪಿ, ಮೈಸೂರು, ಲಕ್ಕುಂಡಿ ತಾಣಗಳ ಅಭಿವೃದ್ಧಿಗೆ ಬೃಹತ್ ಯೋಜನೆ : ಸಚಿವ ಕೆ.ಜೆ.ಜಾರ್ಜ್

ವಿಜಯನಗರ (ಹೊಸಪೇಟೆ) .ಜ.08-

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ 50 ಜಾಗತಿಕ ಪ್ರವಾಸಿ ತಾಣಗಳ ಅಭಿವೃದ್ಧಿ ಯೋಜನೆಯಡಿ ಕರ್ನಾಟಕದ ಹಂಪಿ, ಮೈಸೂರು ಹಾಗೂ ಲಕ್ಕುಂಡಿ ತಾಣಗಳನ್ನು ವಿಶ್ವಮಟ್ಟದ ಪ್ರವಾಸಿ ಕೇಂದ್ರಗಳಾಗಿ ಅಭಿವೃದ್ಧಿಪಡಿಸಲು ರಾಜ್ಯ ಸರ್ಕಾರ ಸಿದ್ಧತೆ ನಡೆಸಿದ್ದು, ಪ್ರವಾಸೋದ್ಯಮ ಕ್ಷೇತ್ರದ ಸಮಗ್ರ ಬೆಳವಣಿಗೆಗೆ ಖಾಸಗಿ ಸಹಭಾಗಿತ್ವ ಅತ್ಯಗತ್ಯ ಎಂದು ಇಂಧನ ಹಾಗೂ ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ಹೇಳಿದರು.

ಹೊಸ ಮಲಪನಗುಡಿಯ ಹೆರಿಟೇಜ್ ರೆಸಾರ್ಟ್‌ನಲ್ಲಿ ಮಂಗಳವಾರ ನಡೆದ ಗ್ಲೋಬಲ್ ಡೆಸ್ಟಿನೇಷನ್ ಡೆವಲಪ್‌ಮೆಂಟ್ ಯೋಜನೆ ಕುರಿತ ರಾಜ್ಯಮಟ್ಟದ ಸಮಾಲೋಚನಾ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಯುನೆಸ್ಕೋ ಪಾರಂಪರಿಕ ತಾಣವಾಗಿರುವ ಹಂಪಿಗೆ ಮೊದಲ ಆದ್ಯತೆ ನೀಡಲಾಗಿದ್ದು, ಅದನ್ನು ಭಾರತದ ಪ್ರಮುಖ ಪ್ರವಾಸಿ ಆಕರ್ಷಣೆಯನ್ನಾಗಿ ರೂಪಿಸಲಾಗುವುದು ಎಂದರು.

ಮೈಸೂರು ನಗರವನ್ನು ಇನ್ನಷ್ಟು ಆಧುನಿಕ ಪ್ರವಾಸಿ ಸೌಲಭ್ಯಗಳೊಂದಿಗೆ ಅಭಿವೃದ್ಧಿಪಡಿಸಲಾಗುವುದು. ಕಲ್ಯಾಣಿ ಚಾಲುಕ್ಯರ ವೈಭವವನ್ನು ಹೊಂದಿರುವ ಲಕ್ಕುಂಡಿ ತಾಣವನ್ನು ಭವಿಷ್ಯದ ಪ್ರಮುಖ ಸಾಂಸ್ಕೃತಿಕ ಪ್ರವಾಸಿ ಕೇಂದ್ರವನ್ನಾಗಿ ರೂಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಹಂಪಿ ಸೇರಿದಂತೆ ಪ್ರಮುಖ ಪಾರಂಪರಿಕ ತಾಣಗಳಲ್ಲಿ ವಿವಿಧ ಇಲಾಖೆಗಳ ನಡುವಿನ ಸಮನ್ವಯಕ್ಕಾಗಿ ಡೆಸ್ಟಿನೇಶನ್ ಮ್ಯಾನೇಜ್‌ಮೆಂಟ್ ಆರ್ಗನೈಸೇಶನ್ () ರಚಿಸುವ ಕುರಿತು ಕೇಂದ್ರ ಸರ್ಕಾರದೊಂದಿಗೆ ಚರ್ಚೆ ನಡೆಯುತ್ತಿದೆ. ಇದರಿಂದ ಆಡಳಿತಾತ್ಮಕ ವಿಳಂಬ ಕಡಿಮೆಯಾಗಿ ಹೂಡಿಕೆದಾರರು



ಹಾಗೂ ಪ್ರವಾಸಿಗರಿಗೆ ಅನುಕೂಲವಾಗಲಿದೆ ಎಂದು ಹೇಳಿದರು. ಹೊಸಪೇಟೆ-ಬಳ್ಳಾರಿ ಭಾಗದ ಜಿಂದಾಲ್ ವಿಮಾನ ನಿಲ್ದಾಣದ ರನ್‌ವೇ ವಿಸ್ತರಣೆ ಹಾಗೂ ಹಂಪಿಗೆ ದೇಶದ ಪ್ರಮುಖ ನಗರಗಳಿಂದ ಹೆಚ್ಚಿನ ರೈಲು ಸಂಪರ್ಕ ಕಲ್ಪಿಸಲು ಕೇಂದ್ರ ರೈಲ್ವೆ ಸಚಿವಾಲಯಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದರು.

ಶಾಸಕ ಹೆಚ್.ಆರ್. ಗವಿಯಪ್ಪ ಮಾತನಾಡಿ, ಹಂಪಿಯ 1,200ಕ್ಕೂ ಅಧಿಕ ಸ್ಮಾರಕಗಳನ್ನು ಸಂಪರ್ಕಿಸುವ 15.4 ಕಿ.ಮೀ. ಹೆರಿಟೇಜ್ ವಾಕ್ ನಿರ್ಮಾಣಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಹಂಪಿ ಸ್ಮಾರಕಗಳ ಡಿಜಿಟಲ್ ಸಂರಕ್ಷಣೆ, ಹಂಪಿ ಹಾಗೂ ಬಳ್ಳಾರಿ ರೈಲು ನಿಲ್ದಾಣಗಳ ಪಾರಂಪರಿಕ ಅಭಿವೃದ್ಧಿ, ಕಮಲಾಪುರ ಕೆರೆಯ ಸೌಂದರ್ಯೀಕರಣ, ಅಂತಾರಾಷ್ಟ್ರೀಯ ಮಟ್ಟದ ಇಂಟರ್‌ಪ್ರಿಟೇಷನ್ ಸೆಂಟರ್ ಹಾಗೂ ಪ್ರವಾಸೋದ್ಯಮ ಕಾಲೇಜು ಸ್ಥಾಪನೆಗೂ ಯೋಜನೆ ರೂಪಿಸಲಾಗಿದೆ ಎಂದು ಹೇಳಿದರು.

ಶಾಸಕ ಡಾ. ಎನ್.ಟಿ. ಶ್ರೀನಿವಾಸ್ ಮಾತನಾಡಿ, ಹೂಡಿಕೆದಾರರನ್ನು ಆಕರ್ಷಿಸಲು ಸಿಂಗಲ್ ವಿಂಡೋ ವ್ಯವಸ್ಥೆ ಜಾರಿಯಾಗಬೇಕು. ಸ್ಥಳೀಯ ಯುವಕರಿಗೆ ಉದ್ಯೋಗಾವಕಾಶ ಕಲ್ಪಿಸಲು ಕೌಶಲ್ಯಾಭಿವೃದ್ಧಿ ತರಬೇತಿ ಕೇಂದ್ರಗಳನ್ನು ಆರಂಭಿಸಬೇಕು. ಹಂಪಿ ಸುತ್ತಮುತ್ತಲಿನ ಗ್ರಾಮಗಳಲ್ಲಿ ಕುಡಿಯುವ ನೀರು, ನೈರ್ಮಲ್ಯ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದರು.

ಆರ್‌ಕೆವಿವೈ ತರಬೇತಿಗಳಿಗೆ ವಾಹನ ಪೂರೈಕೆ: ಜು.17ರವರೆಗೆ ದರಪಟ್ಟಿ ಆಹ್ವಾನ

ಸಿಂಧನೂರು, ಜು.8-

2026-27ನೇ ಸಾಲಿನ ಅನುಮೋದಿತ ಕ್ರಿಯಾ ಯೋಜನೆಯಡಿ ಧಡೇಸುಗೂರಿನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ನಡೆಯಲಿರುವ ಆರ್‌ಕೆವಿವೈ (ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ) ಅಡಿಯಲ್ಲಿ ರೈತರು ಹಾಗೂ ರೈತ ಮಹಿಳೆಯರಿಗೆ ಆಯೋಜಿಸಲಾಗುವ ಒಂದು ಮತ್ತು ಮೂರು ದಿನಗಳ ಸಾಂಸ್ಥಿಕ ಹಾಗೂ ಹೊರಾಂಗಣ ತರಬೇತಿ ಕಾರ್ಯಕ್ರಮಗಳಿಗಾಗಿ ವಾಹನ ಪೂರೈಕೆಗೆ ಮುಚ್ಚಿದ ಲಕೋಟೆ ಮೂಲಕ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ.

ಜಿಲ್ಲೆಯ ವಿವಿಧ ತಾಲೂಕುಗಳಿಂದ ರೈತರು ಮತ್ತು ಅತಿಥಿ ಉಪನ್ಯಾಸಕರನ್ನು ತರಬೇತಿ ಕೇಂದ್ರಕ್ಕೆ ಕರೆತರುವುದು ಹಾಗೂ ತರಬೇತಿ ಮುಗಿದ ಬಳಿಕ ಅವರನ್ನು ಸುರಕ್ಷಿತವಾಗಿ ಮರಳಿ ಗ್ರಾಮಗಳಿಗೆ ತಲುಪಿಸುವ ಉದ್ದೇಶದಿಂದ ದಿನಬಾಡಿಗೆ ಆಧಾರದ ಮೇಲೆ ಲಘು ಮತ್ತು ಭಾರಿ ವಾಹನಗಳನ್ನು ಒದಗಿಸಲು ಆಸಕ್ತ ಸಂಸ್ಥೆಗಳು ಹಾಗೂ ವಾಹನ ಮಾಲೀಕರು ದರಪಟ್ಟಿ ಸಲ್ಲಿಸಬಹುದಾಗಿದೆ.

ಆಸಕ್ತರು ತಮ್ಮ ದರಪಟ್ಟಿಗಳನ್ನು ಕಚೇರಿ ವೇಳೆಯಾದ ಬೆಳಿಗ್ಗೆ 10ರಿಂದ ಸಂಜೆ 5.30 ಗಂಟೆಯೊಳಗೆ ಜುಲೈ 17, 2026ರೊಳಗಾಗಿ ಸಹಾಯಕ ಕೃಷಿ ನಿರ್ದೇಶಕರು, ಜಿಲ್ಲಾ ಕೃಷಿ ತರಬೇತಿ ಕೇಂದ್ರ, ಧಡೇಸುಗೂರು ಕಚೇರಿಗೆ ಮುಚ್ಚಿದ ಲಕೋಟೆಯಲ್ಲಿ ಸಲ್ಲಿಸಬೇಕು ಎಂದು ಸಹಾಯಕ ಕೃಷಿ ನಿರ್ದೇಶಕರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

12:35, 8/7/2026 : ಆರ್‌ಕೆವಿವೈ ತರಬೇತಿಗಳಿಗೆ ಕ್ಯಾಟರಿಂಗ್ ದರಪಟ್ಟಿ ಆಹ್ವಾನ

ಸಿಂಧನೂರು, ಜು.8: 2026-27ನೇ ಸಾಲಿನ ಆರ್‌ಕೆವಿವೈ () ಯೋಜನೆಯ ಅನುಮೋದಿತ ಕ್ರಿಯಾ ಯೋಜನೆಯಡಿ ರೈತರು ಹಾಗೂ ರೈತ ಮಹಿಳೆಯರಿಗೆ ಆಯೋಜಿಸಲಾಗುವ 1 ರಿಂದ 3 ದಿನಗಳ ಸಾಂಸ್ಥಿಕ ಮತ್ತು ಹೊರಾಂಗಣ ತರಬೇತಿಗಳಿಗೆ ಊಟೋಪಹಾರ ಪೂರೈಕೆಗಾಗಿ ಕ್ಯಾಟರಿಂಗ್ ಸಂಸ್ಥೆಗಳಿಂದ ಮುಚ್ಚಿದ ಲಕೋಟೆಯಲ್ಲಿ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ.

ಸಹಾಯಕ ಕೃಷಿ ನಿರ್ದೇಶಕರ ಕಚೇರಿ, ಜಿಲ್ಲಾ ಕೃಷಿ ತರಬೇತಿ ಕೇಂದ್ರ, ಧಡೇಸುಗೂರು ವತಿಯಿಂದ ಪ್ರಕಟಣೆ ಹೊರಡಿಸಲಾಗಿದ್ದು, ಜಿಲ್ಲೆಯ ವಿವಿಧ ತಾಲೂಕುಗಳಿಂದ ತರಬೇತಿಗೆ ಆಗಮಿಸುವ ರೈತರು ಮತ್ತು ರೈತ ಮಹಿಳೆಯರಿಗೆ ಊಟ, ಉಪಹಾರ, ಚಹಾ, ಬಿಸ್ಕತ್ ಹಾಗೂ ಸ್ನ್ಯಾಕ್ಸ್ ಪೂರೈಸಲು ಆಸಕ್ತ ಕ್ಯಾಟರಿಂಗ್ ಸಂಸ್ಥೆಗಳು ತಮ್ಮ ದರಪಟ್ಟಿಗಳನ್ನು ಸಲ್ಲಿಸಬಹುದಾಗಿದೆ.

ಆಸಕ್ತ ಸಂಸ್ಥೆಗಳು ಕಚೇರಿ ವೇಳೆಯಾದ ಬೆಳಿಗ್ಗೆ 10ರಿಂದ ಸಂಜೆ 5.30 ಗಂಟೆಯೊಳಗೆ ಜುಲೈ 17, 2026ರೊಳಗೆ ಸಹಾಯಕ ಕೃಷಿ ನಿರ್ದೇಶಕರು, ಜಿಲ್ಲಾ ಕೃಷಿ ತರಬೇತಿ ಕೇಂದ್ರ, ಧಡೇಸುಗೂರು ಕಚೇರಿಗೆ ಮುಚ್ಚಿದ ಲಕೋಟೆಯಲ್ಲಿ ದರಪಟ್ಟಿ ಸಲ್ಲಿಸಬೇಕು ಎಂದು ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಳೆ ಕೊರತೆಯ ನಡುವೆಯೂ 15,174 ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಬಿತ್ತನೆ



ಸಂಡೂರು/ಬಳ್ಳಾರಿ,ಜು.08-

ಮುಂಗಾರು ಮಳೆ ನಿರೀಕ್ಷಿತ ಪ್ರಮಾಣದಲ್ಲಿ ಸುರಿಯದಿದ್ದರೂ, ಸಂಡೂರು ತಾಲೂಕಿನ ರೈತರು ಕೃಷಿ ಚಟುವಟಿಕೆಗಳನ್ನು ಚುರುಕುಗೊಳಿಸಿದ್ದು, ಜುಲೈ 7ರ ವೇಳೆಗೆ ಒಟ್ಟು 15,174 ಹೆಕ್ಟೇರ್ ಪ್ರದೇಶದಲ್ಲಿ ವಿವಿಧ ಬೆಳೆಗಳ ಬಿತ್ತನೆ ಪೂರ್ಣಗೊಂಡಿದೆ. ಕೃಷಿ ಇಲಾಖೆಯ ಮಾಹಿತಿ ಪ್ರಕಾರ, ಸಂಡೂರು, ಚೋರನೂರು ಹಾಗೂ ತೋರಣಗಲ್ಲು ಹೋಬಳಿಗಳಲ್ಲಿ 11,988 ಹೆಕ್ಟೇರ್‌ನಲ್ಲಿ ಆಹಾರ ಧಾನ್ಯಗಳು, 730 ಹೆಕ್ಟೇರ್‌ನಲ್ಲಿ ಎಣ್ಣೆಕಾಳುಗಳು ಹಾಗೂ 2,367 ಹೆಕ್ಟೇರ್‌ನಲ್ಲಿ ವಾಣಿಜ್ಯ ಬೆಳೆಗಳು ಬಿತ್ತನೆಯಾಗಿವೆ. ಆಹಾರ ಧಾನ್ಯಗಳಲ್ಲಿ ಮೆಕ್ಕೆಜೋಳ 8,926 ಹೆಕ್ಟೇರ್ ಪ್ರದೇಶದಲ್ಲಿ ಅತಿ ಹೆಚ್ಚು ಬಿತ್ತನೆಯಾಗಿದ್ದು, ರಾಗಿ 1,606 ಹೆಕ್ಟೇ,ರ ಭತ್ತ 633 ಹೆಕ್ಟೇರ್ ಸಜ್ಜೆ 40 ಹೆಕ್ಟೇರ್ ಹಾಗೂ ಇತರೆ ಸಿರಿಧಾನ್ಯಗಳು ಬೆಳೆಯಲಾಗಿದೆ. ಬೇಳೆಕಾಳುಗಳಲ್ಲಿ ತೊಗರಿ 644 ಹೆಕ್ಟೇರ್‌ನಲ್ಲಿ ಬಿತ್ತನೆಯಾಗಿದೆ. ವಾಣಿಜ್ಯ ಬೆಳೆಗಳಲ್ಲಿ ಹತ್ತಿ 2,367 ಹೆಕ್ಟೇರ್ ಪ್ರದೇಶದಲ್ಲಿ ಪ್ರಮುಖ ಬೆಳೆ ಆಗಿದ್ದು, ಎಣ್ಣೆಕಾಳುಗಳಲ್ಲಿ ಕಡಲೆಕಾಯಿ 526 ಹೆಕ್ಟೇರ್ ಎಳ್ಳು 151 ಹೆಕ್ಟೇರ್ ಹಾಗೂ ಸೂರ್ಯಕಾಂತಿ 36 ಹೆಕ್ಟೇರ್‌ನಲ್ಲಿ ಬಿತ್ತನೆಯಾಗಿದೆ.

ಇನ್ನೊಂದೆಡೆ, ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಮೇಲ್ವಿಚಾರಣಾ ಕೇಂದ್ರದ ಅಂಕಿಅಂಶಗಳ ಪ್ರಕಾರ, ತಾಲೂಕಿನಲ್ಲಿ ಈ ಬಾರಿ ವಾಡಿಕೆಗಿಂತ ಕಡಿಮೆ ಮಳೆಯಾಗಿದೆ. ಕಳೆದ 24 ಗಂಟೆಗಳಲ್ಲಿಯೂ ಅಲ್ಪ ಪ್ರಮಾಣದ ಮಳೆಯಷ್ಟೇ ದಾಖಲಾಗಿದ್ದು, ಈಗಾಗಲೇ ಬಿತ್ತನೆಯಾದ ಬೆಳೆಗಳ ಉತ್ತಮ ಬೆಳವಣಿಗೆಗೆ ನಿರಂತರ ಮಳೆಯ ಅಗತ್ಯವಿದೆ ಎಂದು ಕೃಷಿ ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

ಆರ್‌ಕೆವಿವೈ ತರಬೇತಿಗೆ ಲೇಖನ ಸಾಮಗ್ರಿ ಪೂರೈಕೆಗೆ ದರಪಟ್ಟಿ ಆಹ್ವಾನ ಧಡೇಸುಗೂರು ಜಿಲ್ಲಾ ಕೃಷಿ ತರಬೇತಿ ಕೇಂದ್ರದಿಂದ ಜುಲೈ 17ರವರೆಗೆ ಅರ್ಜಿ ಸಲ್ಲಿಸಲು ಅವಕಾಶ

ರಾಯಚೂರು, ಜು.8: ರಾಷ್ಟ್ರೀಯ ಕೃಷಿ ಅಭಿವೃದ್ಧಿ ಯೋಜನೆ (ಆರ್‌ಕೆವಿವೈ) ಅಡಿಯಲ್ಲಿ ಜಿಲ್ಲೆಯ ರೈತರು ಹಾಗೂ ರೈತ ಮಹಿಳೆಯರಿಗೆ 2026-27ನೇ ಸಾಲಿನಲ್ಲಿ ಆಯೋಜಿಸಲಾಗುವ ತರಬೇತಿ ಕಾರ್ಯಕ್ರಮಗಳಿಗೆ ಅಗತ್ಯವಿರುವ ಲೇಖನ ಸಾಮಗ್ರಿ ಮತ್ತು ಸ್ಟೇಷನರಿ ಪೂರೈಕೆಗೆ ಧಡೇಸುಗೂರು ಜಿಲ್ಲಾ ಕೃಷಿ ತರಬೇತಿ ಕೇಂದ್ರವು ಮುಚ್ಚಿದ ಲಕೋಟೆ ಮೂಲಕ ದರಪಟ್ಟಿ ಆಹ್ವಾನಿಸಿದೆ. ಅನುಮೋದಿತ ಕ್ರಿಯಾ ಯೋಜನೆಯಡಿ ಜಿಲ್ಲೆಯ ವಿವಿಧ ತಾಲೂಕುಗಳ ರೈತರು ಹಾಗೂ ರೈತ ಮಹಿಳೆಯರಿಗೆ ಒಂದು ಮತ್ತು ಮೂರು ದಿನಗಳ ಸಾಂಸ್ಥಿಕ ಹಾಗೂ ಹೊರಾಂಗಣ ತರಬೇತಿಗಳನ್ನು ಹಮ್ಮಿಕೊಳ್ಳಲಾಗುತ್ತಿದ್ದು, ತರಬೇತಿಗಳಿಗೆ ಬೇಕಾಗುವ ಲೇಖನ ಸಾಮಗ್ರಿ ಪೂರೈಕೆಗೆ ಅರ್ಹ ಸಂಸ್ಥೆಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತ ಸಂಸ್ಥೆಗಳು ತಮ್ಮ ದರಪಟ್ಟಿಯನ್ನು ಮುಚ್ಚಿದ ಲಕೋಟೆಯಲ್ಲಿ ಜುಲೈ 17, 2026ರೊಳಗೆ ಕಚೇರಿ ವೇಳೆಯಾದ ಬೆಳಿಗ್ಗೆ 10ರಿಂದ ಸಂಜೆ 5.30 ಗಂಟೆಯೊಳಗೆ ಸಹಾಯಕ ಕೃಷಿ ನಿರ್ದೇಶಕರ ಕಾರ್ಯಾಲಯ, ಜಿಲ್ಲಾ ಕೃಷಿ ತರಬೇತಿ ಕೇಂದ್ರ, ಧಡೇಸುಗೂರು (ತಾ. ಸಿಂಧನೂರು) ಕಚೇರಿಗೆ ಸಲ್ಲಿಸಬೇಕು ಎಂದು ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಾರದರ್ಶಕ ಆಯ್ಕೆ ಪ್ರಕ್ರಿಯೆಯ ಮೂಲಕ ತರಬೇತಿಗಳಿಗೆ ಅಗತ್ಯವಿರುವ ಗುಣಮಟ್ಟದ ಲೇಖನ ಸಾಮಗ್ರಿಗಳನ್ನು ಪೂರೈಸುವ ಉದ್ದೇಶದಿಂದ ಈ ದರಪಟ್ಟಿ ಆಹ್ವಾನಿಸಲಾಗಿದ್ದು, ಆಸಕ್ತ ಹಾಗೂ ಅರ್ಹ ಸಂಸ್ಥೆಗಳು ನಿಗದಿತ ಅವಧಿಯೊಳಗೆ ಅರ್ಜಿ ಸಲ್ಲಿಸುವಂತೆ ಮನವಿ ಮಾಡಲಾಗಿದೆ.

ಜು.10ರಂದು ಜಿಲ್ಲಾಧಿಕಾರಿ ಕಚೇರಿ ಮುತ್ತಿಗೆ: ಅಂಗನವಾಡಿ, ಬಿಸಿಯೂಟ ನೌಕರರ ಬಂದ್‌ಗೆ ಕರೆ

ರಾಯಚೂರು,ಜು.8-

ಐಸಿಡಿಎಸ್ ಯೋಜನೆಗೆ ಬೆಲೆ ಏರಿಕೆಗೆ ಅನುಗುಣವಾಗಿ ಅನುದಾನ ಹೆಚ್ಚಳ, ಅಂಗನವಾಡಿ ಹಾಗೂ ಬಿಸಿಯೂಟ ಯೋಜನೆ ಕಾರ್ಯಕರ್ತೆಯರನ್ನು ನೌಕರರೆಂದು ಪರಿಗಣಿಸುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘ (ಸಿಐಟಿಯು) ಮತ್ತು ರಾಜ್ಯ ಅಕ್ಷರ ದಾಸೋಹ ನೌಕರರ ಸಂಘಟನೆಗಳ ನೇತೃತ್ವದಲ್ಲಿ ಜುಲೈ 10ರಂದು ಜಿಲ್ಲಾಧಿಕಾರಿ ಕಚೇರಿ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಲಾಗುವುದು ಎಂದು ಸಂಘದ ಜಿಲ್ಲಾ ಅಧ್ಯಕ್ಷೆ ಹೆಚ್. ಪದ್ಮಾ ತಿಳಿಸಿದ್ದಾರೆ.

ಕೇಂದ್ರ ಸರ್ಕಾರವು ಐಸಿಡಿಎಸ್ ಯೋಜನೆಗೆ ನೀಡುತ್ತಿರುವ ಅನುದಾನವನ್ನು ಪ್ರಸ್ತುತ ಬೆಲೆ ಏರಿಕೆಗೆ ಅನುಗುಣವಾಗಿ ಹೆಚ್ಚಿಸಬೇಕು.



45ನೇ ಭಾರತೀಯ ಕಾರ್ಮಿಕ ಸಮ್ಮೇಳನದ ತೀರ್ಮಾನದಂತೆ ಅಂಗನವಾಡಿ ಹಾಗೂ ಬಿಸಿಯೂಟ ಯೋಜನೆ ಕಾರ್ಯಕರ್ತೆಯರನ್ನು ಸರ್ಕಾರಿ ನೌಕರರೆಂದು ಪರಿಗಣಿಸಬೇಕು. ಅಲ್ಲದೆ, ರಾಜ್ಯ ಸರ್ಕಾರ ಜಾರಿ ಗೊಳಿಸಿರುವ ಕನಿಷ್ಠ ವೇತನ ಕಾಯ್ದೆ-2026ರ ವ್ಯಾಪ್ತಿಗೆ ಅಂಗನವಾಡಿ ಮತ್ತು ಬಿಸಿಯೂಟ ನೌಕರರನ್ನು ಸೇರಿಸಿ ಕನಿಷ್ಠ ವೇತನ ಸೇರಿದಂತೆ ಎಲ್ಲಾ ಕಾರ್ಮಿಕ ಹಕ್ಕುಗಳನ್ನು ನೀಡಬೇಕು ಎಂದು ಅವರು ಆಗ್ರಹಿಸಿದರು.

ರಾಜ್ಯಾದ್ಯಂತ ಜುಲೈ 10ರಂದು ಅಂಗನವಾಡಿ ಕೇಂದ್ರಗಳು ಹಾಗೂ ಬಿಸಿಯೂಟ ಅಡಿಗೆ ಕಾರ್ಯವನ್ನು ಸ್ಥಗಿತಗೊಳಿಸಿ ಪ್ರತಿಭಟನೆ ನಡೆಸಲಾಗುತ್ತಿದೆ. ಅದರ ಭಾಗವಾಗಿ ರಾಯಚೂರು ಜಿಲ್ಲೆಯ ಎಲ್ಲ ತಾಲ್ಲೂಕುಗಳ ಅಂಗನವಾಡಿ ಮತ್ತು ಬಿಸಿಯೂಟ ನೌಕರರು ಬೆಳಿಗ್ಗೆ 10 ಗಂಟೆಗೆ ಎಕ್ಲಾಸಪುರದಲ್ಲಿರುವ ನೂತನ ಜಿಲ್ಲಾಧಿಕಾರಿ ಕಚೇರಿ ಸಮೀಪದ ಆಂಜನೇಯ ದೇವಸ್ಥಾನದ ಬಳಿ ಸೇರಿ, ಅಲ್ಲಿಂದ ಮೆರವಣಿಗೆಯ ಮೂಲಕ ಜಿಲ್ಲಾಧಿಕಾರಿ ಕಚೇರಿಗೆ ತೆರಳಿ ಮುತ್ತಿಗೆ ಹಾಕಲಿದ್ದಾರೆ.

ಈ ಹೋರಾಟದಲ್ಲಿ ಜಿಲ್ಲೆಯ ಎಲ್ಲ ಅಂಗನವಾಡಿ ಕಾರ್ಯ ಕರ್ತೆಯರು, ಸಹಾಯಕಿಯರು ಹಾಗೂ ಬಿಸಿಯೂಟ ನೌಕರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಹೆಚ್. ಪದ್ಮಾ ಪ್ರಕಟಣೆಯಲ್ಲಿ ಕರೆ ನೀಡಿದ್ದಾರೆ.

ರಾಯಚೂರಲ್ಲಿ ಮ್ಯಾರಥಾನ್-ಸೈಕ್ಲೋಥಾನ್ ಮತದಾರರ ಪಟ್ಟಿ ಪರಿಷ್ಕರಣೆ, ನಗರ ಸ್ವಚ್ಛತೆ ಕುರಿತು ಜಾಗೃತಿ; ಬೆಳಿಗ್ಗೆ 7ಕ್ಕೆ ಜಿಲ್ಲಾ ಕ್ರೀಡಾಂಗಣದಿಂದ ಚಾಲನೆ

ರಾಯಚೂರು, ಜು. 8-

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (-2026), ನಗರ ಸ್ವಚ್ಛತೆ ಹಾಗೂ ಘನ ತ್ಯಾಜ್ಯ ನಿರ್ವಹಣೆಯ ಹೊಸ ನಿಯಮಗಳ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ರಾಯಚೂರು ಮಹಾನಗರ ಪಾಲಿಕೆ ಸಂಯುಕ್ತ ಆಶ್ರಯದಲ್ಲಿ ಜುಲೈ 9ರಂದು ಬೆಳಿಗ್ಗೆ 7 ಗಂಟೆಗೆ ನಗರದ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಿಂದ ಬೃಹತ್ ಮ್ಯಾರಥಾನ್ ಮತ್ತು ಸೈಕ್ಲೋಥಾನ್ ಆಯೋಜಿಸಲಾಗಿದೆ.

ಸದೃಢ ದೇಹ ಸ್ವಚ್ಛ ಸಮಾಜ ಬಲಿಷ್ಠ ಪ್ರಜಾಪ್ರಭುತ್ವಕ್ಕಾಗಿ ನಮ್ಮ ಓಟ ಎಂಬ ಘೋಷವಾಕ್ಯದೊಂದಿಗೆ ನಡೆಯುವ ಕಾರ್ಯಕ್ರಮವು ಜಿಲ್ಲಾ ಕ್ರೀಡಾಂಗಣದಿಂದ ಆರಂಭವಾಗಿ ಅಂಬೇಡ್ಕರ್ ವೃತ್ತ, ತೀನ್ಕಂದಿಲ್, ಮಹಾವೀರ ವೃತ್ತ, ಚಂದ್ರಮೌಳೇಶ್ವರ ವೃತ್ತ ಹಾಗೂ ಬಸವೇಶ್ವರ ವೃತ್ತ ಮಾರ್ಗವಾಗಿ ಸಂಚರಿಸಿ ಮತ್ತೆ ಜಿಲ್ಲಾ ಕ್ರೀಡಾಂಗಣದಲ್ಲಿ ಸಮಾರೋಪಗೊಳ್ಳಲಿದೆ.

ಕಾರ್ಯಕ್ರಮದಲ್ಲಿ ಜಿಲ್ಲೆಯ ಜನಪ್ರತಿನಿಧಿಗಳು, ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ, ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು, ಮಹಾನಗರ ಪಾಲಿಕೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಭಾಗವಹಿಸಲಿದ್ದಾರೆ. ಸಾರ್ವಜನಿಕರು, ಯುವಕರು, ವಿದ್ಯಾರ್ಥಿಗಳು, ಮಹಿಳೆಯರು, ವಿವಿಧ ಸಂಘ-ಸಂಸ್ಥೆಗಳು, ಸ್ವಯಂಸೇವಾ ಸಂಘಟನೆಗಳು, ಕ್ರೀಡಾಪಟುಗಳು ಹಾಗೂ ಸೈಕ್ಲಿಂಗ್ ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಮನವಿ ಮಾಡಲಾಗಿದೆ.

ಈ ಕಾರ್ಯಕ್ರಮದ ಮೂಲಕ ಮತದಾರರ ಪಟ್ಟಿಯ ಪರಿಷ್ಕರಣೆಯಲ್ಲಿ ನಾಗರಿಕರ ಸಕ್ರಿಯ ಪಾಲ್ಗೊಳ್ಳುವಿಕೆ, ನಗರ ಸ್ವಚ್ಛತೆ, ಮೂಲದಲ್ಲಿಯೇ ಕಸ ವಿಂಗಡಣೆ ಹಾಗೂ ಘನ ತ್ಯಾಜ್ಯ ನಿರ್ವಹಣೆಯ ಬಗ್ಗೆ ವ್ಯಾಪಕ ಜನಜಾಗೃತಿ ಮೂಡಿಸುವ ಗುರಿಯನ್ನು ಹೊಂದಲಾಗಿದೆ.

ಮ್ಯಾರಥಾನ್ ಮತ್ತು ಸೈಕ್ಲೋಥಾನ್‌ನಲ್ಲಿ ಭಾಗವಹಿಸಲು ಆಸಕ್ತರು ಗೂಗಲ್ ಫಾರ್ಮ್ ಮೂಲಕ ಪೂರ್ವ ನೋಂದಣಿ ಮಾಡಿಕೊಳ್ಳಬಹುದಾಗಿದೆ ಎಂದು ರಾಯಚೂರು ಮಹಾನಗರ ಪಾಲಿಕೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಿಮ್ಮೂರು ಸುದ್ದಿ

ಸಂಪಾದಕೀಯ

ಬೀದಿ ವ್ಯಾಪಾರಿಗಳ ಬದುಕು ಧ್ವಂಸಗೈಯುವುದೇ ಕಾಂಗ್ರೆಸ್‌ನ ಸಮಾಜವಾದವೇ? -

ಇಂದು ಬೆಂಗಳೂರಿಗೆ ಬೇಕಾಗಿರುವುದು ಬುಲ್ಡೋಜರ್ ರಾಜಕೀಯವಲ್ಲ; ಸಮಗ್ರ ನಗರ ಯೋಜನೆ. ಕಾಂಗ್ರೆಸ್ ತನ್ನನ್ನು ಇನ್ನೂ ಸಾಮಾಜಿಕ ನ್ಯಾಯ ಮತ್ತು ಸಮಾಜವಾದದ ಮೌಲ್ಯಗಳ ಪಕ್ಷವೆಂದು ನಂಬುವುದಾದರೆ, ಬೆಂಗಳೂರಿನ ಬೀದಿ ಬದಿ ವ್ಯಾಪಾರಿಗಳನ್ನು ಕೇವಲ ಒತ್ತುವರಿ ಎಂಬ ದೃಷ್ಟಿಯಿಂದ ನೋಡದೆ, ಜೀವನೋಪಾಯ ಎಂಬ ಮಾನವೀಯ ದೃಷ್ಟಿಕೋನದಿಂದಲೂ ಪರಿಗಣಿಸಬೇಕು.

''ಬಿಸಿಲು, ಮಳೆ, ಗಾಳಿ ನಡುವೆ ಬೀದಿಬದಿಯಲ್ಲಿ ನಿಂತು ವ್ಯಾಪಾರ ಮಾಡಿ ಬದುಕುತ್ತಿದ್ದೇವೆ. ನಮ್ಮ ಮಕ್ಕಳು ನಮ್ಮಂತೆ ಕಷ್ಟ ಪಡಬಾರದು, ಒಳ್ಳೆಯ ಉದ್ಯೋಗ ಗಿಟ್ಟಿಸಿಕೊಂಡು ಉತ್ತಮ ಬದುಕು ಬಾಳಬೇಕೆಂದು ಕಷ್ಟಪಟ್ಟು ದುಡಿದು ಮಕ್ಕಳನ್ನು ಓದಿಸುತ್ತಿದ್ದೇವೆ. ಬೀದಿಬದಿ ವ್ಯಾಪಾರವನ್ನೇ ನಂಬಿದ್ದೇವೆ. ಆದರೆ, ಏಕಾಏಕಿ ಅಧಿಕಾರಿಗಳು ನಮ್ಮ ತಳ್ಳುಗಾಡಿ-ಅಂಗಡಿಗಳನ್ನು ಧ್ವಂಸಗೊಳಿಸಿದ್ದಾರೆ. ವ್ಯಾಪಾರ ಸಾಮಗ್ರಿಗಳನ್ನು ಹೊತ್ತೊಯ್ದಿದ್ದಾರೆ. ಲಕ್ಷಾಂತರ ರೂಪಾಯಿ ನಷ್ಟವಾಗಿದೆ. ಮಕ್ಕಳ ಶಿಕ್ಷಣ, ಮದುವೆಗಾಗಿ ಲಕ್ಷಾಂತರ ಸಾಲ ಮಾಡಿಕೊಂಡಿದ್ದೇವೆ. ಮುಂದೆ ನಮ್ಮ ಬದುಕಿನ ಗತಿಯೇನು? ಅಧಿಕಾರಿಗಳ ಕಚೇರಿ ಮುಂದೆ ಸಾಮೂಹಿಕವಾಗಿ ಸಾವಿಗೆ ಶರಣಾಗಬೇಕೇ? ನಮಗೆ ನ್ಯಾಯ ಕೊಡಿಸಿ, ನಾವು ಬದುಕಿ-ಬಾಳಲು ಅವಕಾಶ ಮಾಡಿಕೊಡಿ. ನಮ್ಮ ನೋವಿಗೆ ಸ್ಪಂದಿಸಿ'' ಎಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಬೀದಿಬದಿ ವ್ಯಾಪಾರಿಗಳು ತಮ್ಮ ಅಳಲು ತೋಡಿಕೊಳ್ಳುತ್ತಿದ್ದಾರೆ. ತಮ್ಮ ಬದುಕಿನ ಆಧಾರವಾದ ಬೀದಿಬದಿ ವ್ಯಾಪಾರವನ್ನು ಕಸಿದುಕೊಳ್ಳಬೇಡಿ ಎಂದು ಸರ್ಕಾರದ ಎದುರು ಅಂಗಲಾಚುತ್ತಿದ್ದಾರೆ.

ಆದರೆ, ಆಳುವ ಸರ್ಕಾರ ಕಣ್ಣಿದ್ದೂ ಕುರುಡಾಗಿ, ಕಿವಿಯಿದ್ದೂ ಕಿವುಡಾಗಿ ವರ್ತಿಸುತ್ತಿದೆ. ಬಡ ವ್ಯಾಪಾರಿಗಳ ಬದುಕನ್ನು ಬೀದಿಗೆ ತರಲು ಜೆಸಿಬಿಗಳೊಂದಿಗೆ ಬೆಂಗಳೂರು ನಗರ ಅಭಿವೃದ್ಧಿ ಸಚಿವ ಕೃಷ್ಣಬೈರೇಗೌಡ ಮತ್ತು ಅವರ ಇಲಾಖೆಯ ಅಧಿಕಾರಿಗಳು ಹೌಹಾರಿ ಬಡ ವ್ಯಾಪಾರಿಗಳ ಮೇಲೆ ಮುಗಿಬಿದ್ದಿದ್ದಾರೆ. ಫುಟ್‌ಪಾತ್ ತೆರವು ಅಭಿಯಾನ ಹೆಸರಿನಲ್ಲಿ ಬೀದಿ ವ್ಯಾಪಾರಿಗಳ ಜೀವ-ಜೀವನವನ್ನು ಕಸಿದುಕೊಳ್ಳುತ್ತಿದ್ದಾರೆ.

ನಗರ ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರ ನೇತೃತ್ವದಲ್ಲಿ ಫುಟ್‌ಪಾತ್ ತೆರವು ಕಾರ್ಯಾಚರಣೆಗಳು ನಡೆಯುತ್ತಿವೆ. ಈ ಅಭಿಯಾನವು ಬೆಂಗಳೂರು ನಗರವನ್ನು ಸುಂದರ, ಸ್ವಚ್ಛ ಮತ್ತು ಪಾದಚಾರಿಗಳಿಗೆ ಸುರಕ್ಷಿತ ಫುಟ್‌ಪಾತ್ ವ್ಯವಸ್ಥೆಯನ್ನು ಒದಗಿಸುವ ಗುರಿ ಹೊಂದಿದೆ ಎಂದು ಸಚಿವರು ಹೇಳಿಕೊಂಡಿದ್ದಾರೆ. ಆದರೆ, ಏಕಮುಖ ಅಭಿವೃದ್ಧಿ ಎಂಬ ಹೆಸರಿನಲ್ಲಿ ಸಾವಿರಾರು ಬಡ ಕುಟುಂಬಗಳ ಜೀವನೋಪಾಯವನ್ನು ಬಲಿಕೊಡುವ ಕ್ರೌರ್ಯವೂ ಇದರ ಹಿಂದಿದೆ ಎಂಬುದನ್ನು ಸಚಿವರು ಮರೆತಿದ್ದಾರೆ ಅಥವಾ ಮರೆತಂತೆ ನಟಿಸುತ್ತಿದ್ದಾರೆ.

ಬೆಂಗಳೂರಿನಲ್ಲಿ ಅಂದಾಜು ಎರಡು ಲಕ್ಷಕ್ಕೂ ಅಧಿಕ ಬೀದಿಬದಿ ವ್ಯಾಪಾರಿಗಳಿದ್ದಾರೆ. ಹಣ್ಣು, ತರಕಾರಿ, ಹೂವು, ತಿಂಡಿ, ಗೃಹೋಪಯೋಗಿ ವಸ್ತು ಸೇರಿದಂತೆ ಅನೇಕ ಸಣ್ಣ ವ್ಯಾಪಾರಗಳ ಮೂಲಕ ಸಾವಿರಾರು ಕುಟುಂಬಗಳು ಬದುಕು ಸಾಗಿಸುತ್ತಿವೆ. ರಸ್ತೆ ಬದಿಯಲ್ಲಿ ದುಡಿಯುವ ಈ ಕಾಯಕವು ಅವರ ಆಯ್ಕೆಯಲ್ಲ; ಬದುಕಿನ ಅನಿವಾರ್ಯತೆ. ಬಡತನ, ಆರ್ಥಿಕ ಅಸಹಾಯಕತೆ ಹಾಗೂ ಬದುಕು ಸಾಗಿಸಬೇಕಾದ ಅನಿವಾರ್ಯತೆಯಿಂದಾಗಿ ಅವರೆಲ್ಲರೂ ರಸ್ತೆ ಬದಿಯನ್ನೇ ಜೀವನೋಪಾಯದ ಸ್ಥಳವನ್ನಾಗಿ ಮಾಡಿಕೊಂಡಿದ್ದಾರೆ.

ಈ ವ್ಯಾಪಾರಿಗಳಲ್ಲಿ ಹಿರಿಯ ನಾಗರಿಕರು, ಒಂಟಿ ಮಹಿಳೆಯರು, ವಿಶೇಷ ಚೇತನರು ಹಾಗೂ ಸಮಾಜದ ಅತ್ಯಂತ ದುರ್ಬಲ ವರ್ಗದವರೇ ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. ಇವರಲ್ಲಿ ಅನೇಕರು ಮಹಾನಗರ ಪಾಲಿಕೆಯ ಸಮೀಕ್ಷೆಗೆ ಒಳಪಟ್ಟಿದ್ದಾರೆ. ಕೇಂದ್ರ ಸರ್ಕಾರದ ಪಿಎಂ-ಸ್ವನಿಧಿ ಯೋಜನೆಯಡಿ ಸಾಲ ಪಡೆದಿದ್ದಾರೆ. ಕಾರ್ಮಿಕ ಸಂಘಗಳಲ್ಲಿ ನೋಂದಾಯಿತರಾಗಿದ್ದಾರೆ. ಮುಖ್ಯವಾಗಿ, ಬೀದಿ ವ್ಯಾಪಾರಿಗಳ (ಜೀವನೋಪಾಯ ಸಂರಕ್ಷಣೆ ಮತ್ತು ವ್ಯಾಪಾರ ನಿಯಂತ್ರಣ) ಕಾಯ್ದೆ2014ರ ಅಡಿಯಲ್ಲಿ ಕಾನೂನುಬದ್ಧ ಹಕ್ಕುಗಳನ್ನು ಹೊಂದಿದ್ದಾರೆ.

ಆದರೆ, ಇತ್ತೀಚಿನ ತೆರವು ಕಾರ್ಯಾಚರಣೆಗಳಲ್ಲಿ ಅವರನ್ನು ಕೇವಲ ಒತ್ತುವರಿದಾರರು ಎಂಬ ಒಂದೇ ಪದದಲ್ಲಿ ಗುರುತಿಸಲಾಗುತ್ತಿದೆ. ವ್ಯಾಪಾರಿಗಳ ಅಂಗಡಿಗಳನ್ನು ತೆರವುಗೊಳಿಸುವ ಕಾರ್ಯಾಚರಣೆಗಳು ಅನೇಕ ಕಡೆ ಯಾವುದೇ ಪರ್ಯಾಯ ವ್ಯವಸ್ಥೆಯಿಲ್ಲದೆ ನಡೆಯುತ್ತಿವೆ.

ಗಮನಾರ್ಹವಾಗಿ, 2014ರ ಕಾಯ್ದೆಯ ಸೆಕ್ಷನ್ 3(3) ಪ್ರಕಾರ ನಗರದಲ್ಲಿರುವ ಎಲ್ಲ ಬೀದಿ ವ್ಯಾಪಾರಿಗಳ ಸಮಗ್ರ ಸಮೀಕ್ಷೆ ಪೂರ್ಣಗೊಳ್ಳುವವರೆಗೆ ಯಾರನ್ನೂ ಒಕ್ಕಲೆಬ್ಬಿಸುವಂತಿಲ್ಲ. ಅದೇ ರೀತಿ ಸೆಕ್ಷನ್ 18ರ ಪ್ರಕಾರ ಯಾವುದೇ ವ್ಯಾಪಾರಿಯನ್ನು ತೆರವುಗೊಳಿಸುವ ಮೊದಲು ಕನಿಷ್ಠ 30 ದಿನಗಳ ಲಿಖಿತ ನೋಟಿಸ್ ನೀಡುವುದು ಕಡ್ಡಾಯ. ಬೆಂಗಳೂರಿನಲ್ಲಿ ಇನ್ನೂ ಸಂಪೂರ್ಣ ಸಮೀಕ್ಷೆ ಮುಗಿದಿಲ್ಲ, ಎಲ್ಲರಿಗೂ ಗುರುತಿನ ಚೀಟಿ ನೀಡಲಾಗಿಲ್ಲ ಹಾಗೂ ಟೌನ್ ವೆಂಡಿಂಗ್ ಕಮಿಟಿಗಳ ಕಾರ್ಯ ಸಂಪೂರ್ಣವಾಗಿ ಜಾರಿಯಾಗಿಲ್ಲ. ಇಷ್ಟೆಲ್ಲ ಕೆಲಸಗಳು ಬಾಕಿ ಇರುವಾಗಲೇ ಏಕಾಏಕಿ ತೆರವು ಕಾರ್ಯಾಚರಣೆಗಳು ನಡೆಯುತ್ತಿರುವುದು ಕಾನೂನಾತ್ಮಕ ಪ್ರಶ್ನೆಗಳನ್ನು ಹುಟ್ಟುಹಾಕಿದೆ.

ವಾಸ್ತವದಲ್ಲಿ, ಪಾದಚಾರಿ ಮಾರ್ಗಗಳ ನಿಜವಾದ ಅತಿಕ್ರಮಣಕಾರರು ಯಾರು? ನಗರದ ಹಲವೆಡೆ ಫುಟ್‌ಪಾತ್‌ಗಳ ಮೇಲೆ ಐಷಾರಾಮಿ ಕಾರುಗಳು ಮತ್ತು ದ್ವಿಚಕ್ರ ವಾಹನಗಳು ದಿನವಿಡೀ ನಿಲ್ಲಿಸಲಾಗುತ್ತಿದೆ. ವಿದ್ಯುತ್ ಟ್ರಾನ್ಸ್ ಫಾರ್ಮರ್‌ಗಳು, ಯುಟಿಲಿಟಿ ಬಾಕ್ಸ್ ಗಳು, ಖಾಸಗಿ ಉದ್ಯಾನಗಳು, ವಾಣಿಜ್ಯ ಮಳಿಗೆಗಳ ವಿಸ್ತರಣೆಗಳು, ರೆಸ್ಟೋರೆಂಟ್‌ಗಳ ಅಕ್ರಮ ಆವರಣಗಳು ಹಾಗೂ ವಿವಿಧ ನಿರ್ಮಾಣ ಕಾಮಗಾರಿಗಳು ಪಾದಚಾರಿಗಳ ಸಂಚಾರಕ್ಕೆ ದೊಡ್ಡ ಅಡ್ಡಿಯಾಗಿವೆ. ಇಂತಹ ಪ್ರಭಾವಿ ಅತಿಕ್ರಮಣಗಳ ವಿರುದ್ಧ ಕ್ರಮ ಕೈಗೊಳ್ಳುವಲ್ಲಿ ತೋರುವ ಉತ್ಸಾಹ ಮತ್ತು ಬಡ ವ್ಯಾಪಾರಿಗಳ ವಿರುದ್ಧ ತೋರಿಸುವ ಕಠಿಣ ಕ್ರಮಗಳು ಒಂದೇ ಮಟ್ಟದಲ್ಲಿದೆಯೇ? ಈ ಪ್ರಶ್ನೆಗೆ ಸರ್ಕಾರದ ಬಳಿ ಉತ್ತರವಿಲ್ಲ!

ಈಗಾಗಲೇ ಬೀದಿಬದಿ ವ್ಯಾಪಾರಿಗಳು ಆನ್‌ಲೈನ್ ಮಾರುಕಟ್ಟೆಗಳ ಸ್ಪರ್ಧೆ, ಬೆಲೆ ಏರಿಕೆ, ಅನಿರೀಕ್ಷಿತ ಹವಾಮಾನ ಬದಲಾವಣೆ ಹಾಗೂ ಆಡಳಿತಾತ್ಮಕ ಒತ್ತಡಗಳಿಂದ ಸಂಕಷ್ಟದಲ್ಲಿದ್ದಾರೆ. ವಿಶೇಷವಾಗಿ ಮಹಿಳಾ ವ್ಯಾಪಾರಿಗಳಿಗೆ ಮೂಲಭೂತ ಶೌಚಾಲಯ, ಕುಡಿಯುವ ನೀರು, ನೆರಳು ಸೇರಿದಂತೆ ಅಗತ್ಯ ಸೌಲಭ್ಯಗಳೂ ಇಲ್ಲ. ಇಂತಹ ಸಂದರ್ಭದಲ್ಲಿ ಯಾವುದೇ ಪುನರ್ವಸತಿ ಯೋಜನೆ ಅಥವಾ ಪರ್ಯಾಯ ವ್ಯಾಪಾರ ವಲಯ ಕಲ್ಪಿಸದೆ ತೆರವು ಕಾರ್ಯಾಚರಣೆ ನಡೆಸುವುದು ಸಾವಿರಾರು ಕುಟುಂಬಗಳ ಜೀವನೋಪಾಯವನ್ನು ಬುಡಮೇಲು ಮಾಡಿದೆ.

ಫುಟ್‌ಪಾತ್ ವಿಚಾರವಾಗಿ ಬೊಬ್ಬೆಹೊಡೆಯುತ್ತಿರುವ ಸರ್ಕಾರ, ಒಮ್ಮೆ ಬೆಂಗಳೂರಿನ ರಸ್ತೆ ಸುರಕ್ಷತೆಯ ಕಡೆಗೆ ಕಣ್ಣಾಯಿಸಬೇಕಿದೆ. ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯದ ಮಾಹಿತಿಯ ಪ್ರಕಾರ, ನಗರದಲ್ಲಿ ಪ್ರತಿ 110 ನಿಮಿಷಕ್ಕೊಮ್ಮೆ ರಸ್ತೆ ಅಪಘಾತ ಸಂಭವಿಸುತ್ತಿದೆ. ಪ್ರತಿ 10 ಗಂಟೆಗೊಮ್ಮೆ ಒಬ್ಬ ವ್ಯಕ್ತಿ ರಸ್ತೆ ಅಪಘಾತದಲ್ಲಿ ಸಾವನ್ನಪ್ಪುತ್ತಿದ್ದಾನೆ. ಒಂದು ವರ್ಷದಲ್ಲಿ 4,769 ಅಪಘಾತಗಳು ಸಂಭವಿಸಿವೆ. 894 ಮಂದಿ ಮೃತಪಟ್ಟಿದ್ದರೆ, 4,022 ಮಂದಿ ಗಾಯಗೊಂಡಿದ್ದಾರೆ. ರಸ್ತೆ ಗುಂಡಿಗಳು, ಅವೈಜ್ಞಾನಿಕ ರಸ್ತೆ ವಿನ್ಯಾಸ, ಸಿಗ್ನಲ್ ಕೊರತೆ, ಮುರಿದ ಫುಟ್‌ಪಾತ್‌ಗಳು ಹಾಗೂ ನಿರ್ವಹಣೆಯ ಲೋಪಗಳು ಈ ಅಪಘಾತಗಳಿಗೆ ಪ್ರಮುಖ ಕಾರಣ. ಇಂತಹ ಸಮಸ್ಯೆಗಳನ್ನು ಬಗೆಹರಿಸುವ ಬದಲು, ಇಡೀ ಸಮಸ್ಯೆಯ ಹೊಣೆಯನ್ನು ಬೀದಿಬದಿ ವ್ಯಾಪಾರಿಗಳ ಮೇಲೆ ಹೊರಿಸುವುದು ಸರ್ಕಾರದ ವೈಫಲ್ಯವಲ್ಲದೆ, ಮತ್ತೇನು?

ನ್ಯೂಯಾರ್ಕ್, ಬ್ಯಾಂಕಾಕ್ ಸೇರಿದಂತೆ ಹಲವು ನಗರಗಳು ಬೀದಿಬದಿ ವ್ಯಾಪಾರವನ್ನು ನಗರದ ಆರ್ಥಿಕ ಮತ್ತು ಸಾಂಸ್ಕೃತಿಕ ವ್ಯವಸ್ಥೆಯ ಭಾಗವಾಗಿ ಪರಿಗಣಿಸಿ ನಿಯಂತ್ರಿತ ವ್ಯಾಪಾರ ವಲಯಗಳನ್ನು ರೂಪಿಸಿವೆ. ಅಷ್ಟೇ ಯಾಕೆ, ಭಾರತದಲ್ಲಿಯೇ ಒಡಿಶಾದ ಭುವನೇಶ್ವರ ನಗರವು 2014ರ ಕಾಯ್ದೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಿ ಅಧಿಕೃತ ವೆಂಡಿಂಗ್ ಜೋನ್‌ಗಳನ್ನು ಅಭಿವೃದ್ಧಿಪಡಿಸಿದೆ. ದೇಶಕ್ಕೆ ಹೊಸ ಮಾದರಿ ಮುಂದಿಟ್ಟಿದೆ. ಮುಂಬೈ ಮತ್ತು ದೆಹಲಿ ಹೈಕೋರ್ಟ್‌ಗಳೂ ಟೌನ್ ವೆಂಡಿಂಗ್ ಕಮಿಟಿಗಳ ಅನುಮತಿ ಮತ್ತು ಕಾನೂನು ಪ್ರಕ್ರಿಯೆ ಇಲ್ಲದೆ ವ್ಯಾಪಾರಿಗಳನ್ನು ತೆರವುಗೊಳಿಸುವುದು ನ್ಯಾಯಸಮ್ಮತವಲ್ಲ ಎಂದು ಹಲವು ಬಾರಿ ಅಭಿಪ್ರಾಯ ವ್ಯಕ್ತಪಡಿಸಿವೆ.

ಇದೆಲ್ಲದರ ಆಚೆಗೂ, 2024ರಲ್ಲಿ ಬೀದಿಬದಿ ವ್ಯಾಪಾರಿಗಳ ಪರವಾದ ಕಾಯ್ದೆಯನ್ನು ರೂಪಿಸಿದ್ದೇ ಕಾಂಗ್ರೆಸ್ ನೇತೃತ್ವದ ಯುಪಿಎ ಸರ್ಕಾರ. 2023ರ ಕರ್ನಾಟಕ ವಿಧಾನಸಭೆ ಚುನಾವಣೆಯ ವೇಳೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಬೆಂಗಳೂರಿನ ಬೀದಿಬದಿ ವ್ಯಾಪಾರಿಗಳನ್ನು ಭೇಟಿ ಮಾಡಿದ್ದರು. ಅವರ ಹಕ್ಕುಗಳ ಪರ ನಿಲ್ಲುವ ಭರವಸೆ ನೀಡಿದ್ದರು. ಅಂತೆಯೇ, ಕಾಂಗ್ರೆಸ್ ಪಕ್ಷವು ತನ್ನ ರಾಜಕೀಯ ಇತಿಹಾಸದುದ್ದಕ್ಕೂ ಸಾಮಾಜಿಕ ನ್ಯಾಯ, ಕಲ್ಯಾಣ ರಾಜ್ಯ ಹಾಗೂ ಸಮಾಜವಾದಿ ಮೌಲ್ಯಗಳನ್ನು ತನ್ನ ಸೈದ್ಧಾಂತಿಕ ಅಡಿಪಾಯವೆಂದು ಹೇಳಿಕೊಂಡಿದೆ. ದುರ್ಬಲ ವರ್ಗಗಳು, ಕಾರ್ಮಿಕರು, ರೈತರು, ಸಣ್ಣ ವ್ಯಾಪಾರಿಗಳು ಹಾಗೂ ಶ್ರಮಿಕರ ಪರ ನಿಲ್ಲುವುದೇ ತನ್ನ ರಾಜಕೀಯ ಬದ್ಧತೆ ಎಂದು ಪ್ರತಿಪಾದಿಸುತ್ತಾ ಬಂದಿದೆ.

ಆದರೆ, ಈಗ ಅದೇ ಪಕ್ಷದ ಸರ್ಕಾರದ ಅವಧಿಯಲ್ಲಿ ವ್ಯಾಪಾರಿಗಳ ವಿರುದ್ಧ ತೆರವು ಕಾರ್ಯಾಚರಣೆಗಳು ನಡೆಯುತ್ತಿರುವುದು ಕಾಂಗ್ರೆಸ್ ರಾಜಕೀಯ ಬದ್ಧತೆ ಮತ್ತು ಆಡಳಿತಾತ್ಮಕ ನಿಲುವನ್ನು ಪ್ರಶ್ನೆಗೆ ಗುರಿಮಾಡಿದೆ. ಪರ್ಯಾಯ ವ್ಯವಸ್ಥೆ, ಪುನರ್ವಸತಿ ಅಥವಾ ಕಾನೂನುಬದ್ಧ ವೆಂಡಿಂಗ್ ವಲಯಗಳನ್ನು ಕಲ್ಪಿಸದೆ ವ್ಯಾಪಾರಿಗಳನ್ನು ತೆರವುಗೊಳಿಸುವುದು ಸಾಮಾಜಿಕ ನ್ಯಾಯದ ಪರಿಕಲ್ಪನೆಗೆ ವಿರುದ್ಧವಾದ ಧೋರಣೆಯೂ ಆಗಿದೆ.

ಸಮಾಜವಾದ ಎಂಬುದು ಕೇವಲ ರಾಜಕೀಯ ಘೋಷಣೆಯಲ್ಲ. ಅದು ರಾಜ್ಯದ ನೀತಿಗಳಲ್ಲಿ, ಆಡಳಿತದ ಆದ್ಯತೆಗಳಲ್ಲಿ ಹಾಗೂ ದುರ್ಬಲ ವರ್ಗಗಳ ಬಗ್ಗೆ ತೋರುವ ಸಂವೇದನೆಯಲ್ಲಿ ಪ್ರತಿಫಲಿಸಬೇಕು. ಸರ್ಕಾರಗಳ ನೀತಿ-ನಿರ್ಧಾರಗಳಲ್ಲಿ ಆರ್ಥಿಕವಾಗಿ ಬಲಿಷ್ಠರ ಅಕ್ರಮಗಳ ಎದುರು ಮೃದು ಧೋರಣೆ ಮತ್ತು ಬಡವರ ಜೀವನೋಪಾಯದ ವಿರುದ್ಧ ಕಠಿಣ ಕ್ರಮ ಎಂಬ ಭಾವನೆ ಮೂಡಿದರೆ, ಅಲ್ಲಿ ಸಮಾಜವಾದ ಇರುವುದಿಲ್ಲ. ಬದಲಾಗಿ, ಬಲಾಢ್ಯರ ಪರವಾದ ವಾದವಷ್ಟೇ ಉಳಿದಿರುತ್ತದೆ.

ಇಂದು ಬೆಂಗಳೂರಿಗೆ ಬೇಕಾಗಿರುವುದು ಬುಲ್ಡೋಜರ್ ರಾಜಕೀಯವಲ್ಲ; ಸಮಗ್ರ ನಗರ ಯೋಜನೆ. ಕಾಂಗ್ರೆಸ್ ತನ್ನನ್ನು ಇನ್ನೂ ಸಾಮಾಜಿಕ ನ್ಯಾಯ ಮತ್ತು ಸಮಾಜವಾದದ ಮೌಲ್ಯಗಳ ಪಕ್ಷವೆಂದು ನಂಬುವುದಾದರೆ, ಬೆಂಗಳೂರಿನ ಬೀದಿ ಬದಿ ವ್ಯಾಪಾರಿಗಳನ್ನು ಕೇವಲ ಒತ್ತುವರಿ ಎಂಬ ದೃಷ್ಟಿಯಿಂದ ನೋಡದೆ, ಜೀವನೋಪಾಯ ಎಂಬ ಮಾನವೀಯ ದೃಷ್ಟಿಕೋನದಿಂದಲೂ ಪರಿಗಣಿಸಬೇಕು. ನಗರ ಅಭಿವೃದ್ಧಿ ಮತ್ತು ಬಡವರ ಬದುಕು ಪರಸ್ಪರ ವಿರುದ್ಧವಲ್ಲ. ಅವೆರಡೂ ಸಮಾಜದ ಅವಿಭಾಜ್ಯ ಅಂಗ, ಅವುಗಳನ್ನು ಸಮಾನವಾಗಿ ನಿಭಾಯಿಸುವ ಆಡಳಿತವೇ ಪ್ರಜಾಪ್ರಭುತ್ವದ ಯಶಸ್ಸಿನ ನಿಜವಾದ ಮಾನದಂಡ ಎಂಬುದನ್ನು ಕಾಂಗ್ರೆಸ್ ಸರ್ಕಾರ ಮನಗಾಣಬೇಕು. ಪಾದಚಾರಿಗಳಿಗೆ ಅಗಲವಾದ ಫುಟ್‌ಪಾತ್‌ಗಳು, ಕಾನೂನುಬದ್ಧ ವೆಂಡಿಂಗ್ ವಲಯಗಳು, ಬೀದಿ ವ್ಯಾಪಾರಿಗಳಿಗೆ ಗುರುತಿನ ಚೀಟಿ, ಮೂಲಸೌಕರ್ಯ ಮತ್ತು ಪುನರ್ವಸತಿ ವ್ಯವಸ್ಥೆಯನ್ನು ಜಾರಿಗೆ ತರಬೇಕು. ಇವೆಲ್ಲವನ್ನೂ ಒಟ್ಟಾಗಿ ಜಾರಿಗೊಳಿಸುವ ಮಾದರಿಯೇ ಶಾಶ್ವತ ಪರಿಹಾರವಾಗಲಿದೆ. ಎಲ್ಲರನ್ನೂ ಒಳಗೊಳ್ಳಲಿದೆ!

ರಾಮಮಂದಿರ ಲೂಟಿ ತನಿಖೆ- ಬಂಧನದಿಂದ ನ ತಿಮಿಂಗಿಲಗಳು ಪಾರು!



ಅಯೋಧ್ಯೆಯ ಶ್ರೀರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್‌ನ ದೇಣಿಗೆ ಲೂಟಿ ಪ್ರಕರಣವು ದೇಶಾದ್ಯಂತ ಭಾರಿ ಚರ್ಚೆಗೆ ಗ್ರಾಸವಾಗಿದೆ. ರಾಮನ ಹೆಸರಿನಲ್ಲಿ ಭಕ್ತರು ನೀಡಿದ ಕೋಟ್ಯಂತರ ರೂಪಾಯಿ ಹಣದ ದುರುಪಯೋಗಕ್ಕೆ ಸಂಬಂಧಿಸಿದಂತೆ ಈಗಾಗಲೇ ಕೆಳಹಂತದ ಎಂಟು ಜನರನ್ನು ಬಂಧಿಸಲಾಗಿದೆ. ಆದರೂ, ಈ ಪ್ರಕರಣದಲ್ಲಿ ಅತ್ಯಂತ ಪ್ರಭಾವಿಗಳು ಮತ್ತು ಶಕ್ತಿಶಾಲಿ ಸ್ಥಾನದಲ್ಲಿದ್ದವರ ಕೈವಾಡವನ್ನು ಅಲ್ಲಗಳೆಯಲಾಗದು. ಆದರೆ, ಅಂತಹ ಪ್ರಭಾವಿಗಳು ಕಾನೂನಿನ ತನಿಖೆಯಿಂದ ದೂರ ಉಳಿದಿದ್ದಾರೆ. ಇದು ರಾಜಕೀಯ ಮತ್ತು ಸಾಮಾಜಿಕವಾಗಿ ನಾನಾ ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಸಂಘಪರಿವಾರದೊಂದಿಗೆ ನಿಕಟ ಸಂಬಂಧ ಹೊಂದಿರುವ ಮತ್ತು ಟ್ರಸ್ಟ್‌ನ ಪ್ರಮುಖ ಹುದ್ದೆಯಲ್ಲಿದ್ದ ತಿಮಿಂಗಿಲಗಳನ್ನು ರಕ್ಷಿಸಲಾಗುತ್ತಿದೆ ಎಂಬ ಅನುಮಾನವೂ ವ್ಯಕ್ತವಾಗುತ್ತಿದೆ.

ರಾಮಮಂದಿರ ಲೂಟಿ ಪ್ರಕರಣವು ಬೆಳಕಿಗೆ ಬಂದಿದ್ದ ಜೂನ್ 7ರಂದು, ಅಂದರೆ, ಬರೋಬ್ಬರಿ 1 ತಿಂಗಳು ಕಳೆದಿದೆ. ಪ್ರಕರಣವನ್ನು ಸಮಾಜವಾದಿ ಪಕ್ಷದ ಮಾಜಿ ಶಾಸಕ ಪವನ್ ಪಾಂಡೆ ಬೆಳಕಿಗೆ ತಂದಿದ್ದು, ಸುಮಾರು 7 ರಿಂದ 7.5 ಕೋಟಿ ರೂ.ಗಳಷ್ಟು ದೇಣಿಗೆ ದುರುಪಯೋಗವಾಗಿದೆ ಎಂದು ಆರೋಪಿಸಿದ್ದರು. ಆದರೆ, ಪ್ರಕರಣದ ಜಾಡು ಹಿಡಿದು ಹೋದಂತೆಲ್ಲ ಇನ್ನೂ ಭಾರೀ ಪ್ರಮಾಣದ ಹಣದ ಹಗಲು ದರೋಡೆ ನಡೆದಿರುವುದು ಜಗಜ್ಜಾಹೀರಾಗುತ್ತಿದೆ.

ಪ್ರಕರಣದ ತನಿಖೆ ನಡೆಸುತ್ತಿರುವ ಎಸ್‌ಐಟಿ, ಜೂನ್ 23ರಂದು ಪ್ರಾಥಮಿಕ ವರದಿ ಸಲ್ಲಿಸಿದೆ. ಅಂದಿನಿಂದ ಈವರೆಗೆ ಎಂಟು ಮಂದಿ ಆರೋಪಿಗಳನ್ನು ಬಂಧಿಸಿದೆ. ಬಂಧಿತರ ಪೈಕಿ ಅವಿನಾಶ್ ಶುಕ್ಲಾ, ಅನುಕಲ್ಪ್ ಮಿಶ್ರಾ, ಲವ್ ಕುಶ್ ಮಿಶ್ರಾ, ಮನೀಶ್ ಕುಮಾರ್ ಯಾದವ್, ಕರುಣೇಶ್ ಪಾಂಡೆ, ರಾಮ್ ಶಂಕರ್ ಮಿಶ್ರಾ, ಸುಭಾಷ್ ಶ್ರೀವಾಸ್ತವ ಮತ್ತು ರಾಮಾಶಂಕರ್ ಅಲಿಯಾಸ್ ಟಿನ್ನು ಯಾದವ್ ಸೇರಿದ್ದಾರೆ. ಇವರೆಲ್ಲ ದೇಣಿಗೆ ನಗದು ಮತ್ತು ಆಭರಣಗಳ ಎಣಿಕೆ ಕೆಲಸದಲ್ಲಿ ತೊಡಗಿದ್ದವರು. ಟ್ರಸ್ಟ್‌ನ ದೀನಾತಿ ಅಧೀನದಲ್ಲಿ ಕೆಲಸ ಮಾಡುತ್ತಿದ್ದವರು. ಅರ್ಥಾತ್, ಆರ್‌ಎಸ್‌ಎಸ್‌ನ ಕಾಲಾಳುಗಳು.

ರಾಮಮಂದಿರ ದೇಣಿಗೆ ಲೂಟಿಯಲ್ಲಿ ಭಾಗಿಯಾಗಿದ್ದ ಈ ಎಲ್ಲ ಕಾಲಾಳುಗಳು ತಾವೂ ಒಂದಷ್ಟು ಹಣ ಮಾಡಿಕೊಂಡಿದ್ದಾರೆ. ಮನೆ-ಕಾರು ಖರೀದಿಸಿದ್ದಾರೆ. ಈಗ ಬಂಧನಕ್ಕೊಳಗಾಗಿದ್ದಾರೆ. ತನಿಖೆ-ವಿಚಾರಣೆ ಎದುರಿಸುತ್ತಿದ್ದಾರೆ. ಆದರೆ, ಈ ಲೂಟಿಯ ಮಾಸ್ಟರ್ ಮೈಂಡ್‌ಗಳು ಇವರಲ್ಲ, ದೊಡ್ಡ ತಿಮಿಂಗಿಲಗಳು ಇವರ ಹಿಂದಿವೆ ಎಂಬುದು ಸ್ಪಷ್ಟ. ಆದರೆ, ಆ ತಿಮಿಂಗಿಲಗಳ ವಿರುದ್ಧ ಎಫ್‌ಐಆರ್ ದಾಖಲಾಗಿಲ್ಲ, ಬಂಧನ ದೂರದ ಮಾತು ಎಂಬಂತಿದೆ.

ಚಂಪತ್ ರಾಯ್, ಅನಿಲ್ ಮಿಶ್ರ, ಗೋಪಾಲ ರಾವ್ ವಿರುದ್ಧ ಏಕಿಲ್ಲ?

ರಾಮಮಂದಿರ ಆಗು-ಹೋಗು, ವ್ಯವಹಾರಗಳನ್ನು ನೋಡಿಕೊಳ್ಳುತ್ತಿದ್ದದ್ದು ರಾಮಮಂದಿರ ಟ್ರಸ್ಟ್. ಈ ಟ್ರಸ್ಟ್‌ನಲ್ಲಿದ್ದವರ ಅಣತಿ ಇಲ್ಲದೆ ರಾಮಮಂದಿರದಲ್ಲಿ ಇಂತಹದೊಂದು ಬೃಹತ್ ಲೂಟಿ ನಡೆಯಲು ಸಾಧ್ಯವೇ ಇಲ್ಲ ಎಂಬುದು ಮೇಲ್ನೋಟಕ್ಕೆ ಕಾಣುವ ಸತ್ಯ. ಆದ್ದರಿಂದ, ಪ್ರಕರಣದ ಪ್ರಮುಖ ಆರೋಪಿ ಸ್ಥಾನದಲ್ಲಿ ನಿಲ್ಲಬೇಕಾಗಿದ್ದವರು ಟ್ರಸ್ಟ್‌ನ ಪ್ರಧಾನ ಕಾರ್ಯದರ್ಶಿಯಾಗಿದ್ದ ಚಂಪತ್ ರಾಯ್, ಟ್ರಸ್ಟಿಯಾಗಿದ್ದ ಅನಿಲ್ ಮಿಶ್ರ ಹಾಗೂ ಇಂದಿಗೂ ಆಡಳಿತಾಧಿಕಾರಿಯಾಗಿರುವ ಗೋಪಾಲ ರಾವ್. ಆದರೆ, ಈ ಮೂವರ ವಿರುದ್ಧ ಈವರೆಗೆ ಯಾವುದೇ ಎಫ್‌ಐಆರ್ ದಾಖಲಾಗಿಲ್ಲ. ಬಂಧನವಿರಲಿ, ವಿಚಾರಣೆಗೂ ಇವರನ್ನು ಕರೆಯಲಾಗಿಲ್ಲ.

ಚಂಪತ್ ರಾಯ್, ಅನಿಲ್ ಮಿಶ್ರ ಹಾಗೂ ಗೋಪಾಲ ರಾವ್ ಈ ಮೂವರು ದೇಣಿಗೆ ದುರುಪಯೋಗ ಪ್ರಕರಣದೊಂದಿಗೆ ಸಂಬಂಧ ಹೊಂದಿದ್ದರೂ ಎಫ್‌ಐಆರ್‌ನಲ್ಲಿ ಇವರುಗಳನ್ನು ಹೆಸರಿಸಲಾಗಿಲ್ಲ. ಇವರ ವಿರುದ್ಧ ಎಫ್‌ಐಆರ್ ದಾಖಲಿಸಬೇಕೆಂದು ಒತ್ತಾಯಿಸಿ ಫೈಜಾಬಾದ್ ಬಾರ್ ಅಸೋಸಿಯೇಷನ್ ಕ್ರಿಮಿನಲ್ ದೂರು ಸಲ್ಲಿಸಿದೆ. ವಿಪಕ್ಷಗಳಾದ ಕಾಂಗ್ರೆಸ್, ಸಮಾಜವಾದಿ ಪಕ್ಷ ಸೇರಿದಂತೆ ಹಲವು ಪಕ್ಷಗಳು ಈ ಮೂವರನ್ನು ವಿಚಾರಣೆ ಒಳಪಡಿಸಬೇಕು. ಪ್ರಕರಣದ ಹಿಂದಿರುವ ದೊಡ್ಡ ಕೈಗಳನ್ನು ಬೆಳಕಿಗೆ ತರಬೇಕೆಂದು ಒತ್ತಾಯಿಸಿವೆ. ಆದರೂ, ಎಫ್‌ಐರ್ಆ ದಾಖಲಿಸಲಾಗಿಲ್ಲ.

ಈ ಮೂವರ ವಿರುದ್ಧ ಈವರೆಗೆ ಕ್ರಿಮಿನಲ್ ಪ್ರಕರಣ ದಾಖಲು ಮಾಡದೇ ಇರುವುದನ್ನು ಟ್ರಸ್ಟ್ ಮತ್ತು ಸಂಘಪರಿವಾರ ಸಮರ್ಥಿಸಿಕೊಳ್ಳುತ್ತಿವೆ. ''ಎಸ್‌ಐಟಿಯ ಪ್ರಾಥಮಿಕ ವರದಿಯಲ್ಲಿ ಎಂಟು ವ್ಯಕ್ತಿಗಳನ್ನು ಮಾತ್ರ ಗುರುತಿಸಲಾಗಿತ್ತು. ಅದರ ಆಧಾರದ ಮೇಲೆ ಬಂಧನಗಳು ನಡೆದಿವೆ. ಸಾರ್ವಜನಿಕವಾಗಿ ಯಾರ ಮೇಲೂ ಆರೋಪ ಹೊರಿಸುವ ಬದಲು, ಅವ್ಯವಹಾರದ ಬಗ್ಗೆ ಸಾಕ್ಷ್ಯವಿದ್ದವರು ನೇರವಾಗಿ ಅಥವಾ ಸಂಬಂಧಿತ ತನಿಖಾ ಸಂಸ್ಥೆಗೆ ಸಲ್ಲಿಸಬೇಕು'' ಎಂದು ಹೇಳಿಕೊಂಡಿವೆ.

ಆದರೆ, ವಾಸ್ತವ ಬೇರೆಯೇ ಇದೆ. ಚಂಪತ್ ರಾಯ್, ಅನಿಲ್ ಮಿಶ್ರ ಹಾಗೂ ಗೋಪಾಲ ರಾವ್ ಅವರ ವಿರುದ್ಧ ಎಫ್‌ಐಆರ್ ಸಹ ದಾಖಲಾಗದೇ ಇರುವುದು ಮತ್ತು ಅವರನ್ನು ಬಂಧಿಸದೇ ಇರುವುದರ ಹಿಂದೆ ಸಂಘ ಪರಿವಾರದ ಪ್ರಭಾವವಿದೆ. ಚಂಪತ್ ರಾಯ್ ಅವರಂತಹ ನಾಯಕರು ದಶಕಗಳ ಕಾಲ ರಾಮಮಂದಿರ ಚಳವಳಿಯ ಮುಂಚೂಣಿಯಲ್ಲಿದ್ದವರು. ಇವರ ಮೇಲೆ ಭ್ರಷ್ಟಾಚಾರದ ಕಾನೂನು ಕ್ರಮ ಜರುಗಿದರೆ ಅದು ಕೇವಲ ವ್ಯಕ್ತಿಗತ ಕಳಂಕ ಮಾತ್ರವಲ್ಲದೆ, ಇಡೀ ರಾಮಮಂದಿರ ಆಂದೋಲನ ಮತ್ತು ರಾಮಮಂದಿರ ಟ್ರಸ್ಟ್‌ನ ನೈತಿಕತೆಗೆ ದೊಡ್ಡ ಪೆಟ್ಟು ನೀಡುತ್ತದೆ.

ಜೊತೆಗೆ, ಇವರ ವಿರುದ್ಧ ಪ್ರಕರಣ ದಾಖಲಿಸುವುದು ಮತ್ತು ಬಂಧಿಸುವುದು ತಾವು ಮಹಾನ್ ದೇಶಭಕ್ತರು, ಸ್ವಯಂ ಸೇವಕರು ಎಂದು ಬಡಾಯಿಬಿಡುವ ಆರ್‌ಎಸ್‌ಎಸ್‌ನ ವರ್ಚಸ್ಸಿಗೂ, ಮುಂಬರುವ ಉತ್ತರ ಪ್ರದೇಶ ಚುನಾವಣೆಯಲ್ಲಿ ಬಿಜೆಪಿಗೂ ರಾಜಕೀಯವಾಗಿ ಭಾರೀ ಹಿನ್ನಡೆ ಉಂಟುಮಾಡುತ್ತದೆ. ಮುಂದಾಗುವ ಆಘಾತದ ಅರಿವು ಆರ್‌ಎಸ್‌ಎಸ್ ಮತ್ತು ಮೋದಿ-ಯೋಗಿ ಸರ್ಕಾರಗಳಿಗೆ ಗೊತ್ತಿದೆ.

ಆದ್ದರಿಂದಲೇ, ತನಿಖೆಯನ್ನು ಕೇವಲ ಮಧ್ಯವರ್ತಿಗಳು ಮತ್ತು ಸಣ್ಣಪುಟ್ಟ ಕೊಂಡಿಗಳ ಬಂಧನಕ್ಕೆ ಸೀಮಿತಗೊಳಿಸಿ, ಪ್ರಮುಖ ತಿಮಿಂಗಿಲಗಳನ್ನು ಕಾನೂನಾತ್ಮಕ ಕಡತಗಳಿಂದ ದೂರವಿಡುವ ಮೂಲಕ ವಿವಾದದ ತೀವ್ರತೆಯನ್ನು ತಗ್ಗಿಸುವ ತಂತ್ರ ಹೆಣೆಯಲಾಗಿದೆ.

ಕೃಷ್ಣಮೋಹನ್ ನೇಮಕ: ಸಂಚೋ ಸಹಜ ಬೆಳವಣಿಗೆಯೋ?

ಜುಲೈ 6ರಂದು ನಡೆದ ಟ್ರಸ್ಟ್ ಸಭೆಯಲ್ಲಿ ಚಂಪತ್ ರಾಯ್ ಮತ್ತು ಅನಿಲ್ ಮಿಶ್ರ ಅವರ ರಾಜೀನಾಮೆಗಳನ್ನು ಅಂಗೀಕರಿಲಾಗಿದೆ. ಗೋಪಾಲ ನಾಗರ್ಕೋಟೆ ಅವರನ್ನು ವಿಶೇಷ ಆಹ್ವಾನಿತ ಸದಸ್ಯರ ಪಟ್ಟಿಯಿಂದ ತೆಗೆದುಹಾಕಲಾಗಿದೆ. ಇದೇ ಸಭೆಯಲ್ಲಿ, ಮುಂದಿನ ಹೊಸ ನೇಮಕಾತಿ ಆಗುವವರೆಗೆ ಪ್ರಧಾನ ಕಾರ್ಯದರ್ಶಿ ಜವಾಬ್ದಾರಿಯನ್ನು ನಿರ್ವಹಿಸಲು ಟ್ರಸ್ಟಿ ಕೃಷ್ಣಮೋಹನ್ ಅವರನ್ನು ನೇಮಿಸಲಾಗಿದೆ.

ನಿವೃತ್ತ ಐಎಫ್‌ಎಸ್ ಅಧಿಕಾರಿಯಾಗಿರುವ ಕೃಷ್ಣಮೋಹನ್, ಆರ್‌ಎಸ್‌ಎಸ್‌ನ ಹಿರಿಯ ಸದಸ್ಯ. ದಲಿತ ಸಮುದಾಯಕ್ಕೆ ಸೇರಿದಾತ. ದೇಣಿಗೆ ಹಗರಣ ಬೆಳಕಿಗೆ ಬಂದಿರುವ ಈ ಸೂಕ್ಷ್ಮ ಸಂದರ್ಭದಲ್ಲಿ, ಕೃಷ್ಣಮೋಹನ್ ಅವರನ್ನು ಪ್ರಧಾನ ಕಾರ್ಯದರ್ಶಿಯಾಗಿ ನೇಮಿಸಿರುವುದು ಕೂಡ ಸಂದೇಹದಿಂದಲೇ ನೋಡುವಂತೆ ಮಾಡಿದೆ.

ರಾಮಮಂದಿರದ ಹಗರಣದ ಚರ್ಚೆ ನಡೆಯುತ್ತಿರುವಾಗ, ಟ್ರಸ್ಟ್‌ನಲ್ಲಿರುವ ಮೇಲ್ಮಟ್ಟದ ಆರ್‌ಎಸ್‌ಎಸ್‌ನ ಪ್ರಭಾವಿಗಳ ವಿರುದ್ಧ ಕ್ರಮ ಕೈಗೊಳ್ಳದೆ, ಸಾಮಾಜಿಕ ನ್ಯಾಯದ ಸಂಕೇತವಾಗಿ ದಲಿತ ವ್ಯಕ್ತಿಯನ್ನು ಮುಂಚೂಣಿಗೆ ತರಲಾಗಿದೆ. ಇದು, ಸಾರ್ವಜನಿಕ ಆಕ್ರೋಶವನ್ನು ಬೇರೆಡೆಗೆ ತಿರುಗಿಸುವ ಮತ್ತು ಟ್ರಸ್ಟ್‌ನ ವರ್ಚಸ್ಸು ಉಳಿಸುವ ಪ್ರಯತ್ನ ಎಂದೇ ನೋಡಲಾಗುತ್ತಿದೆ.

ರಾಮಮಂದಿರ ಟ್ರಸ್ಟ್‌ನ ಹಗರಣ ಬೆಳಕಿಗೆ ಬಂದ ಬಳಿಕ ನಡೆಯುತ್ತಿರುವ ವಿದ್ಯಮಾನಗಳು ವ್ಯವಸ್ಥಿತವಾದ ಡ್ಯಾಮೇಜ್ ಕಂಟ್ರೋಲ್ ರಾಜಕಾರಣದಂತೆ ಕಾಣುತ್ತಿವೆ.

ಅಂದು ಎಸ್‌ಐಆರ್ ಸಮರ್ಥನೆ, ಇಂದು ತಡೆಗೆ ಆಗ್ರಹ: ನಿಷ್ಫಲವಾಯಿತೇ ಬಿಜೆಪಿ ತಂತ್ರಗಾರಿಕೆ?

ರಾಜ್ಯದಲ್ಲಿ ಒಂದು ಕಡೆ ಅತಿಯಾದ ಮಳೆ, ಮತ್ತೊಂದು ಕಡೆ ರಣ ಬರದಿಂದ ಜನರು ನೆಂದು, ಬೆಂದು ಬಳಲುತ್ತಿರುವಾಗ ಈ ಜನರ ಸಂಕಷ್ಟಗಳಿಗೆ ಕಣ್ಣು ಕಿವಿಯಾಗಿ ಹೋರಾಡಬೇಕಾದ, ಸರ್ಕಾರವನ್ನು ಎಚ್ಚರಿಸಬೇಕಾದ ಬಿಜೆಪಿ, ಜೆಡಿಎಸ್ ಪಕ್ಷಗಳು, ಅದರ ನಾಯಕರುಗಳು ಓಟಿನ ರಾಜಕಾರಣದಲ್ಲಿ ನಿರತರಾಗಿದ್ದಾರೆ.

ಪಶ್ಚಿಮ ಬಂಗಾಳದಲ್ಲಿ ಎಸ್‌ಐಆರ್ ಮೂಲಕ ಅಧಿಕಾರ ವಶಪಡಿಕೊಳ್ಳುವಲ್ಲಿ ಯಶಸ್ವಿಯಾಗಿರುವ ಬಿಜೆಪಿ ಕರ್ನಾಟದಲ್ಲಿ ಇದೀಗ ನಡೆಯುತ್ತಿರುವ ಎಸ್‌ಐಆರ್‌ನಿಂದಾಗಿ ತೀವ್ರ ಕಂಗಾಲಾಗದಂತೆ ಕಂಡು ಬರುತ್ತಿದೆ.

ದೇಶದಲ್ಲಿ ವಿಶೇಷ ಮತದಾರರಪಟ್ಟಿ ಪರಿಷ್ಕರಣೆ (ಎಸ್‌ಐಆ)ರ್ ನೆಪದಲ್ಲಿ ತನ್ನ ಮತ ಬ್ಯಾಂಕನ್ನು ಭದ್ರಪಡಿಸಿಕೊಳ್ಳುವ ಮತ್ತು ವಿಪಕ್ಷಗಳ ಮತ ಸಮುದಾಯಗಳೆನ್ನುವ ಮತದಾರರನ್ನು ಮತದಾನದ ಹಕ್ಕಿನಿಂದಲೇ ಹೊರಗಟ್ಟುವ ಹೊಸ ರಾಜಕೀಯ ತಂತ್ರವನ್ನು ಬಳಸಿಕೊಳ್ಳಲು ಮುಂದಾಗಿರುವ ಬಿಜೆಪಿ ಇದುವರೆಗೂ ಕೆಲವು ರಾಜ್ಯಗಳಲ್ಲಿ ನಡೆಸಿರುವ ಈ ಪ್ರಕ್ರಿಯೆಯಿಂದ ಆರು ಕೋಟಿ ಜನರನ್ನು ಮತದಾರರ ಪಟ್ಟಿಯಿಂದ ಹೊರಗಿಟ್ಟಿದೆ ಎಂಬ ಗಂಭೀರ ಆರೋಪಗಳನ್ನು ಎದುರಿಸುತ್ತಿದೆ.

ಪಶ್ಚಿಮ ಬಂಗಾಳದಲ್ಲಿ ಅಕ್ರಮ ಬಾಂಗ್ಲಾ ವಲಸಿಗರ ಹೆಸರಲ್ಲಿ 92ಲಕ್ಷ ಮತದಾರರನ್ನು ಮತದಾನದ ಹಕ್ಕಿನಿಂದ ದೂರಮಾಡಿದ್ದು, ಇದರ ಪರಿಣಾಮ ಅಲ್ಲಿ ಅಧಿಕಾರ ಚುಕ್ಕಾಣಿ ಹಿಡಿಯುವಲ್ಲಿ ಬಿಜೆಪಿ ಸಫಲವಾಗಿದೆ ಎಂಬ ವಿಶ್ಲೇಷಣೆಗಳು ಕೇಳಿಬರುತ್ತಿದೆ.

ಆದರೆ, ಕೇರಳದಲ್ಲಿ ಈ ಪ್ರಯೋಗವನ್ನು ಕಾಂಗ್ರೆಸ್, ಎಡಪಂಥೀಯ ಪಕ್ಷಗಳು ವಿಫಲಗೊಳಿಸಿದ್ದು ಕೇರಳದಲ್ಲಿ ಅಧಿಕಾರದ ಕಡೆಗೆ ಹೆಜ್ಜೆ ಹಾಕುವ ಬಿಜೆಪಿಯ ಆಟ ನಡೆಯದಂತೆ ನೋಡಿಕೊಂಡಿವೆ. ಕೇರಳದಲ್ಲಿ ನಡೆದ ಎಸ್‌ಐರ್ಆ ಪ್ರಕ್ರಿಯೆ ಬಿಜೆಪಿಯ ರಾಜಕೀಯ ಮೈದಾನವಾಗದಂತೆ ಬಿಜೆಪಿಯೇತರ ಪಕ್ಷಗಳು (ಎನ್‌ಡಿಎ ಮಿತ್ರಪಕ್ಷಗಳು ಹೊರತುಪಡಿಸಿ) ಕಣ್ಗಾವಲು ನಡೆಸಿದ್ದವು.

ಈಗ ಕರ್ನಾಟಕದಲ್ಲೂ ಕೂಡ ಕೇರಳ ಮಾದರಿಯಲ್ಲಿಯೇ ಎಸ್‌ಐಆರ್ ಪ್ರಕ್ರಿಯೆಯನ್ನು ಕಾಂಗ್ರೆಸ್ ನಿಗಾವಹಿಸಿದ್ದು ಇದು ಬಿಜೆಪಿ ಮತ್ತು ಮಿತ್ರ ಪಕ್ಷ ಜೆಡಿಎಸ್‌ಗೆ ನುಂಗಲಾರದ ತುತ್ತಾಗಿದೆ.

ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರದಲ್ಲಿದ್ದು, ಇಡೀ ಸರ್ಕಾರ ಮತ್ತು ಪಕ್ಷ ಎಸ್‌ಐಆರ್‌ನಲ್ಲಿ ಬಿಜೆಪಿ ಉದ್ದೇಶಿತ ''ಕೈವಾಡ'' ನಡೆಯದಂತೆ ಕಣ್ಗಾವಲು ನಡೆಸುತ್ತಿವೆ. ಈ ಪ್ರಕ್ರಿಯೆಯಲ್ಲಿ ತೊಡಗಿರುವ ಸರ್ಕಾರಿ ಅಧಿಕಾರಿಗಳು ಎಲ್ಲಿಯೂ ಬಿಜೆಪಿ ಒತ್ತಡಕ್ಕೆ ಒಳಗಾಗದಂತೆ ಕಟ್ಟಪ್ಪಣೆ ಹೊರಡಿಸಿದೆ.

ಎಸ್‌ಐಆರ್‌ನ್ನು ಆರಂಭದಿಂದಲೂ ಸಮರ್ಥಿಸಿಕೊಳ್ಳುತ್ತಲೇ, ಚುನಾವಣಾ ಆಯೋಗದ ವಕ್ತಾರರಂತೆ ವರ್ತಿಸುತ್ತಾ ಬಂದಿರುವ ಬಿಜೆಪಿ ಇದೇ ಮೊದಲ ಬಾರಿಗೆ ಕರ್ನಾಟಕದಲ್ಲಿ ಎಸ್‌ಐಆರ್‌ನಲ್ಲಿ ಸರಿಯಿಲ್ಲ, ಅದನ್ನು ತಾತ್ಕಾಲಿಕವಾಗಿ ತಡೆ ಹಿಡಿಯಬೇಕು ಎಂದು ಆಗ್ರಹಿಸತೊಡಗಿದೆ.

ರಾಜ್ಯದಲ್ಲಿ ನಡೆಯುತ್ತಿರುವ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆಯಿಂದಾಗಿ 2028ಕ್ಕೆ ಅಧಿಕಾರ ಹಿಡಿಯುವ ಲೆಕ್ಕಾಚಾರದಲ್ಲಿದ್ದ ಬಿಜೆಪಿ ಸ್ವತಃ ಈ ಪ್ರಕ್ರಿಯೆಯನ್ನು ತಡೆ ಹಿಡಿಯುವಂತೆ ಒತ್ತಾಯಿಸುತ್ತಿರುವುದು ಬಿಜೆಪಿಯ ಕಳವಳವನ್ನು ಕಾಣಿಸುತ್ತಿದೆ.

ರಾಜ್ಯದಲ್ಲಿನ ಆಡಳಿತಾರೂಢ ಕಾಂಗ್ರೆಸ್ ಎಸ್‌ಐಆರ್ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ನಿಗಾವಹಿಸಿದೆ. ಚುನಾವಣಾ ಆಯೋಗದ ಮೂಲಕ ಅಕ್ರಮ ಬಾಂಗ್ಲಾ ವಲಸಿಗರ ಹೆಸರಲ್ಲಿ ಅಲ್ಪಸಂಖ್ಯಾತರ ಮತಗಳನ್ನು ಮತ್ತು ಬಿಜೆಪಿಯೇತರ ರಾಜಕೀಯ ಪಕ್ಷಗಳ ಮತಬ್ಯಾಂಕ್‌ಗಳನ್ನು ಛಿದ್ರಗೊಳಿಸುವ ಬಿಜೆಪಿಯ ಯಾವ ಕುತಂತ್ರಗಳಿಗೂ ಅವಕಾಶವಿಲ್ಲದಂತೆ ಬಿಜೆಪಿಯನ್ನು ಕಾಂಗ್ರೆಸ್ ಕಟ್ಟಿ ಹಾಕಿದೆ ಎನ್ನಬಹುದು.

ಕರ್ನಾಟಕದಲ್ಲಿ ಎಸ್‌ಐಆರ್ ಬಗ್ಗೆ ಕೇವಲ ಕಾಂಗ್ರೆಸ್ ಪಕ್ಷವಲ್ಲದೆ ಜಾಗೃತ ಕರ್ನಾಟಕ ಸೇರಿದಂತೆ ಅನೇಕ ಪ್ರಗತಿಪರ ಸಂಘಟನೆಗಳು, ವ್ಯಕ್ತಿಗಳು ಮತದಾರರ ಪಟ್ಟಿಯ ಪರಿಷ್ಕರಣೆ ಸಂಬಂಧಿಸಿದಂತೆ ಮತದಾರರು ವಹಿಸಬೇಕಾದ ಎಚ್ಚರ ಮತ್ತು ಹೊಣೆಗಾರಿಕೆ ಬಗ್ಗೆ ಸಾಮಾಜಿಕ ಜಾಲತಾಣಗಳ ಮೂಲಕ ನಿರಂತರವಾಗಿ ಅರಿವು ಮೂಡಿಸುತ್ತಿದ್ದು ಇದು ಕಾಂಗ್ರೆಸ್‌ಗೆ ಫಲಪ್ರದವೂ, ಬಿಜೆಪಿಯ ಉದ್ದೇಶಕ್ಕೆ ನಿಷ್ಫಲವೂ ಆಗಿ ಪರಿಣಮಿಸುತ್ತಿದೆ.ತಮ್ಮ ಮತಗಳು ಕೈಬಿಟ್ಟು ಹೋಗುವ ಭೀತಿಯಲ್ಲಿರುವ ಅಲ್ಪಸಂಖ್ಯಾತರಲ್ಲಿ ಎಸ್‌ಐಆರ್ ಬಗ್ಗೆ ಜಾಗೃತಿ ಮೂಡಿಸುವಲ್ಲಿ ಕಾಂಗ್ರೆಸ್ ಮತ್ತು ಸಾಮಾಜಿಕ ಸಂಘಟನೆಗಳು ಯಶಸ್ವಿಯಾಗಿವೆ. ಈ ಕಾರಣದಿಂದಾಗಿಯೇ ಅಲ್ಪಸಂಖ್ಯಾತ ಸಮುದಾಯವು ಸಾಮೂಹಿಕವಾಗಿ ಎಸ್‌ಐಆರ್ ಅರ್ಜಿಗಳನ್ನು ತುಂಬುವಲ್ಲಿ ನಿರತವಾಗಿವೆ.

ಕೇವಲ ಅಲ್ಪಸಂಖ್ಯಾತರಷ್ಟೇ ಅಲ್ಲದೆ ದಲಿತರು ಕೂಡ ಸಾಮೂಹಿಕವಾಗಿ ಈ ಪ್ರಕ್ರಿಯೆಯಲ್ಲಿ ತೊಡಗಿದ್ದಾರೆ. ಸ್ಲಂಗಳಿಗೆ ಬಿಎಲ್‌ಒಗಳು ಹೋಗುವುದಿಲ್ಲ, ಎಲ್ಲರಿಗೂ ಅರ್ಜಿ ತುಂಬುವಷ್ಟು ಅರಿವು ಇಲ್ಲದಿರುವುದರಿಂದ ಸಮುದಾಯ ಭವನ, ಮಸೀದಿ, ದೊಡ್ಡ ಸಭಾಂಗಣಗಳಲ್ಲಿ ಸಾಮೂಹಿಕವಾಗಿ ಎಸ್‌ಐಆರ್ ಅರ್ಜಿಗಳನ್ನು ತುಂಬಲು ಸಹಕರಿಸಲಾಗುತ್ತಿದೆ. ಇದರಲ್ಲಿ ತಪ್ಪೇನಿದೆ ಎಂದು ಪ್ರದೇಶ ಕಾಂಗ್ರೆಸ್ ಪಕ್ಷದ ಅಧ್ಯಕ್ಷ ಬಿ ಕೆ ಹರಿಪ್ರಸಾದ್ ನೀಡಿರುವ ಹೇಳಿಕೆ ಕಾಂಗ್ರೆಸ್ ನಿಭಾಯಿಸುತ್ತಿರುವ ರಾಜಕೀಯ ಜವಾಬ್ದಾರಿಯನ್ನು ತೋರಿಸುತ್ತಿದೆ. ಇದು ಬಿಜೆಪಿಗೆ ಕೊಟ್ಟ ದೊಡ್ಡ ಪೆಟ್ಟು ಕೂಡ.

ಕರ್ನಾಟಕದಲ್ಲಿ ಕಾಂಗ್ರೆಸ್ ಎಸ್‌ಐಆರ್‌ನಲ್ಲಿ ಹಸ್ತಕ್ಷೇಪ ಮಾಡುತ್ತಿದೆ ಎಂದು ಏನೆಲ್ಲಾ ಆರೋಪ ಮಾಡುತ್ತಿರುವ ಬಿಜೆಪಿ ಪಶ್ಚಿಮ ಬಂಗಾಳದಲ್ಲಿ, ತನ್ನದೇ ಆಡಳಿತವಿರುವ ರಾಜ್ಯಗಳಲ್ಲಿ ಅದನ್ನೇ ಮಾಡಿತ್ತು ಎಂಬುದು ಇಷ್ಟು ಬೇಗ ಮರೆತು ಹೋಯಿತೆ?!

ರಾಜ್ಯದಲ್ಲಿ ಎಸ್‌ಐಆರ್ ಪ್ರಕ್ರಿಯೆ ತಾವು ಅಂದುಕೊಂಡಂತೆ ನಡೆಸುವಲ್ಲಿ ಬಿಜೆಪಿಗೆ ಅವಕಾಶ ಸಿಗದಂತೆ ಒಂದು ಹಂತದಲ್ಲಿ ರಾಜ್ಯ ಕಾಂಗ್ರೆಸ್ ಸರ್ಕಾರ ದಿಗ್ಬಂಧನ ಹೇರಿಬಿಟ್ಟಿದೆ. ಇದರಿಂದ ಕಂಗಾಲಾಗಿರುವ ಬಿಜೆಪಿ, ಜೆಡಿಎಸ್ ದೆಹಲಿಯಲ್ಲಿ ಮುಖ್ಯ ಚುನಾವಣಾಧಿಕಾರಿಗಳ ಮುಂದೆ ಅಹವಾಲು ಸಲ್ಲಿಸಿ ಕರ್ನಾಟಕದಲ್ಲಿ ಎಸ್‌ಐಆರ್ ಅನ್ನು ತಾತ್ಕಾಲಿಕವಾಗಿ ತಡೆಹಿಡಿಯುವಂತೆ ಅಲವತ್ತುಕೊಂಡಿವೆ.

ಕೇಂದ್ರ ಸಚಿವರಾದ ಪ್ರಲ್ಹಾದ್ ಜೋಶಿ, ಶೋಭಾ ಕರಂದ್ಲಾಜೆ, ಹೆಚ್ ಡಿ ಕುಮಾರಸ್ವಾಮಿ ಅವರುಗಳೇ ಖುದ್ದಾಗಿ ಮುಖ್ಯ ಚುನಾವಣಾಧಿಕಾರಿಗಳ ಕಚೇರಿಯ ಬಾಗಿಲು ಬಡಿದ್ದಾರೆ. ತಮ್ಮ ಆತಂಕವನ್ನು ಅರುಹಿಕೊಂಡಿದ್ದಾರೆ. ಬಿಜೆಪಿ, ಜೆಡಿಎಸ್ ನಾಯಕರುಗಳು ಬೀದಿಯಲ್ಲಿ ನಿಂತು ಬಾಯಿ ಬಡಿದುಕೊಳ್ಳುತ್ತಿದ್ದಾರೆ.

ತಾವೇ ತಮ್ಮ ರಾಜಕೀಯ ಏಳಿಗೆಗೆ ಕಂಡುಕೊಂಡ ತಂತ್ರಗಾರಿಕೆ ಈಗ ತಮಗೆ ಮುಳುವಾಗುತ್ತಿರುವುದರಿಂದ ರಾಜ್ಯದಲ್ಲಿ ದಿಕ್ಕೆಟ್ಟಿರುವ ಬಿಜೆಪಿ ಮತ್ತು ಜೆಡಿಎಸ್ ಚುನಾವಣಾಧಿಕಾರಿಗಳಿಗೆ ದೂರು ನೀಡುತ್ತಿವೆ. ಇದೊಂದು ವ್ಯಂಗ್ಯವೇ ಸರಿ.

ರಾಜ್ಯದಲ್ಲಿ ಒಂದು ಕಡೆ ಅತಿಯಾದ ಮಳೆ, ಮತ್ತೊಂದು ಕಡೆ ರಣಬರದಿಂದ ಜನರು ನೆಂದು, ಬೆಂದು ಬಳಲುತ್ತಿರುವಾಗ ಈ ಜನರ ಸಂಕಷ್ಟಗಳಿಗೆ ಕಣ್ಣು ಕಿವಿಯಾಗಿ ಹೋರಾಡಬೇಕಾದ, ಸರ್ಕಾರವನ್ನು ಎಚ್ಚರಿಸಬೇಕಾದ ಬಿಜೆಪಿ, ಜೆಡಿಎಸ್ ಪಕ್ಷಗಳು, ಅದರ ನಾಯಕರುಗಳು ಓಟಿನ ರಾಜಕಾರಣದಲ್ಲಿ ನಿರತರಾಗಿದ್ದಾರೆ.

ನಾಯಕತ್ವದ ಕೊರತೆ, ಗುಂಪುಗಾರಿಕೆ, ಒಳಜಗಳ, ಹೊಂದಾಣಿಕೆ ರಾಜಕಾರಣದ ಅಪನಂಬಿಕೆಗಳಿಂದ ಹೈರಾಣಾಗಿರುವ ಬಿಜೆಪಿ ಎಸ್‌ಐಆರ್ ನೆಪದಲ್ಲಿ ಬೀದಿಗೆ ಬಂದಿದೆ.

ರಾಜ್ಯದಲ್ಲಿ ಅಕ್ರಮ ವಲಸಿಗರನ್ನು ಮತದಾರರ ಪಟ್ಟಿಗೆ ಸೇರಿಸುವ ಹುನ್ನಾರ ನಡೆದಿದೆ, ಅಕ್ರಮ ನಡೆದಿದೆ ಎನ್ನುವ ಕೇಂದ್ರ ಸಚಿವರಾದ ಪ್ರಲ್ಹಾದ್ ಜೋಶಿ, ಹೆಚ್ ಡಿ ಕುಮಾರಸ್ವಾಮಿ, ಹೆಸರಿಗಷ್ಟೇ ಇರುವ ವಿಪಕ್ಷ ನಾಯಕ ಆರ್ ಅಶೋಕ್, ರಾಮನಗರ ಮುಂದೊಂದು ದಿನ ರಹೀಮ್ ನಗರ ಆಗುತ್ತದೆ ಎನ್ನುವ ಬಾಲ ರಾಜಕಾರಣಿ ನಿಖಿಲ್ ಕುಮಾರಸ್ವಾಮಿಯ ಹೇಳಿಕೆಗಳಲ್ಲಿ ಯಾವ ಜನಪರ ರಾಜಕಾರಣವೂ ಅಡಗಿಲ್ಲ ಎಂಬುದು ಸ್ಪಷ್ಟವಾಗಿದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR